ಸಂಪುಟ: 13 Volume ಸಂಚಿಕೆ: 264 Issue ಪುಟಗಳು 08 Pages ಶನಿವಾರ 06 ಡಿಸೆಂಬರ್ 2025 ₹6 PRGINO.120927(RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಎಲ್ಲಾ ಆಸೆಗಳಿಗೂ, ಎಲ್ಲಾ ಬಗೆಯ ದುಃಖಗಳಿಗೂ ಮನದ ಕನೆಯೇ ಮೂಲ ಕಾರಣ. ಆಸೆಯನ್ನು, ಬಯಕೆಗಳನ್ನು ಹತೋಟಿಯಲ್ಲಿ ಇಟ್ಟುಕೊಂಡರೆ ಜೀವನವೇ ಸುಖಮಯ.

–ಭಗವಾನ್ ಗೌತಮ ಬುದ್ಧ

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಬೀದಿ ನಾಯಿ ಉಪಟಳ ಕಡಿವಾಣಕ್ಕೆ ಕ್ರಮ 6

ಸಂಚಾರಿ ಕಲಾಜಾಥಾ ಪ್ರಚಾರಕ್ಕೆ ಚಾಲನೆ 7

ಹಳ್ಳ ಹಿಡಿದ ಕೊಂಗಳಿ ಏತನೀರಾವರಿ 8

## ಬೀದರ್ ಜಿಲ್ಲಾ ರೈತರ ಖಾತೆಗೆ ವಿಮೆಹಣ

**ಬೀದರ್:** ಸಂಸದ ಶ್ರೀ ಸಾಗರ ಖಂಡ್ರೆ ಅವರ ಬಲವಾದ ಪ್ರಯತ್ನಗಳು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರ ನಿರಂತರ ಒತ್ತಡದ ಫಲವಾಗಿ, ಬೀದರ ಜಿಲ್ಲೆಯ ರೈತರ ಖಾತೆಗಳಿಗೆ ಮೊದಲ ಬಾರಿಗೆ ಬೆಳೆ ವಿಮೆ ಪರಿಹಾರದ ಮೊತ್ತ ಜಮಾ ಆಗಲು ಪ್ರಾರಂಭವಾಗಿದೆ.



ರೈತರ ಹಿತಕ್ಕಾಗಿ ಇನ್ಸುರೆನ್ಸ್ ಕಂಪನಿಯ ಮೇಲೆ ನಿರಂತರ ಒತ್ತಡ ಹೇರಿಸಿ, ಪರಿಹಾರ ಬಿಡುಗಡೆ ಆಗಲು ಶ್ರಮಿಸಿದ ನಾಯಕರಾದ ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಈಶ್ವರ ಖಂಡ್ರೆ ಹಾಗೂ ಸಂಸದ ಶ್ರೀ ಸಾಗರ ಖಂಡ್ರೆ ಅವರಿಗೆ ಬೀದರ ಜಿಲ್ಲೆಯ ರೈತರ ಪರವಾಗಿ ಹೃತ್ಪೂರ್ವಕ ಧನ್ಯವಾದಗಳು. ಮಿಡ್ ಸೀಸನ್ ಅಡ್ವರ್ಸಿಟಿ ಯೋಜನೆಯಡಿ ಬೀದರ ಜಿಲ್ಲೆಯ ತೊಗರಿ ಬೆಳೆ ರೈತರಿಗೆ ಮೊದಲ ಹಂತದ 25% ಕ್ಲೈಮ್ ಮೊತ್ತವಾಗಿ ₹40 ಕೋಟಿಗಳ ಬೆಳೆ ವಿಮೆ ಪರಿಹಾರ ಬಿಡುಗಡೆ ಆಗಿದೆ.



ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ನೂತನ ಕೇಂದ್ರ ಕಚೇರಿಯನ್ನು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಬೆಂಗಳೂರಿನ ಗಾಂಧಿನಗರದಲ್ಲಿ ಶುಕ್ರವಾರ ಉದ್ಘಾಟನೆ ಮಾಡಿದರು. ಬೃಹತ್ ಕೈಗಾರಿಕೆ ಸಚಿವ ಎಂ ಬಿ ಪಾಟೀಲ್, ರಾಜ್ಯ ಆಡಳಿತ ಸುಧಾರಣೆ ಆಯೋಗದ ಅಧ್ಯಕ್ಷ, ಮಾಜಿ ಸಚಿವ ಆರ್ ವಿ ದೇಶಪಾಂಡೆ ಜತೆಗಿದ್ದರು.

## ದಾನೇಶ್ವರ ಸ್ವಾಮೀಜಿ ಲಿಂಗೈಕ್ಯ

**ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆ ರಬಕವಿಬನಹಟ್ಟಿ ನಗರದ ಬಂಡಿಗಣಿ ಮಠದ ದಾಸೋಹ ಚಕ್ರವರ್ತಿ ದಾನೇಶ್ವರ ಸ್ವಾಮೀಜಿ ಲಿಂಗೈಕ್ಯರಾಗಿದ್ದಾರೆ. 75 ವರ್ಷದ ದಾನೇಶ್ವರ ಸ್ವಾಮೀಜಿ ಸಕ್ಕರೆ ಕಾಯಿಲೆಯಿಂದ ಬಳಲುತ್ತಿದ್ದು ಅವರನ್ನು ನಾಲ್ಕು ದಿನಗಳ ಹಿಂದೆ ಬೆಳಗಾವಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದ–ರೆ ಚಿಕಿತ್ಸೆ ಫಲಕಾರಿಯಾಗದೇ ಇಂದು ನಿಧನರಾಗಿದ್ದಾರೆ. ಶ್ರೀಗಳಿಗೆ ವೆಂಟಿಲೇಟರ್ ನಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಸ್ವಾಮೀಜಿಯ ನಿಧನದ ಸುದ್ದಿ ಲಕ್ಷಾಂತರ ಭಕ್ತರು ಶೋಕ ಸಾಗರದಲ್ಲಿ ಮುಳುಗಿದ್ದಾರೆ. ದಾಸೋಹದ ಮೂಲಕವೇ ಹೆಸರುವಾಸಿಯಾಗಿದ್ದ ಶ್ರೀಗಳು ಇತ್ತೀಚೆಗೆ ಬಂಡಿಗಣಿಯಲ್ಲಿ ಸರ್ವಧರ್ಮ ಸಮಾವೇಶವನ್ನು ಆಯೋಜಿಸಿದ್ದರು.



## ಸಕ್ಕರೆ ಕನಿಷ್ಠ ಮಾರಾಟ ಬೆಲೆ ಹೆಚ್ಚಿಸಿ

**ನವದೆಹಲಿ:** ಕಬ್ಬು ಬೆಳೆಗಾರರು ಮತ್ತು ಕಾರ್ಖಾನೆ ಮಾಲೀಕರಿಗೆ ಅನುಕೂಲವಾಗುವಂತೆ ಕಬ್ಬಿನ ರಿಕವರಿ ರೇಟ್ ಅನ್ನು ಶೇ 10.25 ರಿಂದ ಶೇ 9.5ಕ್ಕೆ ಇಳಿಸಬೇಕು ಮತ್ತು ಸಕ್ಕರೆಯ ಕನಿಷ್ಠ ಮಾರಾಟ ಬೆಲೆಯನ್ನು ಹೆಚ್ಚಿಸಬೇಕು ಎಂದು ಬಿಜೆಪಿ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ರಾಜ್ಯಸಭೆಯಲ್ಲಿ ಶೂನ್ಯ ವೇಳೆಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದ ಕಡಾಡಿ, ಕರ್ನಾಟಕದಲ್ಲಿ ಕಬ್ಬಿನ ರಿಕವರಿ ದರವು ಶೇ 9.5 ರಷ್ಟಿದ್ದು, ಅದನ್ನು ಆ ಮಟ್ಟದಲ್ಲಿ ಕಾಯ್ದುಕೊಳ್ಳುವುದು ಅಗತ್ಯವಾಗಿದೆ. ಕಬ್ಬಿನ ನ್ಯಾಯಯುತ ಮತ್ತು ಲಾಭದಾಯಕ ಬೆಲೆ



(FRP) ಅನ್ನು ಶೇ 10.25ರ ಹೆಚ್ಚಿನ ರಿಕವರಿ ದರದಲ್ಲಿ ನಿಗದಿಪಡಿಸಲಾಗಿದೆ. ಕೊಯ್ಲು ಮತ್ತು ಸಾಗಿಗೆ ವೆಚ್ಚವನ್ನು ಗಣನೆಗೆ ತೆಗೆದುಕೊಳ್ಳದೆ ಈಖಿಕ ಅನ್ನು ನಿಗದಿಪಡಿಸಬೇಕೆಂದು ಒತ್ತಾಯಿಸಿದ್ದಾರೆ.

## ಹಸ್ತಪ್ರತಿಗಳ ರಕ್ಷಣೆಗೆ ಯೋಜನೆ: ಎಚ್ಕೆ

**ಬೆಂಗಳೂರು:** ರಾಜ್ಯದಲ್ಲಿ ಹಸ್ತಪ್ರತಿಗಳು ಆಸ್ತಿಯಾಗಿರುವುದರಿಂದ ಅವುಗಳನ್ನು ರಕ್ಷಿಸಲು ಹೊಸ ಯೋಜನೆ ರೂಪಿಸುವ ಮತ್ತು ಕಠಿಣ ಕಾನೂನುಗಳನ್ನು ತರುವ ಅಗತ್ಯವಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮತ್ತು ಪ್ರವಾಸೋದ್ಯಮ ಸಚಿವ ಎಚ್ಕೆ ಪಾಟೀಲ್ ಹೇಳಿದ್ದಾರೆ. ಪುರಾತತ್ವ, ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಆಯೋಜಿಸಿದ್ದ 'ಹಸ್ತಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ' ಎಂಬ ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿ, ಈ ಸಂದರ್ಭದಲ್ಲಿ ಭಾರತೀಯ ಪರಂಪರೆ, ಹಸ್ತಪ್ರತಿ ಸಂರಕ್ಷಣೆ ಮತ್ತು ಡಿಜಿಟಲೀಕರಣದ ಸಮಗ್ರ ವರದಿಯನ್ನು ಬಿಡುಗಡೆ ಮಾಡಲಾಯಿತು. ಪಾರಂಪರಿಕ ಸ್ಮಾರಕಗಳ ರಕ್ಷಣೆಗೆ ಕಾನೂನು ಇದ್ದರೂ ರಾಜ್ಯದಲ್ಲಿ ಗುರುತಿಸಲಾಗಿರುವ 25 ಸಾವಿರ ಸ್ಮಾರಕಗಳ ಪೈಕಿ 800 ಮಾತ್ರ ಸಂರಕ್ಷಿಸಲಾಗಿದೆ ಎಂದಿದ್ದಾರೆ. ಎಲ್ಲವನ್ನೂ ರಕ್ಷಿಸಲು ಕೆಲಸ ಮಾಡಬೇಕು. ಈ ಸರ್ಕಾರದ ಅವಧಿಯಲ್ಲಿ ಕನಿಷ್ಠ 5,000 ಸ್ಮಾರಕಗಳನ್ನು ರಕ್ಷಿಸುವ ಗುರಿಯನ್ನು ನಿಗದಿಪಡಿಸಲಾಗಿದೆ ಎಂದರು. ಹಸ್ತಪ್ರತಿಗಳು ಮತ್ತು ವಿದ್ವತ್ ಕೃತಿಗಳ ತಡೆಗೆ ಸರ್ಕಾರ ಹೆಚ್ಚು ಗಮನ ಹರಿಸಿಲ್ಲ ಎಂದು ವಿಷಾದ ವ್ಯಕ್ತಪಡಿಸಿದ ಪಾಟೀಲ್, ಜನರು ತಮ್ಮಲ್ಲಿರುವ ಹಸ್ತಪ್ರತಿಗಳನ್ನು ಸರ್ಕಾರಕ್ಕೆ ಹಸ್ತಾಂತರಿಸಲು ಪ್ರೋತ್ಸಾಹಿಸಲು ಕಾನೂನು ತರಲಾಗುವುದು ಎಂದು ಹೇಳಿದ್ದಾರೆ.

# ಉಗ್ರರ ಅಂತ್ಯಕ್ಕೆ ದಿಟ್ಟ ಮಂತ್ರ

## ರಷ್ಯಾ-ಭಾರತ ಭಾಯಿ ಭಾಯಿ | ಭಯೋತ್ಪಾದನೆ ತಡೆಗೆ ಎರಡು ರಾಷ್ಟ್ರಗಳ ಬೆಂಬಲ

• ಮಲ್ಲಮ್ಮ ನುಡಿ ನವದೆಹಲಿ

ಭಾರತ ಮತ್ತು ರಷ್ಯಾ ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಒಟ್ಟಾಗಿ ನಡೆಯುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

**ಭಯೋತ್ಪಾದನೆ ನಿರ್ಮೂಲನೆ:** ಭಯೋತ್ಪಾದನೆಯನ್ನು ಎದುರಿಸಲು ಭಾರತದ ಪ್ರಯತ್ನಗಳಿಗೆ ಮಾಸ್ಕೋ ಬಲವಾದ ಬೆಂಬಲ ನೀಡುತ್ತಿದೆ. ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ನಲ್ಲಿ ನಡೆದ ದಾಳಿಯಲ್ಲಿ ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆ ಜೈಶ್–ಎ–ಮೊಹಮ್ಮದ್ನ ನಂಟಿದೆ ಎಂಬ ಆರೋಪದ ನಂತರ ಅದು ಬಲವಾಗಿ ಪ್ರತಿಕ್ರಿಯಿಸಿದೆ. ಭಯೋತ್ಪಾದಕ ದಾಳಿಯನ್ನು ಖಂಡಿಸಿದ ಮಾಸ್ಕೋ, ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡಲು ಭಾರತದೊಂದಿಗೆ ಕೈಜೋಡಿಸುವುದಾಗಿ ಎಂದು ನುಡಿದಿದ್ದಾರೆ.

**ಆಪರೇಷನ್ ಸಿಂದೂರ್‌ಗೆ ಬೆಂಬಲ:** ಪಾಕಿಸ್ತಾನದಲ್ಲಿನ ಭಯೋತ್ಪಾದಕ ಮೂಲಸೌಕರ್ಯ ಮತ್ತು ಆ ದೇಶವು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಕಾಶ್ಮೀರದ ಕೆಲವು ಭಾಗಗಳನ್ನು ಗುರಿಯಾಗಿಸಿಕೊಂಡು ಭಾರತ ನಡೆಸಿದ ಆಪರೇಷನ್ ಸಿಂದೂರ್ ಅನ್ನು ಮಾಸ್ಕೋ ಬೆಂಬಲಿಸಿತ್ತು. ಮಾನವೀಯತೆ ಅನೇಕ ಸವಾಲುಗಳು ಮತ್ತು ಬಿಕ್ಕಟ್ಟುಗಳನ್ನು ಎದುರಿಸಬೇಕಾಯಿತು. ಇದೆಲ್ಲದರ ನಡುವೆಯೂ, ಭಾರತ–ರಷ್ಯಾ ಸ್ನೇಹವು ಧ್ರುವ ನಕ್ಷತ್ರದಂತೆ ಸ್ಥಿರವಾಗಿ ಉಳಿದಿದೆ ಎಂದಿದ್ದಾರೆ.



### ಭಾರತಕ್ಕೆ ತೈಲ ಪೂರೈಕೆ: ಪುಟಿನ್

ಮೋದಿ ನಂತರ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು, ಭಾರತ–ಕ್ಕೆ ತೈಲ ಪೂರೈಕೆಯನ್ನು ಮುಂದುವರಿಸುವುದಾಗಿ ಹೇಳಿದ್ದಾರೆ. ರಷ್ಯಾ ನಿಯೋಗಕ್ಕೆ ಆತ್ಮೀಯ ಮತ್ತು ಆತಿಥ್ಯದ ಸ್ವಾಗತಕ್ಕಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು, ನನ್ನ ಆತ್ಮೀಯ ಸ್ನೇಹಿತ ಪ್ರಧಾನಿ ಮೋದಿ ಹಾಗೂ ಭಾರತದ ಜನರಿಗೆ ನಾನು ಧನ್ಯವಾದ ಹೇಳುತ್ತೇನೆ. ಭೋಜನಕೂಟದಲ್ಲಿ ಮೋದಿ ಅವರೊಂದಿಗಿನ ನನ್ನ ಮಾತುಕತೆಗಳು ನಮ್ಮ ವಿಶೇಷ ಕಾರ್ಯತಂತ್ರದ ಪಾಲುದಾರಿಕೆಗೆ ಬಹಳ ಸಹಾಯಕವಾಗಿದ್ದವು ಎಂದು ಪುಟಿನ್ ತಿಳಿಸಿದ್ದಾರೆ.

> ವಾಣಿಜ್ಯ ಸಚಿವಾಲಯದ ದತ್ತಾಂಶದ ಪ್ರಕಾರ, ರಷ್ಯಾದಿಂದ ಭಾರತದ ಆಮದು ಸುಮಾರು ಹನ್ನೆರಡು ಪಟ್ಟು ಹೆಚ್ಚಾಗಿದೆ – ಹೆಚ್ಚಾಗಿ ರಿಯಾಯಿತಿ ದರದಲ್ಲಿ ಕಚ್ಚಾ ತೈಲ ಖರೀದಿಗಳಿಂದ ಇದು ಪ್ರೇರಿತವಾಗಿದೆ. ಇದಕ್ಕೆ ವ್ಯತಿರಿಕ್ತವಾಗಿ, ರಷ್ಯಾಕ್ಕೆ ಭಾರತದ ರಫ್ತು ಕೇವಲ 84% ರಷ್ಟು ಏರಿಕೆಯಾಗಿದ್ದು, ಇದರ ಪರಿಣಾಮವಾಗಿ ವ್ಯಾಪಾರ ಕೊರತೆ ಇಪ್ಪತ್ತು ಪಟ್ಟು ಹೆಚ್ಚಾಗಿದೆ. –ರಾಜೇಶ್ ಅಗರ್ವಾಲ್, ವಾಣಿಜ್ಯ ಇಲಾಖೆಯ ಕಾರ್ಯದರ್ಶಿ

### ಭಾರತದ ಮೇಲೆ ಅಮೆರಿಕ ಪ್ರೀತಿ..!

ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಭಾರತ ಭೇಟಿಯನ್ನು ಇಡೀ ವಿಶ್ವವೇ ಕುತೂಹಲದಿಂದ ನೋಡುತ್ತಿದ್ದು, ಈ ಮಧ್ಯೆ ಅಮೆರಿಕ ಭಾರತದೊಂದಿಗೆ ವ್ಯಾಪಾರ ಮಾತುಕತೆ ನಡೆಸಲು ತುದಿಗಾಲಲ್ಲಿ ನಿಂತಿದೆ. ಅಮೆರಿಕದ ವ್ಯಾಪಾರ ಪ್ರತಿನಿಧಿ ರಿಕ್ ಸ್ವಿಟ್ಜರ್ ನೇತೃತ್ವದ ಟ್ರಂಪ್ ಆಡಳಿತದ ಸಂಧಾನಕಾರರ ತಂಡ ಮುಂದಿನ ವಾರ ಭಾರತಕ್ಕೆ ಪ್ರಯಾಣ ಬೆಳೆಸಲಿದ್ದು, ವ್ಯಾಪಾರ ಒಪ್ಪಂದದ ಕುರಿತು ಮಾತುಕತೆ ಮುಂದುವರಿಸಲಿದೆ ಎಂದು ಅಮೆರಿಕದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಕೈಯಲ್ಲಿ ಮಿತಿಮೀರಿದ ಸಿಎಂ ಗದ್ದುಗೆಯ ಗುದ್ದಾಟ

**ಬೆಂಗಳೂರು:** ಕಾಂಗ್ರೆಸ್ನಲ್ಲಿ ಕಳೆದ ಕೆಲ ತಿಂಗಳಿಂದ ಸಿಎಂ ಗದ್ದುಗೆ ಗುದ್ದಾಟ ಮಿತಿಮೀರಿದೆ. ಸಿಎಂ–ಡಿಸಿಎಂ ಬ್ರೇಕ್ ಫಾಸ್ಟ್ ಸಭೆ ಮಾಡಿ ಸಂಧಾನ ಮಾಡಿದ್ರೂ ಇದು ನಿಲ್ಲದಾಗಿದೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಾಜ್ಯಕ್ಕೆ ಭೇಟಿ ನೀಡಿದ್ದ ವೇಳೆ ಸಿಎಂ ಘೋಷಣೆ ಕೂಗಿದ್ದವರಿಗೆ ಐಐಸಿಸಿ ಶಾಕ್ ನೀಡಿದೆ. ನಾರಾಯಣ ಗುರು ಹಾಗೂ ಮಹಾತ್ಮ ಗಾಂಧಿ ನಡುವಿನ ಸಂವಾದದ ಶತಮಾನೋತ್ಸವ ಕಾರ್ಯಕ್ರಮ ಇತ್ತೀಚೆಗೆ ಮಂಗಳೂರಿನಲ್ಲಿ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಭಾಗಿಯಾಗಲು ಕೆ.ಸಿ.ವೇಣುಗೋಪಾಲ್ ಕೇರಳದಿಂದ ಮಂಗಳೂರಿಗೆ ಆಗಮಿಸಿದ್ದರು.

ವೇಣುಗೋಪಾಲ್ ಮಂಗಳೂರು ವಿಮಾನ ನಿಲ್ದಾಣದಿಂದ ಆಚೆ ಬರುತ್ತಿದ್ದಂತೆಯೇ ಕಾಂಗ್ರೆಸ್ ಮುಖಂಡ ಮಿಥುನ್ ರೈ ಹಾಗೂ ಅವರ ಬೆಂಬಲಿಗರು ಡಿಕೆಶಿ ಪರವಾಗಿ ಘೋಷಣೆ ಕೂಗಿದ್ದರು. ಡಿಕೆ ಡಿಕೆ ಎಂದು ಘೋಷಣೆ ಕೂಗಿದ್ದಲ್ಲದೇ ಡಿಕೆ ಶಿವಕುಮಾರ್ ಅವರನ್ನು ಸಿಎಂ ಮಾಡಬೇಕೆಂದು ಆಗ್ರಹಿಸಿದ್ರು. ಸಿಎಂ–ಡಿಕೆಶಿ ನಡುವಿನ ಕುರ್ಚಿ ಕದನ ಶಾಂತವಾಗಿರುವಾಗಲೇ ಈ ರೀತಿ ಘೋಷಣೆ ಕೂಗಿರುವುದು ಹೈಕಮಾಂಡ್ ಕೆಂಗಣ್ಣಿಗೆ ಗುರಿಯಾಗಿದೆ. ಹೀಗಾಗಿ ಕಾರಣ ಕೇಳಿ ಮಿಥುನ್ ರೈಗೆ ಎಐಸಿಸಿ ಕಾರ್ಯದರ್ಶಿ ರೋಜಿ ಜಾನ್ ಶೋಕಾಸ್ ನೋಟಿಸ್ ಜಾರಿ ಮಾಡಿದ್ದಾರೆ.

ಸಿಎಂ ಸಿದ್ದರಾಮಯ್ಯ ಪೂರ್ಣಾವಧಿ ಸಿಎಂ ಎಂದು ಘೋಷಿಸಿದ್ದ ಪರಿಷತ್ ಸದಸ್ಯ ಐವಾನ್ ಡಿಸೋಜಾಗೂ ಕಾಂಗ್ರೆಸ್ ಶಿಸ್ತು ಸಮಿತಿ ನೋಟಿಸ್ ನೀಡಿದೆ. ಸೂಕ್ತ ಕಾರಣ ನೀಡುವಂತೆ ಕಾಂಗ್ರೆಸ್ ನೋಟಿಸ್ ನೀಡಿದೆ. ಈ ಮೂಲಕ ಕೈನಲ್ಲಿ ಮತ್ತೆ ಸಿಎಂ ಕುರ್ಚಿಯ ಕಿತ್ತಾಟ ಹೆಚ್ಚಾಗದಂತೆ ಕ್ರಮಕೈಗೊಂಡಿದೆ.

## ಹೊಂದಾಣಿಕೆಯ ನಾಟಕ ಇಲ್ಲ

• ಮಲ್ಲಮ್ಮ ನುಡಿ ಬೆಂಗಳೂರು

ರಾಜಕೀಯದಲ್ಲಿ ಎಷ್ಟೇ ಪ್ರೀತಿ– ವಿಶ್ವಾಸಗಳಿದ್ದರೂ ಹೊಂದಾಣಿಕೆಯ ನಾಟಕ ನನ್ನ ಬಳಿ ಇಲ್ಲ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ತಿಳಿಸಿದ್ದಾರೆ. ವಿಧಾನಸೌಧದ ವಿರೋಧ ಪಕ್ಷದ ನಾಯಕರ ಕಚೇರಿಯಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು ಪ್ರಶ್ನೆಗೆ ಉತ್ತರ ನೀಡಿದರು. ವಾಚ್ ವಿಚಾರದಲ್ಲಿ ನನ್ನ ಹೇಳಿಕೆಯಿಂದ ಡಿ.ಕೆ.ಶಿವಕುಮಾರರಿಗೆ ಬೇಸರ ಆದರೆ ನಾನೇನೂ ಮಾಡಲಾಗದು ಎಂದು ಸ್ಪಷ್ಟಪಡಿಸಿದರು. ಈಗಲೂ ಅವರ ಹೂಬ್ಲೋಟ್ ವಾಚ್ ಕಾಣುತ್ತಿಲ್ಲ ಎಂದು ತಿಳಿಸಿದರು. ಅದು ಅಫಿಡವಿಟ್‌ನಲ್ಲಿಲ್ಲ. ಈಗ ನೀವು ಕಾರ್ಟಿಯರ್ ವಾಚ್ ವಿಚಾರವನ್ನು ಲೋಕಾಯುಕ್ತಕ್ಕೆ ಕೊಟ್ಟಿದ್ದೀರಿ. ಹಿಂದೆ ಅಫಿಡವಿಟ್‌ನಲ್ಲಿ ಕೊಟ್ಟಿಲ್ಲ; ಅದು ಕೂಡ ಅಪರಾಧವೇ ಎಂದು ಗಮನ ಸೆಳೆದರು. ಇನ್ನೊಂದು ಪ್ರಶ್ನೆಗೆ ಉತ್ತರ ನೀಡಿದ ಅವರು, ಇದನ್ನು ಬಹಳ ಬೆಳೆಸಬೇಕೆಂಬುದು ನನ್ನ ಉದ್ದೇಶವಲ್ಲ; ಸಂದರ್ಭಕ್ಕೆ ತಕ್ಕಂತೆ ವಿಷಯವನ್ನು ಜನರ ಗಮನಕ್ಕೆ ತರುವ ಕೆಲಸ ಮಾಡಿದ್ದೇನೆ. ಶಿವಕುಮಾರರನ್ನು ಇವತ್ತಿನಿಂದ ನಾನು ನೋಡುತ್ತಿಲ್ಲ. ಕಾಲೇಜಿನಿಂದ ನೋಡುತ್ತ ಬಂದಿದ್ದೇನೆ. ಅವರ ಕಾಲೇಜಿನ ಸ್ನೇಹಿತರಲ್ಲಿ ನಾನೂ ಒಬ್ಬ. ಅವರು ಇವತ್ತು ದೊಡ್ಡ ಮಟ್ಟಕ್ಕೆ ಬೆಳೆದಿದ್ದಾರೆ. ಆ ರೀತಿಯ ಸವಲತ್ತು ನಮಗಿದ್ದರೆ ನಾವೂ ಬೆಳೆಯಬಹುದಾಗಿತ್ತು ಎಂದು ನುಡಿದರು. ನೀವು ನೂರು ವಾಚ್ ಕಟ್ಟಿದರೆ ನಾನು ಸ್ನೇಹಿತನಾಗಿ ಅತ್ಯಂತ ಖುಷಿ ಪಡುವೆ. ನೀವು ಅಫಿಡವಿಟ್‌ನಲ್ಲಿ ತಿಳಿಸಿದ್ದಾಗಿ ಹೇಳಿದ್ದೀರಿ. ಆದರೆ, ಅದನ್ನು ತಿಳಿಸಿಲ್ಲ ಎಂಬುದಷ್ಟೇ ನನ್ನ ಪ್ರಶ್ನೆ ಎಂದು ತಿಳಿಸಿದರು.



## 2 ಕೋಟಿ ಲಾಭಾಂಶ ಹಸ್ತಾಂತರ

• ಮಲ್ಲಮ್ಮ ನುಡಿ ಬೆಂಗಳೂರು

ನಗರದ ಗಾಂಧಿನಗರದಲ್ಲಿ ನಿರ್ಮಿಸಲಾಗಿರುವ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ (ಕೆಐಎಡಿಬಿ) ಹೊಸ ಕಟ್ಟಡವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಶುಕ್ರವಾರ ಉದ್ಘಾಟಿಸಿದರು. ಗಾಂಧಿನಗರದ ಆಚಾರ್ಯ ತುಳಸಿ ಮಾರ್ಗದಲ್ಲಿ ರೂ 32 ಕೋಟಿ ವೆಚ್ಚದಲ್ಲಿ ಈ ಬಹುಮಹಡಿ ಕಟ್ಟಡವನ್ನು ನಿರ್ಮಿಸಲಾಗಿದೆ. ಒಟ್ಟು 2,618 ಚದರ ಮೀಟರ್ ಅಳತೆಯ ನಿವೇಶನದಲ್ಲಿ ತಲೆಯೆತ್ತಿರುವ ಈ ಕಟ್ಟಡವು ಎರಡು ನೆಲ ಅಂತಸ್ತುಗಳು, ನೆಲ ಅಂತಸ್ತು, ಐದು ಮಹಡಿಗಳು ಹಾಗೂ ತಾರಸಿ ಮಹಡಿಯನ್ನು ಒಳಗೊಂಡಿದೆ.



ಲೋಯರ್ ಬೇಸ್ ಮೆಂಟ್ ನಲ್ಲಿ 58 ಕಾರುಗಳು ಹಾಗೂ ಅಪ್ಪರ್ ಬೇಸ್ ಮೆಂಟ್ ನಲ್ಲಿ 38 ಕಾರುಗಳ ನಿಲುಗಡೆಗೆ ಜಾಗ ಕಲ್ಪಿಸಲಾಗಿದೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೂ ಈ ಸಂದರ್ಭದಲ್ಲಿ ಇದ್ದರು. ಇದೇ ವೇಳೆ, ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರಾದ ಎಂ.ಬಿ.ಪಾಟೀಲ ಅವರು ಕೆ.ಐ.ಎ.ಡಿ.ಬಿ.ಯ ರೂ 2 ಕೋಟಿ ಲಾಭಾಂಶವನ್ನು ಮುಖ್ಯಮಂತ್ರಿ ಅವರ ಪರಿಹಾರ ನಿಧಿಗೆ ಹಸ್ತಾಂತರಿಸಿದರು. ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವ ಕುಮಾರ್, ಕೆಐಎಡಿಬಿ ಸಿಇಒ ಡಾ.ಮಹೇಶ ಮತ್ತಿತರರು ಈ ಸಂದರ್ಭದಲ್ಲಿ ಇದ್ದರು.

## ಶಾಲಾ ಪಠ್ಯದಲ್ಲಿ ಭಗವದ್ಗೀತೆ ಬೋಧನೆ

• ಮಲ್ಲಮ್ಮ ನುಡಿ ನವದೆಹಲಿ

ಕಾಲಾತೀತ, ಮೌಲ್ಯಾಧರಿತ ಆದರ್ಶಗಳನ್ನು ಒಳಗೊಂಡಿರುವ ಭಗವದ್ಗೀತೆಯನ್ನು ವಿದ್ಯಾರ್ಥಿಗಳಿಗೆ ಬೋಧಿಸಲು ಪಠ್ಯದಲ್ಲಿ ಸೇರಿಸಬೇಕು ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದ ಶಿಕ್ಷಣ ಮಂತ್ರಿ ಧರ್ಮೇಂದ್ರ ಪ್ರಧಾನ್ ಅವರಿಗೆ ಮನವಿ ಮಾಡಿದ್ದಾರೆ.

ಈ ಬಗ್ಗೆ ಸಚಿವ ಪ್ರಧಾನ್ ಅವರಿಗೆ ಪತ್ರ ಬರೆದಿರುವ ಕುಮಾರಸ್ವಾಮಿ ಅವರು; ಮೌಲ್ಯಾಧಾರಿತ ಶಿಕ್ಷಣಕ್ಕೆ ಬಲವಾದ ಒತ್ತು ನೀಡುವ ನಿಟ್ಟಿನಲ್ಲಿ ಭಗವದ್ಗೀತೆ ಬೋಧನೆ ಅತ್ಯಗತ್ಯವಾಗಿದೆ ಎಂದು ಸಚಿವರು ಹೇಳಿದ್ದಾರೆ.

ಭಾರತವು ಬಹಳ ಹಿಂದಿನಿಂದಲೂ ಸಂತರು, ಜ್ಞಾನ ಮತ್ತು ಶಾಶ್ವತ ನಾಗರಿಕ ಮೌಲ್ಯಗಳ ನಾಡು. ಸನಾತನ ಧರ್ಮವು ವಸುಧೈವ ಕುಟುಂಬ ಎಂಬ ಸಾರ್ವತ್ರಿಕ ಆದರ್ಶವನ್ನು ಎತ್ತಿಹಿಡಿಯುತ್ತದೆ. ಶ್ರೀಕೃಷ್ಣನು ಅರ್ಜುನನಿಗೆ ಬೋಧಿಸಿದ ಭಗವದ್ಗೀತೆಯು ಪರಮ ಜ್ಞಾನವಾಗಿದ್ದು, ಇದು ನಿಷ್ಕಾಮ ಕರ್ಮ ಮತ್ತು ಪ್ರಾಮಾಣಿಕತೆ ಮತ್ತು ಸಮರ್ಪಣೆಯೊಂದಿಗೆ ಪ್ರತಿಯೊಬ್ಬರ ಕರ್ತವ್ಯವನ್ನು ನಿರ್ವಹಿಸುವ ಮಹತ್ವವನ್ನು ಒತ್ತಿ ಹೇಳುತ್ತದೆ. ಈ ಮೌಲ್ಯಗಳು ವಿಶೇಷವಾಗಿ ಪ್ರಸ್ತುತ ಜಾಗತಿಕ ಪರಿಸರದಲ್ಲಿ ಅಪಾರ ಪ್ರಸ್ತುತತೆಯನ್ನು ಹೊಂದಿವೆ ಎಂದು ಸಚಿವ ಕುಮಾರಸ್ವಾಮಿ ಅವರು ಪ್ರತಿಪಾದಿಸಿದ್ದಾರೆ.

ಇತ್ತೀಚೆಗೆ ಪ್ರಧಾನ ಮಂತ್ರಿಗಳು ಉಡುಪಿಯ ಶ್ರೀಕೃಷ್ಣ ಮಠಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಗೀತಾ ಪಠಣ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಅಲ್ಲಿ ಅವರು ಹಿಂದೂ ಧರ್ಮದ ಮೂಲ ತತ್ವಗಳನ್ನು ಎತ್ತಿಹಿಡಿದು ವಸುಧೈವ ಕುಟುಂಬ ಪರಿಕಲ್ಪನೆಯ ಬಗ್ಗೆ ಒತ್ತಿ ಹೇಳಿದರು ಮತ್ತು ಆ ಪವಿತ್ರ ಗ್ರಂಥ ಹೊಂದಿರುವ ಕಾಲಾತೀತ ಮೌಲ್ಯಗಳನ್ನು ಪುನರುಚ್ಚರಿಸಿದರು ಎಂಬುದನ್ನು ಶಿಕ್ಷಣ ಸಚಿವರಿಗೆ ಬರೆದಿರುವ ಪತ್ರದಲ್ಲಿ ಕುಮಾರಸ್ವಾಮಿ ಉಲ್ಲೇಖಿಸಿದ್ದಾರೆ. ಇದಲ್ಲದೆ, ಶಿವಮೊಗ್ಗದಲ್ಲಿ ನಡೆದ ಗೀತಾ ಪಠಣ ಕಾರ್ಯಕ್ರಮಕ್ಕೆ ಹಾಜರಾಗುವ ಸೌಭಾಗ್ಯ ನನಗೂ ಸಿಕ್ಕಿತ್ತು. ಅದೊಂದು ಸ್ಫೂರ್ತಿದಾಯಕ ಕಾರ್ಯಕ್ರಮವಾಗಿತ್ತು ಎಂಬ ಅಂಶದ ಬಗ್ಗೆ ಕುಮಾರಸ್ವಾಮಿ ಅವರು ಶಿಕ್ಷಣ ಸಚಿವರ ಗಮನಕ್ಕೆ ತಂದಿದ್ದಾರೆ.

# 39ನೇ ಶರಣ ಮೇಳದ ಗೌರವಾಧ್ಯಕ್ಷರಾಗಿ ಬಸವರಾಜ ಬುಳ್ಳಾ



**ಮಲ್ಲಮ್ಮ ನುಡಿ ವಾರ್ತೆ ಬೀದರ್:** ಕೂಡಲಸಂಗಮ ಬಸವ ಧರ್ಮ ಪೀಠದ ಅಧ್ಯಕ್ಷೆ ಮಾತೆ ಡಾ! ಗಂಗಾಮಾತಾಜಿಯವರ ಆದೇಶದ ಮೇರೆಗೆ ಹಿರಿಯ ಶರಣರಾದ ಬಸವರಾಜ ಬುಳ್ಳಾರವರನ್ನು ಮುಂಬರುವ ವರ್ಷ ಜನೇವರಿ 12–13–ಹಾಗೂ 14 2026ರ 39ನೇ ಶರಣ ಮೇಳದ ಗೌರವ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ.

ತಾವುಗಳು ಬರುವ ಶರಣ ಮೇಳವನ್ನು ವಿಜೃಂಭಣೆಯಿಂದ ಸಂಘಟಿಸಿ ಬಸವ ತತ್ವವನ್ನು ಹೆಚ್ಚಿನ ರೀತಿಯಲ್ಲಿ ಪ್ರಸಾರ ಮಾಡುತ್ತೀರಿ ಎಂದು ಭಾವಿಸಿ ತಮಗೆ ಈ ಜವಾಬ್ದಾರಿ ನೀಡಲಾಗುತ್ತಿದೆ ಎಂದು ಬಸವಧರ್ಮ ಪೀಠದ ಕಾರ್ಯಾಧ್ಯಕ್ಷರಾದ ಸದ್ಗುರು ಮಹಾದೇಶ್ವರ ಸ್ವಾಮೀಜಿ ಅವರು ಹೊರಡಿಸಿರುವ ಆದೇಶ ಪತ್ರದಲ್ಲಿ ತಿಳಿಸಿದ್ದಾರೆ.

# ಕೆಬಿಎನ ಆಸ್ಪತ್ರೆ: ವಿಶ್ವ ಏಡ್ಸ್ ದಿನ ಅಂಗವಾಗಿ ವಿಶೇಷ ಉಪನ್ಯಾಸ



**ಮಲ್ಲಮ್ಮ ನುಡಿ ವಾರ್ತೆ**

**ಕಲಬುರ್ಗಿ:** ವಿಶ್ವ ಏಡ್ಸ್ ದಿನದ ಪ್ರಯುಕ್ತ ಕೆಬಿಎನ ಟೀಚಿಂಗ್ ಮತ್ತು ಜೆನೆರಲ್ ಆಸ್ಪತ್ರೆಯ ಚರ್ಮರೋಗ ಶಾಸ್ತ್ರ ವಿಭಾಗ ಶುಕ್ರವಾರ ವಿಶೇಷ ಉಪನ್ಯಾಸವನ್ನು ಹಮ್ಮಿಕೊಂಡಿತ್ತು.

ಎಮ್ ಆರ್ ಎಮ್ ಸಿ ಕಾಲೇಜಿನ ಮಾಜಿ ಪ್ರಾಧ್ಯಾಪಕ ಡಾ ಮುರುಗೇಶ ಪಾಸ್ತಾಪುರ ಇವರು ಎಚ್ ಐ ವಿ ಸೊಂಕಿನ ಇತಿಹಾಸ, ವೈರಸನ ರಚನೆ, ಜೀವನ ಚಕ್ರ, ಹರಡುವ ವಿಧಗಳ ಬಗ್ಗೆ ಮಾಹಿತಿ ನೀಡಿದರು. ಸೋಂಕನ್ನು ಪತ್ತೆ ಮಾಡಲು ಆರ್ ಟಿ ಪಿಸಿ ಆ ರ್, ೩24 ಅಂಟಿಜೆನ, ಅಂಟಿಬೊಡಿ ಟೆಸ್ಟ್‌ಗಳನ್ನು ಮಾಡಿಸಲಾಗುತ್ತದೆ. ರೋಗಿಗೆ ಯಾವ ಟೆಸ್ಟ, ಯಾವಾಗ, ಟೆಸ್ಟ್ ಪುನರವರ್ತಿ, ದರದ ಪರಿಣಾಮ, ಯಾವಾಗ ರೋಗದ ಬಗ್ಗೆ ಹೇಳುವುದು ಇವೆಲ್ಲ ವೈದ್ಯರ ಮುಂದಿರುವ ಸವಾಲುಗಳು. ಎಚ್ ಐ ವಿ ಸೋಂಕು 86.7% ಅಸುರಕ್ಷಕ ಲೈಂಗಿಕತೆಯಾಗಿದೆ. ಇತ್ತೀಚಿನ ದಿನಮನಗಳಲ್ಲಿ ಸೋಂಕು ಪ್ರಮಾಣ ಕಡಿಮೆಯಾಗಿದೆ. ಭಾರತವನ್ನು ಸಂಪೂರ್ಣ ಏಡ್ಸ್ ಮುಕ್ತ ಮಾಡ್ಬೇಕಾಗಿದೆ ಎಂದರು.

ಹೆಪಾಟಿಟಿಸ ಬಿಯ ವ್ಯಾಕ್ಸಿನೇಷನ ತೆಗೆದು ಕೊಳ್ಳುವುದು ಅತಿ ಅವಶ್ಯ. ಅದಕ್ಕೆ ಚಿಕಿತ್ಸೆ ಇಲ್ಲ. ಎಲ್ಲರೂ ಹೆಪಾಟಿಟಿಸ ಬಿ ತೆ–ಗೆದುಕೊಂಡು ಆರೋಗ್ಯಯುಕ್ತ ಜೀವನ ನಡೆಸಬೇಕು ಎಂದು ಹೇಳಿದರು.

ನಂತರ ಪ್ರೇಕ್ಷಕರ ಪ್ರಶ್ನೆಗಳಿಗೆ ಉತ್ತರಿಸಿದರು. ಈ ವಿಶೇಷ ಉಪನ್ಯಾಸದಲ್ಲಿ ಮೆಡಿಕಲ್ ಡೀನ ಡಾ ಗುರು ಪ್ರಸಾದ, ನಾಡೋಜ ಪಿ ಎಸ್ ಶಂಕರ, ಮೆಡಿಕಲ ಅದೀಕ್ಷಕ ಸಿದ್ಧಾಲಿಂಗ ಚೆಂಗಟಿ ಏಡ್ಸ್ ದಿನ ಕುರಿತು ಮಾತನಾಡಿದರು ಹಾಗೂ ಧರ್ಮಟಲಜಿ ವಿಭಾಗದ ಶ್ರಮ ವನ್ನು ಶ್ಲಾಘಿಸಿದರು.

ವಿಭಾಗದ ಪಿ ಜಿ ವಿದ್ಯಾರ್ಥಿ ಡಾ ದರ್ಶನ ರೆಡ್ಡಿ ಪ್ರಸ್ತಾವಕ ಮಾತನಾಡಿದರು,

ಸಹಾಯಕ ಪ್ರಾಧ್ಯಾ ಪಕ ಡಾ ವಸೀಮ ವಂದಿಸಿದರೆ ಪಿ ಜಿ ವಿದ್ಯಾರ್ಥಿನಿ ಡಾ ಸಪೋರಾ ನಿರೂಪಿಸಿದರು. ಈ ಉಪನ್ಯಾಸ ಕಾರ್ಯಕ್ರಮ ದಲ್ಲಿ ವಿಭಾಗದ ಎಲ್ಲ ವಿದ್ಯಾರ್ಥಿಗಳು ಹಾಜರಿದ್ದರು



ಬಸವಕಲ್ಯಾಣ :– ತಾಲೂಕಿನ ಬೇಟಬಾಲಕುಂದಾ ಸಮಿಪ ಇರುವ ಶ್ರೀ ದತ್ತಾತ್ರೇಯ ದೇವಸ್ಥಾನ ಆವರಣದಲ್ಲಿ ಶ್ರೀ ದತ್ತಾತ್ರೇಯ ಜಯಂತ್ಯುತ್ಸವ ನಿಮಿತ್ತವಾಗಿ ನಡೆಯಲಿರುವ ಶ್ರೀ ದತ್ತಾತ್ರೇಯ ದೇವಸ್ಥಾನದ ಪೂಜ್ಯಶ್ರೀ ಬಸವರಾಜ ಮಹಾರಾಜರ ನೇತೃತ್ವದಲ್ಲಿ ನಡೆದ ಸಸ್ತಾಪುರ ಬೇಟಬಾಲಕುಂದಾ ಪೂಜ್ಯ ಶ್ರೀ ಸದಾನಂದ ಅಪ್ಪಗಳ ಪಾದ ಪೂಜೆ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಅನೇಕ ಪೂಜ್ಯರು ಹಾಗೂ ಅಂಬರಾಯ ಸೈದಾಪೂರೆ ಹಾಗೂ ಭಕ್ತರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಮೃತ ವ್ಯಕ್ತಿಯ ವಾರಸುದಾರರ ಪತ್ತೆಗಾಗಿ ಮನವಿ



**ಮಲ್ಲಮ್ಮ ನುಡಿ ವಾರ್ತೆ**

**ಬೀದರ:** ದಿನಾಂಕ:21–10–2025ರಂದು ಮದ್ಯರಾತ್ರಿ 2.00ಗಂಟೆಯಿಂದ 2.30 ಗಂಟೆ ಮದ್ಯ ಅವಧಿಯಲ್ಲಿ ಬಗದಲ್ ಪೊಲೀಸ ಠಾಣೆ ವ್ಯಾಪ್ತಿಯ ಮೀನಕೇರಾ ಕ್ರಾಸ ಹತ್ತಿರ ಮುಂಬೈ ಹೈದ್ರಾಬಾದ ಹೈವೆ ರೋಡಿನ ಓವರ್ ಬ್ರಿಡ್ಜ ಮೇಲೆ ಯಾವುದೊ ಒಂದು ಅಪರಿಚಿತ ವಾಹನ ಚಾಲಕ ತನ್ನ ವಾಹನ ಅತೀ ಹಾಗೂ ನಿಷ್ಕಾಳಜಿತನದಿಂದ ಚಲಾಯಿಸಿಕೊಂಡು ಬಂದು ಅಂದಾಜು 35–40 ವರ್ಷ ವಯಸ್ಸಿನ ಅಪರಿಚಿತ ಗಂಡಸಿಗೆ ಅಪಘಾತ ಮಾಡಿ ವಾಹನ ಸಮೇತ ಓಡಿ ಹೋಗಿದ್ದು, ಅಪಘಾತದಿಂದ ಅಪರಿಚಿತ ವ್ಯಕ್ತಿ ಭಾರಿಗಾಯವಾಗಿ ಮೃತಪಟ್ಟಿದ್ದು, ಈವರೆಗೆ ಮೃತನ ವಾರಸುದಾರರು ಯಾರೆಂದು ಪತ್ತೆಯಾಗಿರುವುದಿಲ್ಲವೆಂದು ಬೀದರ ಗ್ರಾಮೀಣ ವೃತ್ತದ ಪೊಲೀಸ್ ವೃತ್ತ ನೀರಿಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಬಗ್ಗೆ ಬಗದಲ್ ಪೊಲೀಸ್ ಠಾಣೆ ಗುನ್ನೆ ನಂ. 86/2025 ಕಲಂ 281 106 ಬಿ.ಎನ್.ಎಸ್. ಜೊತೆ 187 ಐಎಂವಿ ಎಕ್ಟಡಿ ಪ್ರಕರಣ ದಾಖಲಾಗಿರುತ್ತದೆ. ಮೃತ ವ್ಯಕ್ತಿ ನೋಡಲು ದುಂಡು ಮುಖ ಗೋದಿ ಮೈಬಣ್ಣ, ಸಾಧಾರಣ ಮೈಕಟ್ಟು ಇದ್ದು, ಇತನಿಗೆ ಮುಖದ ಮೇಲೆ ಉದ್ದ ದಾಡಿ ಇದ್ದಿರುವ ಇತನು ಮೈಮೇಲೆ ಪಿಂಕ್ ಬಣ್ಣದ ಹಾಫ ಶರ್ಟ, ಪರಪಲ್ ಬಣ್ಣದ ಟಿ ಶರ್ಟ, ಹಸಿರು ಬಣ್ಣದ ಹಾಫ ಟಿ–ಶರ್ಟ, ಬಿಳಿ ಬಣ್ಣದ ಬನಿಯಾನ, ಕಂದು ಬಣ್ಣದ ದೋತಿ ಇರುತ್ತದೆ. ಈ ಮೃತನ ವ್ಯಕ್ತಿಯ ವಾರಸುದಾರರು ಯಾರಾದರೂ ಇದ್ದಲ್ಲಿ ಬೀದರ ಗ್ರಾಮೀಣ ವೃತ್ತ ಪೊಲೀಸ್ ವೃತ್ತ ನಿರೀಕ್ಷಕರ ಕಛೇರಿಗೆ ಅಥವಾ ಬೀದರ ಗ್ರಾಮೀಣ ವೃತ್ತದ ಸಿಪಿಐ ಮೊಬೈಲ್ ಸಂಖ್ಯೆ: 9480803439ಗೆ ಸಂಪರ್ಕಿಸುವಂತೆ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.




**ಬಸವಕಲ್ಯಾಣ :- ತಾಲೂಕಿನ ಸಸ್ತಾಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇತ್ತೀಚೆಗೆ ನಡೆದ ವಯೋ ನಿವೃತ್ತಿ ಹೊಂದಿದ ಪ್ರಯುಕ್ತ ಉಷಾದೇವಿ ಪಂಚಾಕ್ಷರಿ ಹಿರೇಮಠ ಹಾರಕೂಡ ಅವರಿಗೆ ಬಿಳ್ಕೊಡುಗೆ ಸಮಾರಂಭ ಜರುಗಿ-ತು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಿದ್ಧವೀರಯ್ಯ ರುದನೂರ. ಪಂಚಾಕ್ಷರಿ ಹಿರೇಮಠ. ಶಾಲೆಯ ಮುಖ್ಯ ಗುರುಗಳಾದ ಮೌನಪಾ ಪಾಂಚಳ. ಮಡಿವಾಳಪ್ಪಾ ಪಾಟೀಲ ಹಾಗೂ ಶಾಲೆಯ ಶಿಕ್ಷಕರು. ಎಸ್. ಡಿ. ಎಮ್. ಸಿ. ಸದಸ್ಯರು. ಗ್ರಾಮದ ಪ್ರಮುಖರು. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)**

# ಬಸವಕಲ್ಯಾಣದಲ್ಲಿ ಸೂಫಿ ಸಂತ ಸಮ್ಮೇಳನ: ಸಲಿಮ್ ಅಹಮ್ಮದ್



ಬೀದರ್: ಪ್ರವಾದಿಯವರ 1500 ನೇ ಜನ್ಮ ದಿನಾಚರಣೆಯ ಅಂಗವಾಗಿ ಡಿ. 7ರಂದು ಶರಣರ ನಾಡು ಬಸವಕಲ್ಯಾಣದ ಅಲ್ಫಾ ಮೈದಾನದಲ್ಲಿ ಸಂಜೆ ಸೂಫಿ–ಸಂತರ ಸಮ್ಮೇಳನ ಆಯೋಜಿಸಲಾಗುತ್ತಿದೆ ಎಂದು ಕರ್ನಾಟಕ ರಾಜ್ಯದ ಮುಖ್ಯ ಸಚೇತಕ ಹಾಗೂ ಎಂಎಲ್ಸಿ ಸಲೀಂ ಅಹ್ಮದ ತಿಳಿಸಿದರು.

ಈ ಕುರಿತು ಗುರುವಾರ ನಗರದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿ, ಪ್ರವಾದಿಯವರ 1500 ನೇ ವಾರ್ಷಿಕೋತ್ಸವ ಆಚರಣೆ ಈಗಾಗಲೆ ಹುಬ್ಬಳ್ಳಿ ಮತ್ತು ಕೊಪ್ಪಳದಂತಹ ನಗರಗಳಲ್ಲಿ ಆಚರಿಸಲಾಗಿದ್ದು ಇದು ಮೂರನೆ ಸಮಾವೇಶವಾಗಿದೆ ಎಂದರು.

ಅಂತರರಾಷ್ಟ್ರೀಯ ಖ್ಯಾತಿಯ ವ್ಯಕ್ತಿ ಮೌಲಾನಾ ಮುಹಮ್ಮದ್ ಒಬೈದುಲ್ಲಾ ಖಾನ್ ಆಜ್ಮಿ, ರಾಜ್ಯಸಭೆಯ ಮಾಜಿ ಸದಸ್ಯ ಮತ್ತು ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿಯ ಉಪಾಧ್ಯಕ್ಷ, ಮಂಡಳಿಯ ಸದಸ್ಯ ಮೌಲಾನಾ ಅಬು ತಾಲಿಬ್ ರಹಮಾನಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ವಕ್ಫ ಕಮಿಟಿ ಅಧ್ಯಕ್ಷರು ಹಾಗೂ ಹಜರತ್ ಹಫೀಜ್ ಅಲಿ ಮುಹಮ್ಮದ್ ಅಲ್ ಹುಸೈನಿ, ಖ್ವಾಜಾ ಬಂದಾ ನವಾಜ್ ದರ್ಗಾದ ಸಜ್ಜಾದಾ ಅವರನ್ನು ಅಭಿನಂದಿಸಲಾಗುವುದು ಎಂದರು.

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೋಳಿ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ, ಪೌರಾಡಳಿತ ಸಚಿವ ರಹೀಂ ಖಾನ್, ಮಾಜಿ ಸಚಿವ ರಾಜಶೇಖರ್ ಪಾಟೀಲ್ ಹುಮ್ನಾಬಾದ್, ಮಾಜಿ ಎಂಎಲ್ಸಿ ಅರವಿಂದ್ ಕುಮಾರ್ ಅರಳಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಸೈಯದ್ ನಾಸಿರ್ ಹುಸೇನ್, ಉತ್ತರ ಪ್ರದೇಶದ ಉಸ್ತುವಾರಿ ಸಂಸದ ಇಮ್ರಾನ್ ಮಸೂದ್, ತೆಲಂಗಾಣದ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಮೊಹಮ್ಮದ್ ಅಜರೋದ್ದೀನ್ (ಹೈದ್ರಾಬಾದ್) ಮತ್ತು ಕೆಕೆಆರ್ಡಿಬಿ ಅಧ್ಯಕ್ಷರು ಮತ್ತು ಶಾಸಕ ಡಾ. ಅಜಯ್ ಸಿಂಗ್ ಭಾಗವಹಿಸಲಿದ್ದಾರೆ. ಅಲ್ಲದೇ ಪಕ್ಕದ ಮಹಾರಾಷ್ಟ್ರ ರಾಜ್ಯ ಹಾಗೂ ತೆಲಂಗಾಣದ ಅನೇಕರು ಭಾಗವಹಿಸಲಿದ್ದಾರೆ ಆದ್ದರಿಂದ ಪ್ರವಾದಿ ಅವರ 1500 ನೇ ಭವ್ಯ ವಾರ್ಷಿಕೋತ್ಸವದ ಸಂದರ್ಭದಲ್ಲಿ ನಡೆಯಲಿರುವ ಸೂಫಿ ಸಂತ ಸಮ್ಮೇಳನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕೋರಿದರು.

ಮಾಜಿ ವಿಧಾನ ಪರಿಷತ್ ಸದಸ್ಯರಾದ ವಿಜಯಸಿಂಗ್ ಮಾತನಾಡಿದರು. ಕೆ.ಪಿ.ಸಿ.ಸಿ ಪ್ರಧಾನ ಕಾರ್ಯದರ್ಶಿ ಮನ್ನಾನ್ ಸೇಠ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದತ್ತಾತ್ರಿ ಮೂಲಗೆ, ಸಯ್ಯದ್ ಅಲಿ ಖಾದ್ರಿ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಖಡಕೇಶ್ವರ ಶಾಲೆಯ ಅಂಗಳದಲ್ಲಿ ಅರಳಿದ ರಂಗೋಲಿ

ಭಾಲ್ಕಿ :ವಿದ್ಯಾರ್ಥಿಗಳಲ್ಲಿ ಸ್ಮರಣ ಶಕ್ತಿ ಹೆಚ್ಚಿಸಲು ಹಾಗೂ ಎಸ್ಸೆಸ್ಸೆಲ್ಸಿ ಪರೀಕ್ಷೆ ಫಲಿತಾಂಶ ಸುಧಾರಣೆಗೆ ಪಠ್ಯ ಆಧಾರಿತ ರಂಗೋಲಿ ಸ್ಪರ್ಧೆ ಹಮ್ಮಿಕೊಂಡಿರುವುದು ಉತ್ತಮ ಮಾರ್ಗ ಎಂದು ಕರಡ್ಯಾಳ ಚನ್ನಬಸವೇಶ್ವರ ಗುರುಕುಲ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಬಸವರಾಜ ಮೊಳಕೀರೆ ಹೇಳಿದರು.

ಪಟ್ಟಣದ ಖಡಕೇಶ್ವರ ಪ್ರೌಢ ಶಾಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ಸಂಬಂಧಿಸಿದಂತೆ ಪಠ್ಯ ಆಧಾರಿತ ವಿಷಯಗಳನ್ನು ಒಳಗೊಂಡಿರುವ ರಂಗೋಲಿ ಸ್ಪರ್ಧೆ ಉದ್ಘಾಟಿಸಿ ಅವರು ಮಾತನಾಡಿದರು.

ರಂಗೋಲಿ ಸ್ಪರ್ಧೆಯಲ್ಲಿ ಎಸ್ಸೆಸ್ಸೆಲ್ಸಿ ಪರೀ–ಕ್ಷೆಗೆ ಸಂಬಂಧಿಸಿದಂತೆ ಪರೀಕ್ಷೆಗೆ ಬರುವ ಮಹತ್ವದ ಪ್ರಶ್ನೆಗಳನ್ನು ವಿದ್ಯಾರ್ಥಿಗಳು ಬಣ್ಣದ ರಂಗೋಲಿ ಹಾಕಿ ಚಿತ್ರ ಬಿಡಿಸುವ ಮೂಲಕ ತಮ್ಮ ಕಲಿಕಾ ಸಾಮರ್ಥ್ಯ ಹೆಚ್ಚಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

ನಿರ್ಣಾಯಕರಾಗಿ ಭಾಗವಹಿಸಿದ ಸಿಆರ್‌ಪಿ ಪ್ರಭು ಡಿಗ್ಗೆ ಮಾತನಾಡಿ ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಗೆ ರಂಗೋಲಿಯಂತಹ ಸ್ಪರ್ಧೆಗಳು ಪೂರಕ ಎಂದು ತಿಳಿಸಿದರು.

ಮುಖ್ಯಗುರು ಆನಂದ ಕಲ್ಯಾಣೆ ಮಾತನಾಡಿದರು. ಈ ಸಂದರ್ಭದಲ್ಲಿ ಉದಯ ಜೋಶಿ, ಪ್ರಕಾಶ ರುದನೂರೆ, ದಿಲೀಪ ಘಂಟೆ, ಅಂಜಲಿ ಜೋಶಿ, ಜಯಪ್ರಕಾಶ ಸಹಾನೆ, ಶುಭಂ ರಾಯವಾಡೆ ಇದ್ದರು.

**ರಂಗೋಲಿಯಲ್ಲಿ ಅರಳಿದ ಚಿತ್ರಗಳು**

**ವಿಜ್ಞಾನ, ಸಮಾಜ ವಿಜ್ಞಾನ ಮತ್ತು ಗಣಿತ ವಿಷಯಗಳನ್ನು ವಿದ್ಯಾರ್ಥಿಗಳು ಉತ್ಸಾಹದಿಂದ ರಂಗೋಲಿ ಬಿಡಿಸಿದರು. ಮನುಷ್ಯನ ಮೆದುಳು, ಹೃದಯ ಸೇರಿ ಮುಂತಾದ ಚಿತ್ರಗಳು ಬಣ್ಣ ಬಣ್ಣದ ರಂಗೋಲಿಯಲ್ಲಿ ಅರಳಿಸಿ ಗಮನ ಸೆಳೆದರು**

# ಪೌರ ಕಾರ್ಮಿಕರಿಗೆ 8 ತಿಂಗಳ ಸಂಬಳ ಬಾಕಿ, ಮಹಾನಗರ ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕಿ ಹೋರಾಟ ಎಚ್ಚರಿಕೆ



**ಮಲ್ಲಮ್ಮ ನುಡಿ ವಾರ್ತೆ ಬೀದರ್:** ಬೀದರ ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಸುಮಾರು 8 ತಿಂಗಳಿನಿಂದ ಸಂಬಳವನ್ನು ಪಾವತಿಸದಿರುವುದು ಗಂಭೀರ ಸಮಸ್ಯೆಯಾಗಿ ಪರಿಣಮಿಸಿದೆ ಎಂದು ಕರ್ನಾಟಕ ಯುವ ರಕ್ಷಣಾ ವೇದಿಕೆ–ವಿದ್ಯಾರ್ಥಿ ಜಿಲ್ಲಾ ಘಟಕ ಕಳವಳ ವ್ಯಕ್ತಪಡಿಸಿದೆ.

ಪೌರ ಕಾರ್ಮಿಕರು 8 ತಿಂಗಳಿನಿಂದ, ನೀರಿನ ಟ್ಯಾಂಕರ್ ಸಿಬ್ಬಂದಿ/ಕಾರ್ಮಿಕರು 3 ತಿಂಗಳಿನಿಂದ ವೇತನವಿಲ್ಲದೆ ಕೆಲಸ ಮಾಡುತ್ತಿರುವುದು ಉಲ್ಲೇಖಿಸಲಾಗಿದೆ.

ಈ ಕಾರಣದಿಂದ ಕಾರ್ಮಿಕರು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದು, ಖಾಸಗಿ ಸಾಲಕ್ಕೆ ಸಿಲುಕುವುದು, ಮಾನಸಿಕ ಒತ್ತಡ, ಕುಟುಂಬದ ಮೂಲಭೂತ ಅಗತ್ಯಗಳನ್ನು ಪೂರೈಸಲು ಆಗದ ಸ್ಥಿತಿ ಎದುರಾಗುತ್ತಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಅದೇ ವೇಳೆ, ಬೀದರ್ ನಗರದ ರಸ್ತೆಗಳನ್ನು ತಕ್ಷಣ ದುರಸ್ತಿ ಮಾಡುವಂತೆ ಸಂಘಟನೆ ಮನವಿ ಮಾಡಿದೆ. ಹದಗೆಟ್ಟಿರುವ ರಸ್ತೆಗಳ ಕಾರಣದಿಂದ ವಿದ್ಯಾರ್ಥಿಗಳು, ವಯೋವೃದ್ಧರು, ಗರ್ಭಿಣಿಯರು ಹಾಗೂ ಸಾಮಾನ್ಯ ನಾಗರಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

“ಒಂದು ವಾರದೊಳಗೆ ಸಂಬಳ ಬಿಡುಗಡೆ ಹಾಗೂ ರಸ್ತೆ ದುರಸ್ತಿ ಕಾರ್ಯ ಆರಂಭವಾಗದಿದ್ದರೆ, ಮಹಾನಗರ ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕಿ ತೀವ್ರ ಹೋರಾಟ ಹಮ್ಮಿಕೊಳ್ಳಲಾಗುತ್ತದೆ” ಎಂದು ಸ್ಪಷ್ಟಪಡಿಸಿದೆ.

ಈ ಸಂದರ್ಭದಲ್ಲಿ ಗುರುದಾಸ ಅಮದಲಪಾಡ(ಯುವ ಘಟಕ ಜಿಲ್ಲಾಧ್ಯಕ್ಷರು), ವಿಲ್ಸನ್ ದೊಡ್ಡಮನಿ(ಜಿಲ್ಲಾ ಅಧ್ಯಕ್ಷರು), ಸಂತೋಷ ಕೋಟೆ, ಮಲ್ಲಿಕಾರ್ಜುನ ವಗ್ಗೆ, ಪರಮೇಶ ರಾಜಗೀರಾ ಉಪಸ್ಥಿತರಿದ್ದರು.

# ಭಾಯಿ ಶಾಮಲಾಲಜಿ ಅವರ ಬಲಿದಾನ ದಿನಾಚರಣೆ: ಠಾಕೂರ್




ಬೀದರ್: ಈ ತಿಂಗಳ 17ರಂದು ನಗರದ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ನಿಜಾಮನ ವಿರೂದ್ಧ ಈ ಭಾಗದ ಸ್ವತಂತ್ರಕ್ಕಾಗಿ ಹೋರಾಡಿದ ವೀರರಾದ ಭಾಯಿ ಶಾಮಲಾಲಜಿ ಅವರ ಬಲಿದಾನ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಭಾಯಿ ಶಾಮಲಾಲಜಿ ಬಲಿದಾನ ದಿನಾಚರಣೆ ಸಮಿತಿ ಅಧ್ಯಕ್ಷರಾದ ಈಶ್ವರಸಿಂಗ್ ಠಾಕೂರ್ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 30ರ ದಶಕದಲ್ಲಿ ಬೀದರ್ ಜಿಲ್ಲೆಯಲ್ಲಿ ದೇಶದ ಸ್ವಾತಂಕ್ಕಾಗಿ ಹೋರಾಟದ ಕಿಚ್ಚು ಹೊತ್ತಿಸಿದರು. ಶಾಮಲಾಲಜಿ ಅವರು ಭಾಲ್ಕಿ ತಾಲೂಕಿನ ಅಂಬೇಸಾಂಗವಿ ಗ್ರಾಮದಲ್ಲಿ ಜನಿಸಿದರು. ಹುಮನಾಬಾದ್ ತಾಲೂಕಿನ ಹಳ್ಳಿಖೇಡದ ಅವರ ಸೋದರ ಮಾವನ ಮನೆಯಲ್ಲಿ ಬೆಳೆದು ಹೈದ್ರಾಬಾದಿನ ಉಸ್ಮಾನಿಯಾ ವಿಶ್ವವಿದ್ಯಾಲಯದಲ್ಲಿ ಕಾನೂನು ಪದವಿ ಪಡೆದ ಅವರು ನಿಜಾಮನ ಆಳ್ವಿಕೆಯಿಂದ ಸ್ವಾತಂತ್ರ ಪಡೆಯಲು ಇಬ್ಬರು ಸಹೋದರರು ಹೋರಾಟ ಆರಂಭಿಸಿದರು ಎಂದರು.

ಬ್ರಿಟೀಷರು ಹಾಗೂ ನಿಜಾಮನ ಆಳ್ವಿಕೆಯಲ್ಲಿ ಇಬ್ಬರು ಸಹೋದರರಾದ ಶಾಮಲಾಲ ಹಾಗೂ ಬನ್ಸಿಲಾಲ ಮತ್ತು ಸುಮಾರು 200ಕ್ಕೂ ಹೆಚ್ಚು ಆರ್ಯ ಸಮಾಜದವರನ್ನು ಬಂಧಿಸಿ ಅವರನ್ನು ಇಲ್ಲಿನ ಜೈಲಿನಲ್ಲಿಟ್ಟಿದ್ದರು ಅಲ್ಲಿ ಅವರಿಗೆ ಚಿತ್ರ ಹಿಂಸೆ ನೀಡಿದಲ್ಲದೇ ಆಹಾರದಲ್ಲಿ ವಿಷ ಸೇರಿಸಿ 1938 ಡಿಸೆಂಬರ್ 17ರಂದು ಅವರ ಹತ್ಯೆ ಮಾಡಲಾಯಿತು. ಇದರ ಬಗ್ಗೆ ಯುವ ಪೀಳಿಗೆಗೆ ಮಾಹಿತಿ ಇಲ್ಲ ಹೀಗಾಗಿ ಭಾಯಿ ಶ್ಯಾಮಲಾಲ್ ಅವರು ಹುತಾತ್ಮರಾದ ಡಿ.17ರಂದು ಬೀದರ್‌ನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಜೈಲಿನಲ್ಲಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿ ಅಲ್ಲಿಂದ ಮೆರವಣಿಗೆಯ ಮೂಲಕ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ನಡೆಯುವ ನಂತರ ಮುಖ್ಯ ವೇದಿಕೆಗೆ ತಲುವುದು. ರಂಗ ಮಂದಿರದಲ್ಲಿ ಸುಮಾರು 150 ಮಕ್ಕಳಿಂದ ಸಾಮೂಹಿಕ ಪ್ರಾರ್ಥನೆ ಹಾಗೂ ಭಾಯಿ ಶ್ಯಾಮಲಾಲ್ ಅವರ ಜೀವನ ಕುರಿತು ಲೇಜರ್ ಶೋ ನಡೆಯಲಿದೆ. ಅಂದಿನ ಕಾರ್ಯಕ್ರಮದಲ್ಲಿ ಬಾಯಿ ಶ್ಯಾಮಲಾಲ್ ಹುತಾತ್ಮರಾದ ಜೈಲಿನ ಕೋಣೆಯನ್ನು ಸ್ಮಾರಕವನ್ನಾಗಿ ಮಾಡಬೇಕು ಹಾಗೂ ಬೀದರ ವಿಶ್ವವಿದ್ಯಾಲಯಕ್ಕೆ ಭಾಯಿ ಶ್ಯಾಮಲಾಲ್ ಅವರ ಹೆಸರಿಡಬೇಕೆಂದು ನಿರ್ಣಯ ಕೈಗೊಳ್ಳಲಾಗುವುದು ಎಂದರು. ಇದಲ್ಲದೇ ದಯಾನಂದ ಸರಸ್ವತಿ ಅವರ 150ನೇ ಜಯಂತಿ ಹಾಗೂ ಆರ್ಯ ಸಮಾಜ ಸ್ಥಾಪನೆಯ ದಿನವನ್ನು ಕೂಡ ಆಯೋಜಸಲಾಗಿದೆ. ಈ ಸಮಾರಂಭದಲ್ಲಿ ಆರ್ಯ ಸಮಾಜದ ಅಖಿಲ ಭಾರತೀಯ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ವಿನಯ ಆರ್ಯ, ರಾಜ್ಯಾಧ್ಯಕ್ಷ ಸಂಜಯ ಮಿಸ್ಕಿನ್ ಭಾಯಿ ಬನ್ಸಿಲಾಲ್ ಅವರ ವಂಶಸ್ಥರು ಪಾಲ್ಗೋಳ್ಳುವರು ಎಂದು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಸಮಿತಿಯ ಗೌರವಾಧ್ಯಕ್ಷ ರಾಜಶೇಖರ್ ನಾಗಮೂರ್ತಿ, ಪ್ರಧಾನ ಕಾರ್ಯದರ್ಶಿ ರತಿನ ಕಮಲ್, ಶಾಮಲಾಲಜಿ ಅವರ ವಂಶಸ್ಥರಾದ ಶುಪೊಸ್ ಪಾಣಿ ಆರ್ಯ, ಮಹೇಶ್ವರ ಸ್ವಾಮಿ, ಪ್ರವೀಣ ಬೋಳೆ, ರವಿ ಡೋಯಿಜೋಡೆ, ಮೋಹನ ಬಚ್ಚಾ, ಸತ್ಯಪ್ರಕಾಶ ಆರ್ಯ ಮತ್ತಿತರರು ಇದ್ದರು.

# ಮಹಿಳೆಯರಿಗಾಗಿ ಕುರಾನ್ ಪ್ರವಚನ 7 ರಂದು

**ಮಲ್ಲಮ್ಮ ನುಡಿ ವಾರ್ತೆ ಬೀದರ್:** ಜಮಾ ಅತೆ ಇಸ್ಲಾಮಿ ಹಿಂದ್ ಸ್ಥಳೀಯ ಮಹಿಳಾ ವಿಭಾಗದ ವತಿಯಿಂದ ಡಿ. 7 ರಂದು ಬೆಳಿಗ್ಗೆ 11ಕ್ಕೆ ಇಲ್ಲಿಯ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಮಹಿಳೆಯರಿಗಾಗಿ ಕುರಾನ್ ಪ್ರವಚನ ಹಮ್ಮಿಕೊಳ್ಳಲಾಗಿದೆ.

‘ಶಾಂತಿ ಮತ್ತು ಸಮೃದ್ಧಿ ಕುಆನಿನ ಬೆಳಕಿನಲ್ಲಿ’ ಕುರಿತು ಅನುಪಮ ಮಹಿಳಾ ಮಾಸಿಕ ಉಪ ಸಂಪಾದಕಿ ಸಬೀಹಾ ಫಾತಿಮಾ ಪ್ರವಚನ ನೀಡಲಿದ್ದಾರೆ. ಬಸವ ಮಂಟಪದ ಮಾತೆ ಸತ್ಯದೇವಿ, ಜಮಾ ಅತೆ ಇಸ್ಲಾಮಿ ಹಿಂದ್ ರಾಜ್ಯ ಮಹಿಳಾ ವಿಭಾಗದ ಕಾರ್ಯದರ್ಶಿ ತಷ್ಕೀಲಾ ಖಾನಂ ಹಾಗೂ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಪ್ರತಿಮಾ ಬಜೆಜಿ ದಿವ್ಯ ಉಪಸ್ಥಿತಿ ವಹಿಸಲಿದ್ದಾರೆ.

ಕಾಂಗ್ರೆಸ್ ರಾಜ್ಯ ಮಹಿಳಾ ವಿಭಾಗದ ಉಪಾಧ್ಯಕ್ಷೆ ರಾಜಶ್ರೀ ಶ್ರೀಕಾಂತ ಸ್ವಾಮಿ, ರಾಜ್ಯ ಅಲ್ಪಸಂಖ್ಯಾತರ ಆಯೋಗದ ಸದಸ್ಯೆ ಮಂದೀಪ್ ಕೌರ್, ಮಹಾನಗರ ಪಾಲಿಕೆ ಸದಸ್ಯೆ ಚೇತನಾ ಮೋಹನ್ ಕಾಳೇಕರ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಗೀತಾ ಪಂಡಿತ ಚಿದ್ರಿ, ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ನಿರ್ದೇಶಕಿ ಮೇಹರ್ ಸುಲ್ತಾನಾ, ಹಿರಿಯ ಸ್ತ್ರೀ ರೋಗ ತಜ್ಞರಾದ ಡಾ. ಶೇಖ ಸುಮಯ್ಯಾ ಕುಸುಮ್, ಡಾ. ವಿಜಯಶ್ರೀ ಎಸ್. ಬಶೆಟ್ಟಿ, ಡಾ. ಸುಮಯ್ಯ ಫಾತಿಮಾ, ಸಾಹಿತಿ ಡಾ. ಸುನಿತಾ ಕೂಡ್ಲಿಕರ್, ಉಪನ್ಯಾಸಕಿಯರಾದ ವಿದ್ಯಾವತಿ ಬಲ್ಲೂರ, ವಿದ್ಯಾವತಿ ಹಿರೇಮಠ, ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜು ಪ್ರಾಚಾರ್ಯೆ ಡಾ. ವಿನಿತಾ ಪಾಟೀಲ, ಡಾ. ಅಮಲ್ ಷರೀಫ್, ಐಟಾ ರಾಜ್ಯ ಮಹಿಳಾ ವಿಭಾಗದ ಸಂಚಾಲಕಿ ಬಿಲ್ಕೀಸ್ ಫಾತಿಮಾ, ವಿಸ್ಡಂ ಶಿಕ್ಷಣ ಸಂಸ್ಥೆಗಳ ಸಮೂಹದ ನಿರ್ದೇಶಕಿ ಬುಶ್ರಾ ಜಮಾಲ್, ನಿವೃತ್ತ ಉಪಪ್ರಾಚಾರ್ಯೆ ಬುತುಲ್ ಸಯಿದ್ ಫಾತಿಮಾ, ಆರ್ಥಿಕ ಚಿಂತಕಿ ಸೌಜನ್ಯ ಶಶಿಕಾಂತ ಎಸ್. ಶೆಂಬೆಳ್ಳಿ, ಜಿ.ಐ.ಓ. ಜಿಲ್ಲಾ ಸಂಚಾಲಕಿ ಸೈಕಾ ಸಬಾ ಹಾಗೂ ಸ್ಥಳೀಯ ಘಟಕದ ಅಧ್ಯಕ್ಷೆ ಡಾ. ಬುಶ್ರಾ ಐಮನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಇದೇ ವೇಳೆ ಕುಆನ್ ಸಂದೇಶ ಪ್ರದರ್ಶನ (ಕಿಗಖಂಓ ಒಂಖ–ಖಂಉಇ ಇಘಿಊಃಐಖಿಐಔಓ) ವೂ ನಡೆಯಲಿದೆ.

ಮಹಿಳೆಯರು ಪ್ರವಚನ ಕಾರ್ಯಕ್ರಮದ ಸದುಪಯೋಗ ಪಡೆಯಬೇಕು ಎಂದು ಜಮಾ ಅತೆ ಇಸ್ಲಾಮಿ ಹಿಂದ್ ಜಿಲ್ಲಾ ಮಹಿಳಾ ವಿಭಾಗದ ಸಂಚಾಲಕಿ ತೌಹೀದ್ ಶಿಂಧೆ ಹಾಗೂ ಬೀದರ್ ಘಟಕದ ಸಂಚಾಲಕಿ ಆಸ್ಮಾ ಸುಲ್ತಾನಾ ಮನವಿ ಮಾಡಿದ್ದಾರೆ.

# ಸಂತ ಜೋಸೆಫ್ ಕಾಲೇಜಿನ ವಿದ್ಯಾರ್ಥಿನಿಯರು ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆ



ಮಲ್ಲಮ್ಮನುಡಿವಾರ್ತೆಕಲಬುರಗಿ: ಶಾಲಾ ಶಿಕ್ಷಣ ಪದವಿ ಪೂರ್ವ ಇಲಾಖೆಯು 2025-26ನೇ ಸಾಲಿನ ವಿದ್ಯಾರ್ಥಿಗಳಿಗೆ ವಿಭಾಗ ಮಟ್ಟದ ಸಾಂಸ್ಕೃತಿಕಚಟುವಟಿಕೆಗಳಸ್ಪರ್ಧೆಯು ಡಿ.2 ರಂದು ಬಸವಕಲ್ಯಾಣದ ಬಸವೇಶ್ವರ ಪಿ ಯು ಕಾಲೇಜಿನಲ್ಲಿ ಜರುಗಿತು.

ಸಂತ ಜೋಸೆಫ್ ಪಿಯು ಕಾಲೇಜಿನ ವಿದ್ಯಾರ್ಥಿನಿಯರಾದ ಕು.ಚೇತನಾ ತಂದೆ ಮಡಿವಾಳಪ್ಪ ಕನ್ನಡ ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದು, ಕು. ಜಾಹಿದಾ ರೀಮಾ ತಂದೆ ಮ. ಅಕ್ಬಾಲ ಜರದಿ ಇಂಗ್ಲೀಷ ಮಾಧ್ಯಮ ಪ್ರಬಂಧದಲ್ಲಿ ತೃತೀಯ ಸ್ಥಾನ ಪಡೆದು ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ರಾಜ್ಯ ಮಟ್ಟದ ಸ್ಪರ್ಧೆಯು ಡಿ.15 ರಂದು ತುಮಕೂರಿನಲ್ಲಿ ಜರುಗಲಿದೆ.

ಈ ವಿದ್ಯಾರ್ಥಿನಿಯರ ಸಾಧನೆಗೆ ಕಾಲೇಜಿನ ಶೈಕ್ಷಣಿಕ ವೀಕ್ಷಕರಾದ ಸಿಸ್ಟರ ಐರೀನ್, ಸಿಸ್ಟರ್ ಅರ್ಪಿತಾ ಪ್ರಾಂಶುಪಾಲರಾದ ಸಿಸ್ಟರ್ ಶರಣಲತಾ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿ ಹರ್ಷ ವ್ಯಕ್ತಪಡಿಸಿದ್ದಾರೆಂದು ಉಪಪ್ರಾಚಾರ್ಯ ಡಾ.ಚಿ.ಸಿ ನಿಂಗಣ್ಣ ಪತಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರಂಜಾ ಸಂತ್ರಸ್ತರಿಗೆ ಪರಿಹಾರ ವಿತರಿಸಿ: ಲಕ್ಷ್ಮಣ ದಸ್ತಿ




ಬೀದರ್: ಕಾರಂಜಾ ನೀರಾವರಿ ಯೋಜನೆಗೆ ಭೂಮಿ ಕಳೆದುಕೊಂಡ ರೈತ ಸಂತ್ರಸ್ತರಿಗೆ ದೀರ್ಘ ಕಾಲದಿಂದ ಬಾಕಿ ಇರುವ ಪರಿಹಾರವನ್ನು 2026ರ ಜನವರಿಯಲ್ಲಿ ಬಿಡುಗಡೆ ಮಾಡಬೇಕು ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ (ಕೆಕೆಹೆಚ್‌ಎಸ್) ಸಂಸ್ಥಾಪಕ ಅಧ್ಯಕ್ಷರಾದ ಡಾ.ಲಕ್ಷಣ ದಸ್ತಿ ಆಗ್ರಹಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಉದ್ದೇಶಿಸಿಮಾತನಾಡಿರುವ ಅವರು, 1978-79 ಮತ್ತು 1985-86ರ ಅವಧಿಯಲ್ಲಿ ಭೂಮಿ ನೀಡಿದ ಬಡ ಹಾಗೂ ಮುಗ್ಧ ರೈತರಿಗೆ ನ್ಯಾಯಾಲಯದ ತೀರ್ಪುಗಳನ್ನು ಆಧರಿಸಿ, ಮಾನವೀಯತೆಯ ಮಾನದಂಡದಂತೆ ಪ್ರತಿ ಎಕ-ರೆಗೆ ನ್ಯಾಯಯುತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು. ಸಿದ್ಧರಾಮಯ್ಯನೇತೃತ್ವದ ಸರ್ಕಾರ ತಕ್ಷಣ ಈ ಕುರಿತು ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.

07-04-2025ರಂದು ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ರಚನೆಯಾದ ತಾಂತ್ರಿಕ ಸಮಿತಿಯು ಮೂರು ತಿಂಗಳೊಳಗೆ ವರದಿ ನೀಡಬೇಕಾಗಿತ್ತು. ಆದರೆ ಪ್ರಾದೇಶಿಕ ಆಯುಕ್ತರ ವರ್ಗಾವಣೆಯಿಂದಾಗಿ ವರದಿ ವಿಳಂಬವಾಗಿದ್ದು, ಡಿಸೆಂಬರ್ ಅಂತ್ಯದೊಳಗೆ ವರದಿ ಪಡೆದು 2026ರ ಜನವರಿ ಆರಂಭದಲ್ಲೇ ಪರಿಹಾರ ಮೊತ್ತ ಬಿಡುಗಡೆ ಮಾಡಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹೀಂ ಖಾನ್ ಸೇರಿದಂತೆ ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು ಸಂಘಟಿತ ರಾಜಕೀಯ ಇಚ್ಛಾಶಕ್ತಿ ಪ್ರದರ್ಶಿಸಿ ರೈತರಿಗೆ ನ್ಯಾಯ ಒದಗಿಸಬೇಕು. ಸರ್ಕಾರ ವಿಳಂಬ ನೀತಿ ಅನುಸರಿಸಿದರೆ ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿಯ ಮೂಲಕ ಹೋರಾಟ ತೀವ್ರಗೊಳ್ಳಲಿದೆ ಎಂದು ಎಚ್ಚರಿಕೆ ನೀಡಿದರು.

ಅಧಿಕೃತವಾಗಿ ಸ್ವಾಧೀನಪಡಿಸಿಕೊಂಡ ಹೆಚ್ಚುವರಿ ಜಮೀನಿಗೂ ಸಮಗ್ರ ಏಕರೂಪ ದರ ನಿಗದಿ ಮಾಡಿ ಹಣ ಪಾವತಿಸಬೇಕು. ಹಣ ಮಂಜೂರಾದರೂ ವಿಳಂಬ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

**ಪ್ರತ್ಯೇಕ ರಾಜ್ಯದ ಬೇಡಿಕೆಗೆ ತೀವ್ರ ವಿರೋಧ:**

ಪತ್ರಿಕಾಗೋಷ್ಠಿಯಲ್ಲಿಮಾತನಾಡಿದಡಾ. ಲಕ್ಷಣದಸ್ತಿ, ಉತ್ತರಕರ್ನಾಟಕವನ್ನು ಪ್ರತ್ಯೇಕ ರಾಜ್ಯವಾಗಿಸಬೇಕೆಂಬ ಬೇಡಿಕೆಯನ್ನು ತೀವ್ರವಾಗಿ ಖಂಡಿಸಿದರು. ರಾಜು ಕಾಗೆ ಅವರು ರಾಷ್ಟ್ರಪತಿಗೆ ಬರೆದಿರುವ ಪತ್ರವು ಅನಾವಶ್ಯಕ ಮತ್ತು ಪ್ರಾದೇಶಿಕ ಏಕತೆಗೆ ಧಕ್ಕೆ ಉಂಟು ಮಾಡುವಂತದ್ದು ಎಂದು ದಸ್ತಿ ಆರೋಪಿಸಿದರು.

"ಕಲ್ಯಾಣ ಕರ್ನಾಟಕವು ವಿಶಾಲ ಕರ್ನಾಟಕದ ಅವಿಭಾಜ್ಯ ಅಂಗವಾಗಿದೆ. 371(ಎ) ಅನುಷ್ಠಾನ, -5,000 ಕೋಟಿ ವಿಶೇಷ ಅನುದಾನದ ಮೂಲಕ ನಮ್ಮ ಭಾಗದ ಅಭಿವೃದ್ಧಿ ನಡೆಯುತ್ತಿದೆ. ಆದರೆ ಕೆಲವರು ಹೊಟ್ಟೆಕಿಚ್ಚಿನಿಂದ ರಾಜ್ಯ ವಿಭಜನೆಗೆ ಯತ್ನಿಸುತ್ತಿದ್ದಾರೆ" ಎಂದು ಅವರು ಕಿಡಿಕಾರಿದರು.

ಶಾಸಕ ರಾಜು ಕಾಗೆ ಅವರನ್ನು ನಿಗಮ ಮಂಡಳಿ ಅಧ್ಯಕ್ಷಸ್ಥಾನದಿಂದ ಇಳಿಸಿ, ಮಲ್ಲಿಕಾರ್ಜುನ ಖರ್ಗೆ ಅವರು ಶಿಸ್ತು ಕ್ರಮ ಜರುಗಿಸಿ ಪಕ್ಷದಿಂದ ಉಚ್ಚಾಟಿಸಬೇಕು. ಮೈಸೂರು ಕರ್ನಾಟಕವನ್ನು ವಿಭಜಿಸುವ ಬೇಡಿಕೆಯನ್ನೂ ಸಹ ಉಗ್ರವಾಗಿ ಖಂಡಿಸುವುದಾಗಿ ಅವರು ಹೇಳಿದರು. ವಿದ್ವಾಂಸರಾದ ಪ್ರೊ. ಆರ್.ಕೆ ಹುಡಗಿ ಮಾತನಾಡಿದರು.

ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿ ಅಧ್ಯಕ್ಷ ಚಂದ್ರಶೇಖರ ಪಾಟೀಲ ಹುಚಕನಳ್ಳಿ, ಡಾ. ಬಸವರಾಜ ದೇಶಮುಖ, ವಿನಯಕುಮಾರ್ ಮಾಳ್ಗೆ, ಡಾ. ಮಾಜಿದ್ ದಾಗಿ, ಡಾ. ಅಸ್ಲಂ ಚೌಂಗೆ, ರಾಜಪ್ಪ ಕಮಲಪುರೆ, ಡಾ. ರಾಜಶೇಖರ ರಂಜೋಳಖೇಣಿ, ರೋಹನಕುಮಾರ್, ಭೀಮರೆಡ್ಡಿ. ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.

# ಸಚಿವರಾದ ಈಶ್ವರ ಬಿ.ಖಂಡ್ರೆ ಅವರ ಬೀದರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ ಬೀದರ:

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಡಿಸೆಂಬರ್.5 ರಿಂದ ಡಿಸೆಂಬರ್.7 ರವರೆಗೆ ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅವರು ಡಿಸೆಂಬರ್.5 ರಂದು ರಾತ್ರಿ 8 ರಿಂದ 9 ಗಂಟೆಯವರೆಗೆ ಬೀದರನ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ನಂತರ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆ.

ಡಿಸೆಂಬರ್.6 ರಂದು ಬೆಳಿಗ್ಗೆ 10 ಗಂಟೆಗೆ ಬೀದರ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಹಮ್ಮಿಕೊಂಡಿರುವ ಡಾ.ಬಿ.ಆರ್.ಅಂಬೇಡ್ಕರ್ ಮಹಾ ಪರಿನಿರ್ವಾಹಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 1 ಗಂಟೆಗೆ ಬೀದರ ಪ್ರತಾಪ ನಗರದ ಪತ್ರಿಕಾ ಭವನದಲ್ಲಿ ರಾಜ್ಯ ಅಧ್ಯಕ್ಷರು, ಮುದ್ರಣ ಮಾಧ್ಯಮ ಇವರ ಅಭಿನಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಭಾಲ್ಕಿಯ ಬಿರಾದರ್ ಐ ಹಾಸ್ಪಿಟಲ್ ಮತ್ತು ಫೆಕೊ ಸೆಂಟರ್ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಸಂಜೆ 6 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ವೃತ್ತ ಭಾಲ್ಕಿಯಲ್ಲಿ ಆಯೋಜಿಸಿರುವ ಡಾ.ಬಿ.ಆರ್. ಅಂಬೇಡ್ಕರ್ ಮಹಾ ಪರಿನಿರ್ವಾಹಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆ.

ಡಿಸೆಂಬರ್.7 ರಂದು ತಾಲ್ಲೂಕು ಪಂಚಾಯತ್ ಭಾಲ್ಕಿಯಲ್ಲಿ ಭಾಲ್ಕಿ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಲಿದ್ದಾರೆ. ಮಧ್ಯಾಹ್ನ 1 ರಿಂದ ಸಂಜೆ 6 ರವರೆಗೆ ಬೀದರನ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಸಂಜೆ 7 ಗಂಟೆಗೆ ಬಸವಕಲ್ಯಾಣದಲ್ಲಿ ಸೂಫಿ ಸಂತ ಕಾರ್ಯಕ್ರಮದಲ್ಲಿ ಭಾಗವಹಿಸುವವರು.

ನಂತರ ಬಸವಕಲ್ಯಾಣದಿಂದ ಭಾಲ್ಕಿಗೆ ಪ್ರಯಾಣೀಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಂದು ಕೊರತೆ ಸಂವಾದ ಸಭೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕಲಬುರಗಿ ವೃತ್ತದ ವ್ಯಾಪ್ತಿಯಲ್ಲಿ ಬರುವ ಕಲಬುರಗಿ ಗ್ರಾಮೀಣ ವಿಭಾಗ -1 ರಡಿಯಲ್ಲಿ ಬರುವ ಅಫಜಲಪುರ ಉಪ-ವಿಭಾಗದ ಗ್ರಾಹಕರ ಕುಂದು ಕೊರತೆ ಸಂವಾದ ಸಭೆಯನ್ನು ಡಿಸೆಂಬರ್ 5 ರಂದು ಅಫಜಲಪೂರ. ಉಪ-ವಿಭಾಗದ ಕಚೇರಿಯಲ್ಲಿ ಬೆಳಿಗ್ಗೆ 11.30 ಗಂಟೆಗೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ) ಕ. ಮತ್ತು ಪಾ ಉಪವಿಭಾಗದ ಕಚೇರಿಯಲ್ಲಿ ಸಂವಾದ ಸಭೆಯನ್ನು ಅಧೀಕ್ಷಕ ಅಭಿಯಂತರರು (ವಿ) ಕಾ ಮತ್ತು ಪಾ. ವೃತ್ತದ ಜೇಸ್ಕಾಂ ಕಲಬುರಗಿ ಅವರ ಅಧ್ಯಕ್ಷತೆಯ ಜರುಗುವುದು ಎಂದು ಕಾರ್ಯ ಮತ್ತು ಪಾಲನೆ ವೃತ್ತ ಗು.ವಿ.ಸ.ಕಂ.ನಿ ಕಲಬುರಗಿಯ ಅಧೀಕ್ಷಕ ಅಭಿಯಂತರರು (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುವಿಗು 69 ನೇಮಹಾಪರಿನಿರ್ವಾಣ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಡಾ. ಬಿ.ಆರ್. ಅಂಬೇಡ್ಕರ್ ಅವರ 69ನೇ ಮಹಾಪರಿನಿರ್ವಾಣ ದಿನಾಚರಣೆಯ ಅಂಗವಾಗಿ ಡಿಸೆಂಬರ್ 6 ರಂದು 2025 ರಂದು ಬೆಳಿಗ್ಗೆ 10:30 ಗಂಟೆಗೆ ವಿಶ್ವವಿದ್ಯಾಲಯ ಕಾರ್ಯಸೌಧ, ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಗುಲಬರ್ಗಾ ವಿಶ್ವವಿದ್ಯಾಲಯ ಕುಲಪತಿಗಳು ಪ್ರೊ.. ಶಶಿಕಾಂತ ಎಸ್. ಉಡಿಕೇರಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಬೆಂಗಳೂರು ವಿಶ್ವವಿದ್ಯಾಲಯ ಗ್ರಂಥಪಾಲಕ ಮತ್ತು ಮಾಹಿತಿ ವಿಜ್ಞಾನ ವಿಭಾಗ ಹಾಗೂ ಗ್ರಂಥಾಪಲರಾದ ಪ್ರಬಾರ ಪ್ರಾಧ್ಯಾಪಕರಾದ ಡಾ.. ರಘುನಂದನ್, ಮುಖ್ಯ ಅತಿಥಗಳಾಗಿ ಭಾಗವಹಿಸುವರು.

ಅತಿಥಿಗಳಾಗಿ ಗುಲಬರ್ಗಾ ವಿಶ್ವವಿದ್ಯಾಲಯ ಸಿಂಡಿಕೇಟ್ ಸದಸ್ಯರಾದ ಎಸ್.ಪಿ. ಸುಳ್ಳದ್, ವಿದ್ಯಾಪರಿಷತ್ ಸದಸ್ಯರಾದ ಡಾ. ದೇವಿದಾಸ ಮಾಲೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

# ಅಧ್ಯಕ್ಷರು ನಿರ್ದೇಶಕರಿಗೆ ಅಭಿನಂದನಾ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಅಖಂಡ ಕರ್ನಾಟಕ ವೀರಶೈವ ಲಿಂಗಾಯತ ಸಮಾಜದ ಜಿಲ್ಲಾ ಘಟಕದ ವತಿಯಿಂದ ನೂತನವಾಗಿ ಆಯ್ಕೆಯಾದ ಕಲಬುರಗಿ - ಯಾದಗಿರಿ ಜಿಲ್ಲಾ ಸಹಕಾರ ಬ್ಯಾಂಕ್ ಅಧ್ಯಕ್ಷರು ಹಾಗೂ ನಿರ್ದೇಶಕರಿಗೂ ಅಭಿನಂದನಾ ಸಮಾರಂಭವನ್ನು ಕೈಲಾಸ ನಗರದಲ್ಲಿ ಹಮ್ಮಿಕೋಳಲಾಯಿತು.

ಕಲಬುರಗಿ - ಯಾದಗಿರಿ ಜಿಲ್ಲಾ ಸಹಕಾರ ಬ್ಯಾಂಕ್ ನೂತನ ಅಧ್ಯಕ್ಷ ವಿಠ್ಠಲ್. ವಿ. ಯಾದವ್, ನಿರ್ದೇಶಕರಾದ ಸುರೇಶ.ಆರ್. ಸಜ್ಜನ, ಬಸವರಾಜ ಪಾಟೀಲ್ ನರಬೋಳ, ಬಸವರಾಜ ಪಾಟೀಲ್ ಚಿಂಚೋಳ್ಳಿ, ಅಶೋಕ್. ಕೆ. ಸಾವಳೇಶ್ವರ ಇವರನ್ನು ಸನ್ಮಾನಿಸಲಾಯಿತು.

ಪ್ರಾಸ್ಥವಿಕವಾಗಿ ಅಖಂಡ ಕರ್ನಾಟಕ ವೀರಶೈವ ಲಿಂಗಾಯತ ಸಮಾಜದ ರಾಜ್ಯಾಧ್ಯಕ್ಷರಾದ ಮಲ್ಲಿಕಾರ್ಜುನ ರೆಡ್ಡಿ ಅಮ್ಮಾಪುರ ಅವರು ಮಾತನಾಡಿ ನಮ್ಮ ಸಮಾಜದ ಸನ್ಮಾನ ಸ್ವೀಕರಿಸಿದ ಅಧ್ಯಕ್ಷರು ಹಾಗೂ ನಿರ್ದೇಶಕರು ಸಹಕಾರ ಕ್ಷೇತ್ರದಲ್ಲಿ ಸಾಧನೆ ಮಾಡಿ ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿ ಅಭಿನಂದಿಸಿದರು. ಕಲಬುರಗಿ - ಯಾದಗಿರಿ ಜಿಲ್ಲಾ ಸಹಕಾರ ಬ್ಯಾಂಕ್ ಅಧ್ಯಕ್ಷ ಸಹಕಾರ ಬ್ಯಾಂಕ್ ವಿಠ್ಠಲ್. ವಿ. ಯಾದವ್ ಅವರು ಮಾತನಾಡಿ ನಮ್ಮ ಅವಧಿಯಲ್ಲಿ ಉತ್ತಮವಾಗಿ ಅಭಿವೃದ್ಧಿ ಪಡಿಸುತ್ತೇವೆ. ರೈತರಿಗೆ ಸಾಲ ವಿತರಣೆ ಮಾಡುತ್ತೇವೆ. ರೈತರಿಗೆ ಉತ್ತೇಜನ ನೀಡಲಾಗುವುದು.

ಬ್ಯಾಂಕ್ ನ ಕ್ರಿಯಾಶೀಲ ಇಡಲಾಗುವುದು ಎಂದು ಹೇಳಿದರು.

ಕಾಂಗ್ರೆಸ್ ಮುಖಂಡರಾದ ಶರಣು ಬುಸನೂರ, ಮಲ್ಲನಗೌಡ ಪೋಲಿಸ ಪಾಟೀಲ್ ಕಲಹಂಗರಗ, ಅಖಂಡ ಕರ್ನಾಟಕ ವೀರಶೈವ ಲಿಂಗಾಯತ ಸಮಾಜದ ಜಿಲ್ಲಾಧ್ಯಕ್ಷ ಪ್ರಿನ್ಸ್ ಅನಿಲ್ ನೆನೆಗಾರ, ಮಹಿಳಾ ಘಟಕದ ಕಲ್ಬುರ್ಗಿ ಜಿಲ್ಲಾಧ್ಯಕ್ಷೆ ಕು. ಭಾಗ್ಯಶ್ರೀ .ಎಮ್. ಪಾಟೀಲ್,

ಯಾದಗಿರಿ ಜಿಲ್ಲಾಧ್ಯಕ್ಷ ಸಿದ್ದಲಿಂಗರೆಡ್ಡಿ ಯಾದಗಿರಿ, ಕಲ್ಬುರ್ಗಿ ಜಿಲ್ಲೆಯ ವಿದ್ಯಾರ್ಥಿ ಘಟಕದ ಜಿಲ್ಲಾಧ್ಯಕ್ಷ ಪ್ರತೀಕ್ ಮಠಪತಿ ಇದ್ದರು. ಈ ಕಾರ್ಯಕ್ರಮವನ್ನು ಬಸಮ್ಮ ವೈದ್ಯ ಸ್ವಾಗತಿಸಿದರು,

ಅಭಿಪಾಟೀಲ್ ನಿರೂಪಿಸಿದರು, ವಂದನಾರ್ಪಣೆಯನ್ನು ಶಂಕರಗೌಡ ಪಾಟೀಲ್ ಮಾಡಿದರು. ಮಂಗಲಾ ಕಂತಿ, ಸಂಗಮ್ಮ, ಬಸಮ್ಮ, ಕನ್ಯಾಕುಮಾರಿ, ಸದಾನಂದ, ಭಾಗೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಕಲಬುರಗಿ: ನಗರದ ಸೂಪರ್ ಮಾರ್ಕೆಟನಲ್ಲಿರುವ ಶ್ರೀ ದತ್ತ ಮಂದಿರದಲ್ಲಿ ಶ್ರೀ ಗುರುದತ್ತ 41ನೇ ಜಯಂತೋತ್ಸವ ನಿಮಿತ್ತ ಶ್ರೀ ದತ್ತ ಮಂದಿರ ದೇವಾಲಯ ಟ್ರಸ್ಟ್ ವತಿಯಿಂದ ಭಕ್ತಾಧಿಗಳಿಗೆ ಅನ್ನದಾಸೋಹ ಮಾಡಲಾಯಿತು. ಈ ಸಂದರ್ಭದಲ್ಲಿ ಗೌರವ ಅಧ್ಯಕ್ಷ ಸುಭಾಷ ಹಣಮಂತರಾವ ಜಾಧವ, ಅಧ್ಯಕ್ಷ ಚಂದ್ರದತ್ತಾ ಕಿಶನರಾವ ಕಾಳೆ, ಮರಾಠ ಸಮಾಜದ ಜಿಲ್ಲಾ ಅಧ್ಯಕ್ಷ ಆರ್.ಬಿ.ಜಗದಾಳೆ, ಉಪಾಧ್ಯಕ್ಷ ಸುರೇಶ ಗಣಪತರಾವ ಮೋರೆ, ಕಾರ್ಯದರ್ಶಿ ಶಿವಾಜಿ ವಿಠಲರಾವ ಸಾವಂತ, ಖಜಾಂಚಿ ದೀಪಕ ಅರ್ಜುನರಾವ ಘನಾತೆ, ಸದಸ್ಯರಾದ ರಮೇಶ ಮೋಹನ ಚಿಚಕೋಟೆ, ಸುರೇಶ ಧೋಂಡಿಬಾ ಜಾಧವ, ಬಸವರಾಜ ಮಲ್ಲಪ್ಪ ರಟಕಲ್, ಸುರೇಶ ಹಣಮಂತರಾವ ಜಾಧವ, ಶ್ರೀಮಂತ ರೇವಪ್ಪ ಬಿರಾದಾರ, ಶಿವಕುಮಾರ ಚಂದ್ರಶಾ ಬಾಗೋಡಿ, ಮಹಾದೇವ ರಾಜು ಕಾಕಡೆ, ದತ್ತಾ ಕೊಂಡಿಬಾರಾವ ಕಟಾರೆ, ಸಂಜಯ ವಿಠಲರಾವ ಮೋರೆ, ಸಂಜಯ ದಿಗಂಬರ ಕಾಳೆ ಹಾಗೂ ಮುಖಂಡರಾದ ರಾಜು ಎಲ್.ಕಾಕಡೆ ಸೇರಿದಂತೆ ಇತರರು ಇದ್ದರು.



ಕಲಬುರಗಿ: ಸಿದ್ದಾರ್ಥ್ ನಗರದ ಬುದ್ಧ ವಿಹಾರದ ಆವರಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಂದತ್ವ ನಿಯಂತ್ರಣ ವಿಭಾಗ ಕಲಬುರ್ಗಿ ಹಾಗೂ ಸ್ಲಂ ಜನರ ಸಂಘಟನೆ ಕರ್ನಾಟಕ ಕಲಬುರ್ಗಿ ಜಿಲ್ಲಾ ಸಮಿತಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 69ನೇ ಮಹಾ ಪರಿನಿರ್ವಾಹಣಾ ದಿನದ ಅಂಗವಾಗಿ ನಗರದಲ್ಲಿನ ಬಡ ಜನರಿಗೆ 200ಕ್ಕೂ ಹೆಚ್ಚು ಉಚಿತ ಕನ್ನಡಕಗಳನ್ನು ವಿತರಿಸಲಾಯಿತು. ಈ ಕಾರ್ಯಕ್ರಮವನ್ನು ನಗರ ಆರೋಗ್ಯಕೇಂದ್ರ ಹಿರಾಪುರದ ವೈದ್ಯಾಧಿಕಾರಿಗಳಾದ ಸುರೇಶ್ ನಾಯಕ್ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ನೇತ್ರಾಧಿಕಾರಿಗಳಾದ ಸುರೇಶ್ ಮಹೇಂದ್ರಕರ್, ಯುವ ಮುಖಂಡರಾದ ಪ್ರಕಾಶ್ ಅವರಾದಕರ್, ಸ್ಲಂ ಜನರ ಸಂಘಟನೆಯ ಪದಾಧಿಕಾರಿಗಳಾದ ಅಲ್ಲಮಪ್ರಭು ನಿಂಬರ್ಗಾ, ಬಾಬುರಾವ್ ದಡಿನಕರ್, ಬ್ರಹ್ಮಾನಂದ ಮಿಂಚಾ, ಗಣೇಶ್ ಕಾಂಬಳೆ, ಶಿವುಕುಮಾರ್ ಚಿಂಚೋಳಿ, ಕರುಣಕುಮಾರ್ ಬಂದರವಾಡ್, ಅತಿಶ ಗಾಯಕವಾಡ, ವಿಶ್ವನಾಥ ಪಟ್ಟಿದಾರ್, ಆಶಾ ಕಾರ್ಯಕರ್ತರಾದ ಜಯಶ್ರೀ, ಪಿಹೆಚ್‌ಸಿಓ ಭಾಗ್ಯಶ್ರೀ ಸೇರಿದಂತೆ ಇತರರು ಭಾಗವಹಿಸಿದ್ದರು.

## ಕರ್ನಾಟಕ ಪತ್ರಕರ್ತರ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಭರತ್ ರೆಡ್ಡಿ ಅಭಿಮತ

# ಪಾಲಿಕೆಯ ಬಜೆಟ್ ನಲ್ಲಿ ಪತ್ರಕರ್ತರ ವಿಮೆಗಾಗಿ ಅನುದಾನ ಮೀಸಲು : ಶಾಸಕ ನಾರಾ ಭಾರತ್ ರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:;

ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಪತ್ರಕರ್ತರ ಬದುಕಿಗೆ ಆಸರೆಯಾಗುವ ಉದ್ದೇಶದಿಂದ ಬಳ್ಳಾರಿಯ ಮಹಾನಗರ ಪಾಲಿಕೆಯ ಬಜೆಟ್ ನಲ್ಲಿ ಪತ್ರಕರ್ತರಿಗೆ ಜೀವ ವಿಮೆ ಮಾಡಿಲು ಅನುದಾನ ಮೀಸಲಿಟ್ಟು ನಗರ ವಾಸಿ ಪತ್ರಕರ್ತರಿಗೆ ಈ ಸೌಲಭ್ಯವನ್ನು ದೊರಕಿಸಿಕೊಡುವ ನಿಟ್ಟಿನಲ್ಲಿ ಪಾಲಿಕೆಯ ಮೇಯರ್ ಹಾಗೂ ಉಪ ಮೇಯರ್ ಸೇರಿದಂತೆ ಸದಸ್ಯರೊಂದಿಗೆ ಚರ್ಚಿಸಿ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ವಿಷಯ ಮಂಡಿಸಲಾಗುವುದು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಛೇರಿ ಅವರಣದಲ್ಲಿರುವ ಪತ್ರಿಕಾ ಭವನದಲ್ಲಿ ಇಂದು ಬೆಳಿಗ್ಗೆ ಕರ್ನಾಟಕ ಪತ್ರಕರ್ತರ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾದ ಪತ್ರಿಕಾರಂಗದಲ್ಲಿ ಕೆಲಸ ಮಾಡುವ ಪತ್ರಕರ್ತರರು ಸಹ ಯೋಧರಿದ್ದಂತೆ ಸಮಾಜವನ್ನು ಕಾಯುವ ಕೆಲಸ ಪತ್ರಕರ್ತರದ್ದು, ಆಡಳಿತ ವರ್ಗದವರು ಮಾಡುವ ತಪ್ಪುಗಳನ್ನು ತಿದ್ದು ಬಹುದೊಡ್ಡ ಜವಾಬ್ದಾರಿ ಪತ್ರಕರ್ತರದ್ದಾಗಿದೆ. ಸಮಾಜದಲ್ಲಿ ಪತ್ರಕರ್ತರ ಪಾತ್ರ ದೊಡ್ಡದು ಯಾವಾಗಲೂ ಪತ್ರಕರ್ತರು ವಿರೋದ ಪಕ್ಷದಂತೆ ಕೆಲಸ ಮಾಡಬೇಕು ಆಗ ಮಾತ್ರ ಆಡಳಿತ ಯಂತ್ರವನ್ನು ಸರಿದಾರಿಗೆ ತರಬಹುದು ಎಂದು ಹೇಳಿದರು.

ಇಂತಹ ಜವಾಬ್ದಾರಿಯುವ ಮಾಧ್ಯಮಗಳಲ್ಲಿ ಕೆಲಸ ಮಾಡುವ ಪತ್ರಕರ್ತರಿಗೆ ಸರಕಾರದ ಸೌಲಭ್ಯಗಳು ಕಡಿಮೆ ಈಗಿನ ಡಿಜಿಟಲ್ ಯುಗದಲ್ಲಿ ಪತ್ರಿಕೆಗಳು ಉಳಿಯುವುದು



ಕಷ್ಟ, ಅದರಲ್ಲಿ ಪತ್ರಕರ್ತರ ಬದುಕು ಸಹ ಕ್ಲಿಷ್ಟಕರ. ಇನ್ನು ಈಗೀಗ ಯಾವುದೇ ಪತ್ರಕರ್ತರಿಗೆ ಪತ್ರಿಕಾ ಸಂಸ್ಥೆಗಳಲ್ಲಿ ಸಂಬಳಯಿಲ್ಲ ಬರೀ ಜಾಹೀರಾತು ಕಮಿಷನ್ ಮೇಲೆ ಜೀವನ ಇಂತಹ ಬಡ ಪತ್ರಕರ್ತರಿಗೆ ಅನುಕೂಲವಾಗಲಿ ಎಂದು ಬೆಳಗಾವಿ ಮಹಾನಗರ ಪಾಲಿಕೆಯಂತೆಯೇ ನಮ್ಮ ಬಳ್ಳಾರಿ ಪಾಲಿಕೆಯಲ್ಲು ಪಾಲಿಕೆಯ ಬಜೆಟ್ ನಲ್ಲಿ ಪತ್ರಕರ್ತರ ಜೀವ ಮಿಮೆಗಾಗಿ ಅನುದಾನ ಮೀಸಲಿಡಲು ಈ ಬಾರಿಯ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಹೇಳುತ್ತಿದ್ದಂತೆ ಸಭೆಯ ವೇದಿಕೆ ಮೇಲಿದ್ದ ಪಾಲಿಕೆಯ ಮೇಯರ್ ಪಿ.ಗಾದೆಪ್ಪ, ಉಪ ಮೇಯರ್ ಮುಬೀನಾ ಧ್ವನಿಗೂಡಿಸಿ ಪತ್ರಕರ್ತರ ಆರೋಗ್ಯದ ಹಿತದೃಷ್ಟಿಯಿಂದ ಪತ್ರಕರ್ತರ ಜೊತೆ ನಿಲ್ಲುತ್ತೇವೆ ಎಂದರು. ಬಳಿಕ ಮಾತನಾಡಿದ ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಚಿದಾನಂದಪ್ಪ ಪತ್ರಕರ್ತರು ಎಂದರೆ ಕನ್ನಡಿ ಇದ್ದಂತೆ, ಕನ್ನಡಿ ಎಂದರೆ ನಾವು ಬೆಳ್ಳಗೆ ಇದ್ದರೆ ಬೆಳ್ಳಗೆ ಕಾಣುತ್ತೇವೆ, ಕಪ್ಪಾಗಿದ್ದರೆ ಕಪ್ಪಾಗೆ ಕಾಣುತ್ತೆವೆ ಆದರೆ ಬೆಳ್ಳಗೆ ಇರುವವರನ್ನ ಮುಖಕ್ಕೆ ಮಸಿ ಬಳಿದು ಕಪ್ಪಾಗೆ ತೋರಿಸಬಾರಾದು ಪತ್ರಕರ್ತರಿಗೆ ನೈಜತೆ ಇರಬೇಕು ವಾಸ್ತವ ಸುದ್ದಿಗಳನ್ನು ಪ್ರಕಟಿಸಬೇಕು ಜಾಹೀರಾತು ನೆಪದಲ್ಲಿ ಬ್ಲಾಕ್ ಮೇಲ್ ಮಾಡಬಾರದು ಬಳ್ಳಾರಿ ಹಿರಿಯ ಪತ್ರಕರ್ತರೊಬ್ಬರು ನಾನು ಅವರ ಪತ್ರಿಕೆಗೆ ಜಾಹೀರಾತು ನೀಡಿಲ್ಲವೆಂಬ ಕಾರಣಕ್ಕೆ ನನ್ನ ಮುಖಕ್ಕೆ ಮಸಿಬಳಿದು ಪ್ರಕಟ ಮಾಡಿ ಅವರ ಕೀಳುಮಟ್ಟದ ಮನಸ್ಥಿತಿಯನ್ನ ತೋರಿಸಿದ್ದರು ಅಂತಹ ಕೆಲಸಗಳು ಆಗಬಾರದು ಬಳ್ಳಾರಿ ಬಹುತೇಕ ಪತ್ರಕರ್ತರ ಒಳ್ಳೆಯ ಪತ್ರಕರ್ತರಿದ್ದಾರೆ. ಒಬ್ಬ ನನ್ನನ್ನು ತುಳಿಯೋಕೆ ನೋಡಿದರೆ ಉಳಿದ ಬಹುತೇಕ ಪತ್ರಕರ್ತರು ನನ್ನನ್ನು ಇಂದು ಬೆಳೆಸುತ್ತಿದ್ದಾರೆ. ಒಳ್ಳೆಯ ಕೆಲಸಗಳಿಗೆ ಪತ್ರಕರ್ತರ ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಕರ್ನಾಟಕ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಮುರುಗೇಶ್.ಬಿ.ಶಿವಪೂಜಿ ಪತ್ರಕರ್ತರ ರಕ್ಷಣೆಗೆ ಪತ್ರಕರ್ತರು ಅನುಭವಿಸುತ್ತಿರುವ ಸಂಕಷ್ಟಗಳಿಗೆ ಸಂಘಟನೆ ಅವಶ್ಯವಾಗಿದೆ. ಪತ್ರಕರ್ತರ ಮೇಲಿನ ದಾಳಿ ದೌರ್ಜನ್ಯ ದಬ್ಬಾಳಿಕೆಯನ್ನು ಖಂಡಿಸಲು ಪತ್ರಕರ್ತರಿಗೆ ಸಂಘಟನೆ ಬೇಕು ಎಲ್ಲಾ ಪತ್ರಕರ್ತರು ಒಂದೇ ವೇದಿಕೆಯಲ್ಲಿ ಬಂದಾಗ ಮಾತ್ರ ಪತ್ರಕರ್ತರ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯ ಇನ್ನು ತನಿಖಾ ಪತ್ರಿಕೋದ್ಯಮಕ್ಕೆ ರಕ್ಷಣೆ ಇಲ್ಲದಂತಾಗಿದೆ. ಸಮಾಜ ಎಲ್ಲಾ ಜನರಿಗೆ ಸರಕಾರದ ಸೌಲಭ್ಯಗಳಿವೆ ಆದರೆ ಸಮಾಜವನ್ನು ಕಾಪಾಡುವ ಸಮಾಜವನ್ನು ಸರಿದಾರಿಗೆ ತರುವ ಪತ್ರಕರ್ತರ ಬದುಕು ದುಸ್ತರವಾಗಿರುವುದು ವಿಷಾದನೀಯ. ನಮ್ಮ ಸಂಘಟನೆಯಿಂದ ಪತ್ರಕರ್ತರಿಗೆ ವಿಮೆ ಸೌಲಭ್ಯ ಜಾರಿಯಲ್ಲಿದ್ದು, ಪತ್ರಕರ್ತರ ಆರೋಗ್ಯ ಪತ್ರಕರ್ತರ ಆರ್ಥಿಕ ಮುಗ್ಗಟ್ಟಿಗೆ ನಮ್ಮ ಸಂಘಟನೆ ನೆರವಾಗುತ್ತಿದೆ ಎಂದರು. ಈ ವೇಳೆ ನಗರ ಶಾಸಕ ನಾರಾ ಭರತ್ ರೆಡ್ಡಿ, ಸಂಘಟನೆ ರಾಜ್ಯಾಧ್ಯಕ್ಷ ಮುರುಗೇಶ್.ಬಿ.ಶಿವಪೂಜಿ ಯವರು ಬಳ್ಳಾರಿ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳಿಗೆ ಆಯ್ಕೆಯ ಪ್ರಮಾಣ ಪತ್ರಗಳನ್ನು ವಿತರಿಸಿದರು. ಸಭೆಗೂ ಮುನ್ನ ಸಂಘದ ಜಿಲ್ಲಾ ಉಪಾಧ್ಯಕ್ಷ ಡಾ.ಗಿರೀಶ್ ಕುಮಾರ್ ಗೌಡ ಪ್ರಾಸ್ತಾವಿಕ ನುಡಿಗಳನ್ನು ಹಂಚಿಕೊಂಡರು. ಸಭೆಯ ಅಧ್ಯಕ್ಷತೆಯನ್ನು ಸಂಘದ ಜಿಲ್ಲಾಧ್ಯಕ್ಷ ಯಾಳ್ಪಿ ವಲಿಭಾಷ ವಹಿಸಿಕೊಂಡು ಮಾತನಾಡಿ ಕೊನೆಗೆ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮದ ಸಂಪೂರ್ಣ ನಿರೂಪಣೆ ವಚನ ವಿನೋದ್ ಚವ್ಹಾಣ್ ಮಾಡಿದರು.

ಈ ಸಂದರ್ಭದಲ್ಲಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಕರ್ನಾಟಕ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಮುರುಗೇಶ್.ಬಿ. ಶಿವಪೂಜಿ, ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಪಿ.ಗಾದೆಪ್ಪ, ಉಪ ಮೇಯರ್ ಶ್ರೀಮತಿ ಮುಬೀನಾ, ಮಾಜಿ ಮೇಯರ್ ಹಾಲಿ ಸದಸ್ಯೆರಾದ ಎಂ.ರಾಜೇಶ್ವರಿ ಸುಬ್ಬರಾಯುಡು, ಪಾಲಿಕೆಯ ಸದಸ್ಯರಾದ ಕುಬೇರಾ, ಪೇರಂ ವಿಕ್ಕಿ, ಅಖಂಡ ಬಳ್ಳಾರಿ ಜಿಲ್ಲೆಯ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಿಷ್ಠಿ ರುದ್ರಪ್ಪ, ಕಾಂಗ್ರೆಸ್ ಮುಖಂಡ ಸುಬ್ಬಾರಾಯುಡು, ಚಾನಾಳ್ ಶೇಖರ್, ಪಾಲಿಕೆಯ ನಾಮ ನಿರ್ದೇಶನ ಸದಸ್ಯ ಹರ್ಷದ್, ಸೇರಿದಂತೆ ರೈತ ಮುಖಂಡರು, ಸಾಮಾಜಿಕ ಕಾರ್ಯಕರ್ತರು, ಕರ್ನಾಟಕ ಪತ್ರಕರ್ತರ ಸಂಘದ ಸಿರುಗುಪ್ಪ, ಕಂಪ್ಲಿ, ಕುರುಗೋಡು, ಸಂಡೂರು, ಬಳ್ಳಾರಿ ನಗರದ ಹಲವಾರು ಪತ್ರಕರ್ತರು ಉಪಸ್ಥಿತರಿದ್ದರು.

# ಸೀತಾರಾಮ ತಾಂಡ ಗ್ರಾಮ ಪಂಚಾಯಿತಿ ಸಾರ್ವತ್ರಿಕ ಚುನಾವಣೆ ವೇಳಾಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ



ವಿಜಯನಗರ(ಹೊಸಪೇಟೆ): ಹೊಸಪೇಟೆ ತಾಲೂಕಿನ 14-ಸೀತಾರಾಮ ತಾಂಡ ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ ಮೂಲಕ ಪಂಚಾಯತಿಯ ಸದಸ್ಯ ಸ್ಥಾನಗಳನ್ನು ತುಂಬಲು ಚುನಾವಣೆಯನ್ನು ನಡೆಸಲು ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಕವಿತಾ ಎಸ್ ಮನ್ನಿಕೇರಿ ತಿಳಿಸಿದ್ದಾರೆ.

**ಚುನಾವಣೆ ವೇಳಾಪಟ್ಟಿ:** ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಡಿ.09, ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ.ಡಿ.10, ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಡಿ.12, ಮತದಾನ ಅವಶ್ಯವಿದ್ದರೆ ಮತದಾನವನ್ನು ಡಿ.21 ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಡೆಸಲಾಗುವುದು. ಮರುಮತದಾನ ಅವಶ್ಯವಿದ್ದರೆ ಡಿ.23 ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಡೆಸಲಾಗುತ್ತದೆ. ಮತಗಳ ಎಣಿಕೆಯ ದಿನಾಂಕ ಡಿ.24 ರಂದು ಬೆಳಗ್ಗೆ 8 ಗಂಟೆಯಿಂದ ಮಾಡಲಾಗುತ್ತದೆ. ಮಿಸಲಾತಿ ವಿವರ : ಸೀತಾರಾಮ ತಾಂಡದ 4 ಸ್ಥಾನಗಳ ಪೈಕಿ ಅನುಸೂಚಿತ ಜಾತಿಗೆ 02, ಅನುಸೂಚಿತ ಜಾತಿ(ಮಹಿಳೆ) 01 , ಅನುಸೂಚಿತ ಪಂಗಡ ಮಹಿಳೆ 01 ಸ್ಥಾನಗಳು, ಸೀತಾರಾಮ ತಾಂಡ (ನಲ್ಲಾಪುರ)ದ 3 ಸ್ಥಾನಗಳ ಪೈಕಿ ಅನುಸೂಚಿತ ಜಾತಿ (ಮಹಿಳೆ) 2, ಸಾಮಾನ್ಯ 01, ಸೀತಾರಾಮ ತಾಂಡ (ಹೊಸಚಿನ್ನಾಪುರ) ಸಾಮಾನ್ಯ ವರ್ಗಕ್ಕೆ 1 ಸ್ಥಾನ ಸೇರಿದಂತೆ ಒಟ್ಟು 8 ಗ್ರಾಮ ಪಂಚಾಯತಿ ಸದಸ್ಯ ಸ್ಥಾನಗಳಿಗೆ ಮಿಸಲು ನಿಗದಿಪಡಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಟಿಇಟಿ ಪರೀಕ್ಷೆಯನ್ನು ವ್ಯವಸ್ಥಿತವಾಗಿ ನಡೆಸಲು ಕ್ರಮವಹಿಸಿ : ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣಪ್ಪ

ಮಲ್ಲಮ್ಮ ನುಡಿ ವಾರ್ತೆ

ವಿಜಯನಗರ(ಹೊಸಪೇಟೆ): ಜಿಲ್ಲೆಯಲ್ಲಿ ಡಿಸೆಂಬರ್.07 ರಂದು ನಡೆಯುವ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ಪಾರದರ್ಶಕ ಹಾಗೂ ಅಚ್ಚುಕಟ್ಟಾಗಿ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಶಿಕ್ಷಕರ ಅರ್ಹತಾ ಪರೀಕ್ಷೆಯ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಗುರುವಾರ ಮಾತನಾಡಿದರು.

ಡಿಸೆಂಬರ್.07 ರಂದು ಬೆಳಿಗ್ಗೆ 9:30 ರಿಂದ 12 ಗಂಟೆಯ ವರಗೆ ಒಂದನೆಯ ಅವಧಿಯಲ್ಲಿ 5 ಪರೀಕ್ಷಾ ಕೇಂದ್ರಗಳಲ್ಲಿ 2.128 ಮತ್ತು 2 ರಿಂದ 4:30ರ ವರಗೆ ಎರಡನೆಯ ಅವಧಿಯ 19 ಪರೀಕ್ಷಾ ಕೇಂದ್ರಗಳಲ್ಲಿ 6.570 ಪರೀಕ್ಷಾರ್ಥಿಗಳು ಪರೀಕ್ಷೆಯನ್ನು ಬರೆಯಲಿದ್ದಾರೆ. ಪರೀಕ್ಷೆ ಕೇಂದ್ರದಲ್ಲಿ ಕಡ್ಡಾಯವಾಗಿ ಸಿಸಿಟಿವಿಗಳನ್ನು ಅಳವಡಿಕೆ ಮಾಡಬೇಕು ಮತ್ತು ಅವುಗಳನ್ನು ಸುಸ್ಥಿತಿಯಲ್ಲಿ ಇರಿಸಬೇಕು. ಕುಡಿಯುವ ನೀರು, ಶೌಚಾಲಯ ಸೇರಿದಂತೆ ಮೂಲಭೂತ



ಪ್ರತಿ 3 ರಿಂದ 4 ಪರೀಕ್ಷಾ ಕೇಂದ್ರಕ್ಕೆ ಒಬ್ಬರು ಮಾರ್ಗಾಧಿಕಾರಿಯನ್ನು ನೇಮಿಸಲಾಗಿದೆ. ಒಟ್ಟು 05 ಪರೀಕ್ಷಾ ಮಾರ್ಗಗಳನ್ನು ಮಾಡಲಾಗಿದ್ದು

ಕಾರ್ಯಾಲಯಕ್ಕೆ ನೀಡಬೇಕು ಎಂದರು.

ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಮಂಜುನಾಥ ಮಾತನಾಡಿ, ಪ್ರತಿ ಪರೀಕ್ಷಾ ಕೇಂದ್ರ-ಕ್ಕೆ 2 ಪೊಲೀಸ್ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ ಮತ್ತು ಪರೀಕ್ಷೆಗಳು ಸುಗಮವಾಗಿ ನಡೆಯುವ ಹಿತದೃಷ್ಟಿಯಿಂದ ಎಲ್ಲಾ ಅಗತ್ಯ ಭದ್ರತೆ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಈ ವೇಳೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ವೆಂಕಟೇಶ್ ರಾಮಚಂದ್ರಪ್ಪ, ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಸೇರಿದಂತೆ ಶಿಕ್ಷಣ ಇಲಾಖೆಯ ಅಧಿಕಾರಿ, ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಡಿ.10 ರಂದು ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆ.

ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ): ಕೃಷಿ ಇಲಾಖೆಯಿಂದ ಜಿಲ್ಲಾ ಮಟ್ಟದ ಸಿರಿಧ್ಯಾನ ಮತ್ತು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಡಿಸೆಂಬರ್.10 ರಂದು ಬೆಳಿಗ್ಗೆ.10 ಗಂಟೆಗೆ ಎನ್.ಸಿ.ಕಾಲೋನಿ, ನ್ಯಾಷನಲ್ ಕಾಲೇಜ್ ಹಿಂಭಾಗ, ಜಂಟಿ ಕೃಷಿ ನಿರ್ದೇಶಕರ ಕಾರ್ಯಾಲಯದಲ್ಲಿ ಆಯೋಜಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಸಿರಿಧಾನ್ಯ ಖಾದ್ಯಗಳು, ಸಿರಿಧಾನ್ಯಗಳಾದ ಜೋಳ, ರಾಗಿ, ನವಣೆ, ಸಜ್ಜೆ, ಹಾರಕ, ಬರಗು ಮತ್ತು ಸಾಮೆ ಬೆಳೆಗಳಿಂದ ಸಿಹಿ ಮತ್ತು ಖಾರ ಖಾದ್ಯಗಳನ್ನು ತಯಾರಿಸುವುದು. ಮರೆತು ಹೋದ ಖಾದ್ಯಗಳು (ಐಚಿಟಜ ಡಿಚಿಛಿಇ ಠಿಡಿಠಂಜಣಛಿಣ) ದೇಸಿ ತಳಿಗಳು ಪೌಷ್ಟಿಕಾಂಶದ ಮೌಲ್ಯ, ಬಳಕೆ-ಯಾಗದ ಬೆಳೆಗಳು, ಮರೆತು ಹೋದ ಆಹಾರಗಳು, ರೈತರ ಸಾಂಪ್ರಾದಾಯಿಕ, ಪರಂಪರೆ ಜಾನಪದ ಪ್ರಭೇದಗಳು ಎಂದೂ ಕರೆಯಲ್ಪಡುವ ದೇಸಿ ತಳಿಗಳು, ಸ್ಥಳೀಯ ಅಥವಾ ಸಾಂಪ್ರದಾಯಿಕ ಕೃಷಿ ಪದ್ಧತಿಯಿಂದ ಅಭಿವೃದ್ಧಿ, ನಿರ್ವಹಿಸಲ್ಪಡುವ ವಿಶಿಷ್ಟ ಗುಣಲಕ್ಷಣಗಳು, ಪೋಷಕಾಂಶಗಳಲ್ಲಿ ಸಮೃದ್ಧ ಮತ್ತು ಭೌಗೋಳಿಕ ಮೂಲಗಳ ಕಾರಣದಿಂದ ಕೆಲವೇ ರೈತರು ಬೆಳೆಯುವ ದೇಸಿ ತಳಿಗಳಿಂದ ತಯಾರಿಸುವ ಖಾದ್ಯಗಳು. ಮರೆತು ಹೋದ ಖಾದ್ಯಗಳಡಿ ಸಿರಿಧಾನ್ಯಗಳನ್ನು ಹೊರತುಪಡಿಸಿ ಇತರೆ ದೇಸಿ ತಳಿಗಳಡಿ ಬರುವ ಆಹಾರ ಮತ್ತು ಎಣ್ಣೆಕಾಳು ಬೆಳೆಗಳ, ತರಕಾರಿ ಮತ್ತು ಹಣ್ಣುಗಳ ಇತ್ಯಾದಿ ಖಾದ್ಯಗಳನ್ನು ತಯಾರಿಸುವುದು, ಪ್ರತಿ ಸ್ಪರ್ಧಿಗೆ ಒಂದೇ ತಿನಿಸು,ಖಾದ್ಯ (ಅಡುಗೆ) ಸಿಹಿ, ಖಾರ ಮತ್ತು ದೇಸಿ ತಳಿಗಳಿಂದ ತಯಾರಿಸುವ ಖಾದ್ಯಗಳ ತಿನಿಸು ಮಾಡಲು ಅವಕಾಶವಿರುತ್ತದೆ. ಜಿಲ್ಲೆಯ ಎಲ್ಲಾ ಸಾರ್ವಜನಿಕರು ಭಾಗವಹಿಸಲು ಅವಕಾಶವಿರುತ್ತದೆ.

ವಿದ್ಯಾರ್ಥಿಗಳು, ಕೃಷಿ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳಿಗೆ ಭಾಗವಹಿಸಲು ಅವಕಾಶವಿರುವುದಿಲ್ಲ. ಈಗಾಗಲೇ ಸಿರಿಧಾನ್ಯ ಪಾಕ ಸ್ಪರ್ಧೆಯಲ್ಲಿ ಭಾಗವಹಿಸಿ ರಾಜ್ಯ ಮಟ್ಟದಲ್ಲಿ ಮೊದಲನೇ, ದ್ವಿತೀಯ ಮತ್ತು ತೃತೀಯ ಬಹುಮಾನ ಪಡೆದ ಸ್ಪರ್ಧಿಗಳಿಗೆ ಪ್ರಸ್ತುತ ವರ್ಷದಲ್ಲಿ ಸಿರಿಧಾನ್ಯ ಪಾಕಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಇಂದಿನವರು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಮನೆಯಲ್ಲಿಯೇ ತಯಾರಿಸಿದ ಸಿರಿಧಾನ್ಯ, ಖಾದ್ಯದ ತಿನಿಸು (ಅಡುಗೆ) ಪ್ರದರ್ಶಿಸಲು ಅವಕಾಶವಿರುತ್ತದೆ ಹಾಗೂ ಬಳಸುವ ಸಾಮಾಗ್ರಿಗಳ ಮಾದರಿಗಳನ್ನು ಕಡ್ಡಾಯವಾಗಿ ಪ್ರದರ್ಶಿಸುವುದು. ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮ ಒಂದು ಸಿಹಿ, ಖಾರ (ಸಿರಿಧಾನ್ಯ ಖಾದ್ಯಗಳಿಗೆ ಮಾತ್ರ) ಖಾದ್ಯದ ತಿನಿಸನ್ನು ಆಯ್ಕೆ ಮಾಡಲಾಗುವುದು. ಸ್ಪರ್ಧಿಗಳು ನಿಗಧಿಪಡಿಸಿದ ಸ್ಥಳದಲ್ಲಿ ಸರಿಯಾದ ಸಮಯಕ್ಕೆ ತಮ್ಮ ಅಡುಗೆ ಸಾಮಾಗ್ರಿಗಳೊಂದಿಗೆ ಹಾಜರಿರಬೇಕು.

ಹೆಚ್ಚಿನ ಮಾಹಿತಿಗಾಗಿ ತಮ್ಮ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸಂಪರ್ಕಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಷ್ಟ್ರ ಮಟ್ಟದಲ್ಲಿ ಸಾಧನೆಗೈಯ್ಯಲು ವಿದ್ಯಾರ್ಥಿಗಳಿಗೆ ಕರೆ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ: ವಿವಿಧ ಕಲಾ ಸ್ಪರ್ಧೆಗಳಲ್ಲಿ ಭಾಗವಹಿಸಿರುವ ವಿದ್ಯಾರ್ಥಿಗಳು ಸೋಲು, ಗೆಲುವಿಗೆ ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಹಾಗೂ ಈಗ ರಾಜ್ಯ ಮಟ್ಟದಲ್ಲಿ ವಿಜೇತರಾದವರು ರಾಷ್ಟ್ರ ಮಟ್ಟದಲ್ಲಿಯೂ ಸಾಧನೆ ಮಾಡುವಂತೆ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಹೇಳಿದರು. ರಾಜ್ಯ ಮಟ್ಟದ ಯುವಜನೋತ್ಸವದ ಸಮಾರೋಪ ಸಮಾರಂಭದ ಅಧ್ಯಕ್ಷತೆವಹಿಸಿದ್ದ ಅವರು, ಯಾವುದೇ ಸ್ಪರ್ಧೆಗಳಲ್ಲಿ ಸೋಲು-ಗೆಲುವು ಎರಡು ನಾಣ್ಯದ ಮುಖಗಳಂತೆ. ಈ ಹಿನ್ನೆಲೆಯಲ್ಲಿ ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಿ, ಭವಿಷ್ಯತ್ತಿನ ಸ್ಪರ್ಧೆ ಗಳಲ್ಲಿ ಸಾಧನೆ ಮಾಡುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಮಾತನಾಡಿ, ಇದೇ ಮೊದಲ ಬಾರಿಗೆ ಯಾದಗಿರಿ ಜಿಲ್ಲೆಯಲ್ಲಿ ರಾಜ್ಯ ಮಟ್ಟದ ಯುವಜನೋತ್ಸವ ಯಶಸ್ವಿಯಾಗಿ ಹಮ್ಮಿಕೊಳ್ಳಲಾಗಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಒಂದು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ವಸತಿ, ಊಟ, ಉಪಹಾರದ ವ್ಯವಸ್ಥೆಗಳನ್ನು ಜಿಲ್ಲಾಮಟ್ಟದ ಅಧಿಕಾರಿಗಳು ಸಮನ್ವಯ ಸಾಧಿಸಿ, ಕಾರ್ಯ ನಿರ್ವಹಿಸಿದ್ದಾರೆ. ಅದರಂತೆ ಸ್ಪರ್ಧಾಳುಗಳು ಸಹ ಉತ್ಸಾಹದಿಂದ ಭಾಗವಹಿಸಿದ್ದಾರೆ. ವಿಶೇಷವಾಗಿ ಮಲ್ಲಕಂಬ, ಕರಾಟೆ ಪ್ರದರ್ಶನ, ರೋಪ್ ಮೇಲಿನ ಚಟುವಟಿಕೆ, ಸೇರಿದಂತೆ ವಿವಿಧ ಕಲಾ ಸ್ಪರ್ಧೆಗಳಲ್ಲಿ ಸಂತಸದಿಂದ ಭಾಗವಹಿಸಿರುವದಕ್ಕೆ ಅಭಿನಂದಿಸಿದರು. ವಿವಿಧ ನಿರ್ಣಾಯಕರು, ಪೋಲಿಸ್ ಇಲಾಖೆ, ಆರೋಗ್ಯ ಹಾಗೂ ಅಗ್ನಿಶಾಮಕ ಇಲಾಖೆ, ಇತರೆ ವಿವಿಧ ಇಲಾಖೆಗಳ ಕಾರ್ಯ ಪ್ರಶಂಸನಿಯವಾಗಿದೆ. ವಿದ್ಯಾರ್ಥಿಗಳು ಇಲ್ಲಿ ಭಾಗವಹಿಸಿರುವ ಒಳ್ಳೆಯ ನೆನಪುಗಳನ್ನು ಇಟ್ಟುಕೊಂಡು, ಮುಂದೆಯೂ ಸಾಧನೆ ಮಾಡುವಂತೆ ಹಾರೈಸಿದರು.

ಈ ಸಂದರ್ಭದಲ್ಲಿ ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ್, ಕ್ರೀಡಾ ಇಲಾಖೆ ಜಂಟಿ ನಿರ್ದೇಶಕ ಸುಭಾಷ್ ಚಂದ್ರ, ಉಪನಿರ್ದೇಶಕ ಶ್ರೀನಿವಾಸ , ಸಹಾಯಕ ಆಯುಕ್ತ ಶ್ರೀಧರ್ ಗೋಟುರ್, ಕ್ರೀಡಾಧಿಕಾರಿ ರಾಜು ಬಾವಿಹಳ್ಳಿ, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಡಿ.10 ರಂದು ಮಾನವ ಹಕ್ಕುಗಳ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ ವಿಜಯನಗರ (ಹೊಸಪೇಟೆ): ಜಿಲ್ಲೆಯ ಎಲ್ಲಾ ಜಿಲ್ಲಾ ಮತ್ತು ತಾಲೂಕು ಕೇಂದ್ರದ ಕಚೇರಿಯಲ್ಲಿ ಕಡ್ಡಾಯವಾಗಿ ಡಿಸೆಂಬರ್ 10 ರಂದು ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಆದೇಶಿಸಿದ್ದಾರೆ.

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಪ್ರತಿ ಜಿಲ್ಲೆಯಲ್ಲಿ ಮತ್ತು ಜಿಲ್ಲೆಯ ತಾಲೂಕು ಕೇಂದ್ರಗಳಲ್ಲಿ ಮಾನವ ಹಕ್ಕುಗಳ ದಿನಾಚರಣೆಯನ್ನು ಪ್ರತೀ ವರ್ಷದಂತೆ ಈ ವರ್ಷವೂ ಸಹ ವಿಶೇಷವಾಗಿ ಮಾನವ ಹಕ್ಕುಗಳ ದಿನಾಚರಣೆಯನ್ನು ಆಚರಿಸಲು ಆಯೋಗವು ನಿರ್ಧಾರವನ್ನು ಕೈಗೊಂಡಿದ್ದು, ಆಯೋಗದ ನಿರ್ದೇಶನದಂತೆ, ಡಿಸೆಂಬರ್ 10 ರಂದು ಎಲ್ಲಾ ಇಲಾಖೆಗಳ ಕಚೇರಿಗಳಲ್ಲಿ ಮಾನವ ಹಕ್ಕುಗಳ ದಿನಾಚರಣೆ ಆಚರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಾಕ್ಷೇತ್ರದಲ್ಲಿ ವಿದ್ಯಾರ್ಥಿಗಳಿಂದ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನ.

ಮಲ್ಲಮ್ಮ ನುಡಿ ವಾರ್ತೆ ವಿಜಯನಗರ (ಹೊಸಪೇಟೆ): ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ, ನೃತ್ಯ, ಸುಗಮ ಸಂಗೀತ ಕಥಾಕೀರ್ತನ ಮತ್ತು ಗಮಕ ಕಲಾಕ್ಷೇತ್ರದಲ್ಲಿ ಅಭ್ಯಾಸ ಮಾಡುತ್ತಿರುವ 16 ರಿಂದ 24 ವರ್ಷದೊಳಗಿನ ವಿದ್ಯಾರ್ಥಿಗಳಿಂದ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕೆ.ಸಿದ್ದಲಿಂಗೇಶ ರಂಗಣ್ಣನವರ್ ತಿಳಿಸಿದ್ದಾರೆ.

ಅರ್ಜಿಯನ್ನು ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಕಚೇರಿಯಲ್ಲಿ ಪಡೆಯಬಹುದಾಗಿದೆ. ಅರ್ಜಿಯಲ್ಲಿ ನೀಡಿರುವ ಪಠ್ಯಕ್ರಮವನ್ನು ಮೊಬೈಲ್ ನಲ್ಲಿ ವಿಡಿಯೋ ಚಿತ್ರೀಕರಿಸಿ.

ಪೆನ್‌ಡ್ರೈವ್ ನಲ್ಲಿ ಅಳವಡಿಸಿ. ಪೆನ್‌ಡ್ರೈವ್ ನೊಂದಿಗೆ, ಅರ್ಜಿಯನ್ನು ರಿಜಿಸ್ಟ್ರಾರ್ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು ಕಾರ್ಯಲಯಕ್ಕೆ ಅಂಚೆ ಮೂಲಕ ಅಥವಾ ಖುದ್ದಾಗಿ ಡಿ.20 ರೊಳಗಾಗಿ ಅರ್ಜಿ ತಲುಪಿಸಬೇಕು. ಬಂದ ಅರ್ಜಿಗಳನ್ನು ಆಯಾ ಕಲಾ ಪ್ರಕಾರಕ, ಅನುಗುಣವಾಗಿ ತೀರ್ಪುಗಾರರು ಅಭ್ಯರ್ಥಿಗಳು ಚಿತ್ರೀಕರಿಸಿ, ಕಳುಹಿಸಿಕೊಟ್ಟಿರುವ ಪೆನ್ ಡ್ರೈವ್ ಅನ್ನು ಪರಿಶೀಲಿಸಿ, ಶಿಷ್ಯವೇತನಕ್ಕೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅಕಾಡೆಮಿ ಪೇಸ್‌ಬುಕ್ facebook.com/karnatakasangeetanrutyaaacdemy ನಲ್ಲಿ ಮಾಹಿತಿ ಪಡೆದು ವೆಬ್‌ಸೈಟ್ sangeetanrityaacademy.karnataka.gov.in ಡೌನ್‌ಲೋಡ್ ಮಾಡಿಕೊಳ್ಳಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಸಂಗೀತ ನೃತ ಅಕಾಡೆಮಿ, ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

ಯಾದಗಿರಿ: ಕರ್ನಾಟಕ ಸಂಗೀತ ನೃತ ಅಕಾಡೆಮಿಯು 2025-26ನೇ ಸಾಲಿನ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ರಿಜಿಸ್ಟ್ರಾರ್ ನರೇಂದ್ರಬಾಬು.ಎನ್ ಅವರು ತಿಳಿಸಿದ್ದಾರೆ.

ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ ನೃತ್ಯ ಸುಗಮ ಸಂಗೀತ ಕಥಾಕೀರ್ತನ ಮತ್ತು ಗಮಕ ಈ ಐದು ಕಲಾಕ್ಷೇತ್ರದಲ್ಲಿ ಅಭ್ಯಾಸ ಮಾಡುತ್ತಿರುವ 16 ರಿಂದ 24 ವರ್ಷ ಒಳಗಿರಬೇಕು, ಅಭ್ಯರ್ಥಿಗಳು ಶಿಷ್ಯವೇತನಕ್ಕಾಗಿ ಅರ್ಜಿಸಲ್ಲಿಸಬೇಕು, ಶಿಷ್ಯವೇತನಕ್ಕೆ ಆಯ್ಕೆ, ಪ್ರಕ್ರಿಯೆಯನ್ನು ಮೊಬೈಲ್, ವಿಡಿಯೋ ಚಿತ್ರೀಕರಣ ಮೂಲಕ ಈ ಕೆಳಕಂಡಂತೆ ಆಯ್ಕೆ ಮಾಡಲು ಅಕಾಡೆಮಿ ತೀರ್ಮಾನಿಸಿದೆ.

ಶಿಷ್ಯವೇತನ ಅರ್ಜಿಗಳ ಬಗ್ಗೆ, ಮಾಹಿತಿಯನ್ನು ಅಕಾಡೆಮಿ ಪೇಸ್ ಬುಕ್‌ನಲ್ಲಿ ಮೂಲಕ ಮಾಹಿತಿ ಪಡೆದು ವೆಬ್‌ಸೈಟ್ , ಚಿಟರಜಜಣಚಿಟಡಿಡಿಣಥಿ-ಚಿಚಿಛಿಚಿಜಜಟಥಿ.ಇಚಿಡಿಟಚಿಣಚಿಇಚಿ.ರಠತ.ಟಿ ನಲ್ಲಿ ಡೌನ್ಲೋಡ್ ಮಾಡಿಕೊಳ್ಳಬೇಕು. ಅರ್ಜಿಯನ್ನು ಆಯಾ ಜಿಲ್ಲೆಯ ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಯಲ್ಲಿ ಪಡೆಯಬೇಕು, ಸಂದರ್ಶನದ ಬದಲಿಗೆ ಅಭ್ಯರ್ಥಿಗಳು ಇನ್ನು ಮುಂದೆ ಅರ್ಜಿಯಲ್ಲಿ ನೀಡಿರುವ ಪಠ್ಯಕ್ರಮವನ್ನು ಮೊಬೈಲ್, ವಿಡಿಯೋ, ಚಿಕ್ರೀಕರಿಸಿ ವೆನ್‌ಡ್ರೈವ್‌ನಲ್ಲಿ ಅಳವಡಿಸಿ, ಬೆನ್ ಡ್ರೈವ್ ಸೂಂದಿಗೆ, ಅರ್ಜಿಯನ್ನು ರಿಜಿಸ್ಟ್ರಾರ್ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ ಬೆಂಗಳೂರು 560 002, ಅಂಚೆ ಮೂಲಕ ಅಥವಾ ಖುದ್ದಾಗಿ ತಲುಪಿಸಬೇಕು. ಈ ರೀತಿಯಾಗಿ ಬಂದ ಅರ್ಜಿಗಳನ್ನು ಆಯಾ ಕಲಾ ಪ್ರಕಾರಕ್ಕೆ ಅನುಗುಣವಾಗಿ ತೀರ್ಪುಗಾರರು ಅಭ್ಯರ್ಥಿಗಳು ಚಿತ್ರೀಕರಿಸಿ, ಕಳುಹಿಸಿಕೊಟ್ಟಿರುವ ಪೆನ್‌ಡ್ರೈವ್ ಅನ್ನು ಪರಿಶೀಲಿಸಿ, ಶಿಷ್ಯವೇತನಕ್ಕೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಪಠ್ಯಕ್ರಮ ಚಿತ್ರೀಕರಿಸಿದ ಪೆನ್‌ಡ್ರೈಪ್‌ನೊಂದಿಗೆ ಅರ್ಜಿಯನ್ನು 2025ರ ಡಿಸೆಂಬರ್ 20ರ ಒಳಗೆ ಸಲ್ಲಿಸಬೇಕು. ತೀರ್ಪುಗಾರರ ತೀರ್ಮಾನವೇ ಅಂತಿಮವಾಗಿ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಯಾದಗಿರಿ ಜಿಲ್ಲೆಯಾದ್ಯಂತ 2025ರ ಡಿಸೆಂಬರ್ 7 ರಂದು ನಡೆಯಲಿರುವ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಆದೇಶ ಜಾರಿಗೊಳಿಸಿ ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಆದೇಶವನ್ನು ಹೊರಡಿಸಿದ್ದಾರೆ.

ಬಿ.ಎನ್.ಎಸ್.ಎಸ್ 2023ರ ಕಲಂ 163 ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ 2025ರ ಡಿಸೆಂಬರ್ 7 ರಂದು ಬೆಳಿಗ್ಗೆ 8 ರಿಂದ ಸಂಜೆ 6 ಗಂಟೆಯ ವರೆಗೆ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆ ಯಾದಗಿರಿ ನಗರದಲ್ಲಿ ಒಟ್ಟು 28 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುತ್ತಿದ್ದು, ಈ ಪರೀಕ್ಷೆಯ ಸೂಸುತ್ರವಾಗಿ ನಡೆಸುವ ಹಿತದೃಷ್ಟಿಯಿಂದ, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಹಾಗೂ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲೂ ಇರುವ ಬೆರಳಚ್ಚು ಕೇಂದ್ರ ಝುರಾಕ್ಸ್ ಮಳಿಗೆ ಹಾಗೂ ಪುಸ್ತಕದ ಮಳಿಗೆಗಳನ್ನು ಕೆಳಕಾಣಿಸಿದ ಷರತ್ತಿಗೊಳಪಟ್ಟು ನಿಷೇಧಿಸಿ ಆದೇಶಿಸಿದೆ.

ಷರತ್ತುಗಳು : ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ ಮೊಬೈಲ್, ಪೇಜರ್, ಝುರಾಕ್ಸ್, ಬೆರಳಚ್ಚು ಕೇಂದ್ರ ಹಾಗೂ ಪುಸ್ತಕ ಮಳಿಗೆಗಳು ಮುಂತಾದವುಗಳನ್ನು ತೆರೆಯುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರದಲ್ಲಿ ನಿಗದಿಪಡಿಸಿದ ಅಧಿಕಾರಿಗಳನ್ನು, ಶಿಕ್ಷಕರನ್ನು ಹೊರತುಪಡಿಸಿ ಇನ್ನೂಳಿದವರಿಗೆ ಪರವಾನಿಗೆ ಇಲ್ಲದೇ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವದನ್ನು ನಿಷೇಧಿಸಲಾಗಿದೆ. 200 ಮೀಟರ್ ಪರೀಕ್ಷಾ ಕೇಂದ್ರದ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವದನ್ನು ನಿಷೇಧಿಸಿದೆ. ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಈ ಆದೇಶ ಅನ್ವಯವಾಗುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಭಾ ಅನಾವರಣಕ್ಕೆ ಪ್ರತಿಭಾ ಕಾರಂಜಿ ವೇದಿಕೆ : ಬಿಇಒ ವೀರಪ್ಪ ಕನ್ನಳ್ಳಿ.



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ: ಪ್ರತಿ ಮಕ್ಕಳಲ್ಲಿ ಒಂದು ವಿಶೇಷ ಪ್ರತಿಭೆ ಇರುತ್ತದೆ. ಅದರ ಅನಾವರಣಕ್ಕೆ ಪ್ರತಿಭಾ ಕಾರಂಜಿ ಉತ್ತಮ ವೇದಿಕೆಯಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವೀರಪ್ಪ ಕನ್ನಳ್ಳಿ ಹೇಳಿದರು.

ತಾಲೂಕಿನ ಬಂದಳ್ಳಿ ಗ್ರಾಮದಲ್ಲಿ ಸಹಾಜ್ ಕಿಡ್ಸ್ ಅಕಾಡೆಮಿ ಶಾಲೆಯಲ್ಲಿ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಲಿಕೆ ಎಂದರೆ ಕೇವಲ ಅಂಕ ಗಳಿಕೆ ಅಲ್ಲ, ಕಲಿಕೆ ಜೊತೆ ವಿವಿಧ ಚಟುವಟಿಕೆ ಮೂಲಕ ಮಕ್ಕಳ ಪ್ರತಿಭೆ ಹೊರಹಾಕಲು ಪ್ರತಿಭಾ ಕಾರಂಜಿ ಅನುಕೂಲ ವಾಗುತ್ತದೆ ಎಂದರು.

ಶಾಲೆಯ ಅಧ್ಯಕ್ಷ ಸುಭಾಷ್ ಚಂದ್ರ ಬಡಿಗೇರ್ ಮಾತನಾಡಿ, ವಿದ್ಯಾರ್ಥಿಗಳಲ್ಲಿ ವ್ಯಕ್ತಿತ್ವ ಹಾಗೂ ಸ್ಪರ್ಧಾತ್ಮಕ ಮನೋಭಾವ, ಜ್ಞಾನ ವಿಕಾಸಕ್ಕೆ ಪ್ರತಿಭಾ ಕಾರಂಜಿ ಸಹಕಾರಿಯಾಗಿದೆ ಎಂದರು. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗ ಬಾರದೆಂದು ನಮ್ಮ ಸಂಸ್ಥೆಯ ನಿರಂತರವಾಗಿ ಕಡಿಮೆ ಫೀಸ್ ನಲ್ಲಿ ಗುಣ ಮಟ್ಟದ ಶಿಕ್ಷಣ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ.

ಇದರ ಜೊತೆಗೆ ಶಿಕ್ಷಣ ಇಲಾಖೆಯು ನಮ್ಮಗೆ ಉತ್ತರ ಸಹಕಾರ ಮಾಡುತ್ತಿದೆ ಎಂದು ಸಂತಸ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ವಲಯ ಶಿಕ್ಷಣ ಸಂಯೋಜಕರಾದ ದೇವೇಂದ್ರಪ್ಪ ಈಟೆ, ಆರ್ ಸಿಗಳಾದ ಕೃಷ್ಣಾರೆಡ್ಡಿ ಸಿ, ಶರಣಬಸಪ್ಪ ಪಾಕರೆಡ್ಡಿ ಬಿ ಸೇರಿದಂತೆ ಶಿಕ್ಷಕರು ಹಾಗೂ ಬೇರೆ ಕ್ಲಸ್ಟರ್ ನಿಂದ ನಿರ್ಣಾಯಕ ರಾಗಿ ವಿವಿಧ ಶಾಲೆಯ ಶಿಕ್ಷಕರು ಮತ್ತು ಮಕ್ಕಳು ಭಾಗವಹಿಸಿದರು. ಮಕ್ಕಳು ವಿವಿಧ ಸಂಸ್ಕೃತಿ, ನೃತ್ಯ, ರಸ ಪ್ರಶ್ನೆ ಕಾರ್ಯಕ್ರಮಗಳು ನಡೆದವು.

# ೩೦ ವರ್ಷ ಮೇಲ್ಪಟ್ಟವರು ಪ್ರತಿ ೬ ತಿಂಗಳಿಗೊಮ್ಮೆ ರಕ್ತದೊತ್ತಡ, ಸಕ್ಕರೆ ಕಾಯಿಲೆ ಪರೀಕ್ಷಿಸಿಕೊಳ್ಳಿ: ಡಿಹೆಚ್‌ಒ ಸಲಹೆ

ಬಳ್ಳಾರಿ,ಡಿ.05(ಕರ್ನಾಟಕ ವಾರ್ತೆ): 30 ವರ್ಷ ಮೇಲ್ಪಟ್ಟವರು ಪ್ರತಿ 6 ತಿಂಗಳಿಗೊಮ್ಮೆ ರಕ್ತದೊತ್ತಡ, ಸಕ್ಕರೆ ಕಾಯಿಲೆ ಪರೀಕ್ಷೆ ಮಾಡಿಸುವ ಮೂಲಕ ಸದೃಢ ಆರೋಗ್ಯ ಹೊಂದಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಶುಕ್ರವಾರ ಸಂಡೂರು ತಾಲ್ಲೂಕಿನ ವಿಠಲಾಪುರ ಮತ್ತು ಮೆಟ್ರಿಕಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಸಾರ್ವಜನಿಕರೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು.

ಯಾರಿಗಾದರೂ ಬಾಯಿ ಒಣಗಿದಂತೆ ಆಗುವುದು ಅಥವಾ ವಿಪರೀತ ಬಾಯಾರಿಕೆ, ಪದೇ ಪದೇ ಮೂತ್ರ ವಿಸರ್ಜನೆ, ಹಸಿವು ಹೆಚ್ಚಾಗುವುದು, ಮಂದದೃಷ್ಟಿ ಕಾರಣವಿಲ್ಲದೇ ಆಯಾಸ ಕಂಡುಬಂದಲ್ಲಿ ತಕ್ಷಣ ವೈದ್ಯರ ಬಳಿ ತೆರಳಿ ಪರಿಕ್ಷೀಸಿಕೊಳ್ಳಬೇಕು. 30 ವರ್ಷ ಮೇಲ್ಪಟ್ಟವರು ಪ್ರತಿ 6 ತಿಂಗಳಿಗೊಮ್ಮೆ ರಕ್ತದೊತ್ತಡ, ಸಕ್ಕರೆ ಕಾಯಿಲೆ ಪರೀಕ್ಷೆ ಮಾಡಿಸುವ ಮೂಲಕ ಸದೃಢ ಆರೋಗ್ಯ ಹೊಂದಬಹುದಾಗಿದೆ ಎಂದು ತಿಳಿಸಿದರು.

30 ರಿಂದ 59 ವರ್ಷ ಹೆಚ್ಚಿನ ಸಾವುಗಳಿಗೆ ಅಸಾಂಕ್ರಾಮಿಕ ರೋಗಗಳೇ ಕಾರಣವಾಗಿವೆ. 2026 ರ ಹೊತ್ತಿಗೆ ದೇಶದಲ್ಲಿ 75 ಮಿಲಿಯನ್ ಮಧುಮೇಹಿಗಳು ಕಂಡುಬರುವ ಸಾಧ್ಯತೆಯಿದ್ದು, ಇದ-ರಿಂದ ದುಡಿಯುವ ವಯಸ್ಸಿನಲ್ಲಿಯೇ ಮರಣ ಹೊಂದುವವರ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಅವರು ಅಭಿಪ್ರಾಯಪಟ್ಟರು.

ಮಧುಮೇಹ ಕುರಿತು ಎಫ್‌ಬಿಎಸ್, ಪಿಪಿಬಿಎಸ್ ಖಾಲಿ ಹೊಟ್ಟೆಯಲ್ಲಿ ಪರೀಕ್ಷೆ, ಊಟ ಮಾಡಿದ 2 ಗಂಟೆಯ ನಂತರ ಪರೀಕ್ಷೆ ಶರೀರದ ಮೂಲ ಸಕ್ಕರೆ ಮಟ್ಟ ತೋರಿಸುತ್ತದೆ. ಊಟಕ್ಕೆ ಶರೀರ ಹೇಗೆ ಪ್ರತಿಕ್ರಿಯಿಸುತ್ತದೆ ಎಂಬುದು ತೋರಿಸುತ್ತದೆ. ಮಧುಮೇಹ ಪತ್ತೆಗೆ ಮುಖ್ಯ ಚಿಕಿತ್ಸೆ ಪರಿಣಾಮಕಾರಿಯೇ ಅಥವಾ ಇಲ್ಲವೇ ಎಂಬುದು ಮುಖ್ಯವಾಗಿದೆ. ಈ ಸೇವೆಯು ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಲಭ್ಯವಿದ್ದು, ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ತಿಳಿಸಿದರು.

ರೋಗ ನಿಯಂತ್ರಣಕ್ಕಾಗಿ ಜೀವನ ಶೈಲಿಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕಾಗಿದೆ. ತೂಕ ಕಡಿಮೆ ಮಾಡಿಕೊಳ್ಳುವುದು. ಇದಕ್ಕಾಗಿ ಸೈಕಲ್ ತುಳಿಯುವುದು, ಬಿರುಸಿನ ನಡಿಗೆ, ನಿರ್ದಿಷ್ಟ ದೂರದಲ್ಲಿ ಓಡುವುದು ಅಥವಾ ಮನೆಯಲ್ಲಿಯೇ ವ್ಯಾಯಾಮ ಮಾಡುವುದು, ಮದ್ಯ, ಧೂಮಪಾನ ತ್ಯಜಿಸುವುದು ಮುಂತಾದವುಗಳ ಮೂಲಕ ರೋಗ ತಡೆಗಟ್ಟಬಹುದಾಗಿದೆ ಎಂದರು.



ಪ್ರಸ್ತುತ ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳಿಂದ ಮತ್ತು ಗ್ರಾಮೀಣ ಭಾಗದಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಸಮುದಾಯ ಆರೋಗ್ಯಾಧಿಕಾರಿಗಳಿಂದ ಸಕ್ಕರೆ ಖಾಯಿಲೆ ಮತ್ತು ರಕ್ತದೊತ್ತಡ ಪರೀಕ್ಷೆಯನ್ನು ಕೈಗೊಂಡು ಸಂಶಯಾತ್ಮಕ ವ್ಯಕ್ತಿಗಳನ್ನು ವೈದ್ಯಾಧಿಕಾರಿಗಳ ಬಳಿ ಕಳುಹಿಸಿದಾಗ ಪುನಃ ದೃಢಪಟ್ಟಲ್ಲಿ ಆಯಾ ಗ್ರಾಮದಲ್ಲಿಯೇ ಉಚಿತವಾಗಿ ಮಾತ್ರೆಗಳನ್ನು ನೀಡುವ ಕಾರ್ಯ ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.

ಮಧುಮೇಹ ಪರೀಕ್ಷೆಯು ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ

ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಪರೀಕ್ಷೆ ಮಾಡಲಾಗುತ್ತದೆ. ಎಲ್ಲಾ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಲು ವಿನಂತಿಸಿದರು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿಗಳಾದ ಡಾ.ಹರೀಶ್, ಡಾ.ಮಹೇಶ್ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ವರ್ಗದವರು, ಸಾರ್ವಜನಿಕರು ಹಾಜರಿದ್ದರು.

# ಬಳ್ಳಾರಿಯಲ್ಲಿ ಸ್ಟೇಷನ್ ಮಹೋತ್ಸವ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ.:150 ವರ್ಷಗಳ ಇತಿಹಾಸ ಇರುವ ಬಳ್ಳಾರಿ ರೈಲ್ವೆ ನಿಲ್ದಾಣದ ಮುಂಭಾಗದಲ್ಲಿ ಇಂದು ಸ್ಟೇಷನ್ ಮಹೋತ್ಸವ ಆಚರಿಸಲಾಯಿತು ಈ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ರೈಲ್ವೆ ಕ್ರಿಯಾ ಸಮಿತಿಯ ಅಧ್ಯಕ್ಷ ಕೆಎಂ ಮಹೇಶ್ವರ ಸ್ವಾಮಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು

ಸಮಿತಿಯ ಪದಾಧಿಕಾರಿಗಳಾದ ಪಿ ಬಂಡೇಗೌಡ ವಿ ಎಸ್ ಮರಿದೇವಯ್ಯ ಕೋಳೂರು ಚಂದ್ರಶೇಖರ್ ಗೌಡ ಮಧುಸೂಧನ ಗೌಡ ಹಾಗೂ ಡಿ ಆರ್ ಯು ಸಿ ಸದಸ್ಯರುಗಳಾದ ಗೋಪಾಲ್ ಕೃಷ್ಣ ಸೋಂತಾ ಗಿರಿದರ ರಾಹುಲ್

ಕೆಎಂ ಕೊಟ್ರೇಶ್ ಭಾಗವಹಿಸಿದ್ದರು

ಬಳ್ಳಾರಿ ರೈಲ್ವೆ ನಿಲ್ದಾಣದ ಅಧಿಕಾರಿಗಳಾದ ಹೊನ್ನೂರ್ ಸ್ವಾಮಿ ಆರ್ ಟಿ ಎಫ್ ಪೊಲೀಸ್ ಅಧಿಕಾರಿ ಸಿದ್ದಲಿಂಗಪ್ಪನವರು ಕಾರ್ಯಕ್ರಮ ನಿರ್ವಹಣೆ ಮಾಡಿದರು

ಸಭೆಯಲ್ಲಿ ಮಾತನಾಡಿದ ಮಹೇಶ್ವರ ಸ್ವಾಮಿಯವರು 150 ವರ್ಷಗಳ ಪಾರಂಪರಿಕ ಕಟ್ಟಡ ಹೊಂದಿರುವ ಬಳ್ಳಾರಿ ರೈಲ್ವೆ ನಿಲ್ದಾಣದ ಮಹತ್ವವನ್ನು ತಿಳಿಸಿದರು

ದೇಶದ ಕ್ಲೋಸ್ಡ್ ನಾಲ್ಕು ರೈಲು ನಿಲ್ದಾಣಗಳಾದ ಚೆನ್ನೈ ಹೌರ ಮುಂಬೈ ವಿಟಿ ಸ್ಟೇಷನ್ ಸಾಲಿಗೆ ಬಳ್ಳಾರಿ ನಿಲ್ದಾಣ ಒಂದಾಗಿದೆ ಎಂದು ತಿಳಿಸಿ ಸಮಗ್ರ ರೈಲ್ವೆ ವ್ಯವಸ್ಥೆಯ ಬಗ್ಗೆ ಮಾಹಿತಿ ನೀಡಿದರು

ಇನ್ನು ನಾಲ್ಕು ತಿಂಗಳೊಳಗೆ ಬಳ್ಳಾರಿ ರೈಲ್ವೆ ನಿಲ್ದಾಣದ ಅಭಿವೃದ್ಧಿ ಕಾಮಗಾರಿ ಪೂರ್ಣಗೊಳ್ಳಬೇಕೆಂದು ರೈಲು ಇಲಾಖೆಗೆ ಒತ್ತಾಯಿಸಿದರು

1. 10. 1921ರಂದು ಈ ಪಾರಂಪರಿಕ ರೈಲ್ವೆ ನಿಲ್ದಾಣದ ಮುಂಭಾಗದಲ್ಲಿ ಗಾಂಧೀಜಿಯವರು ರಾತ್ರಿ ಇಡೀ ತಂದಿರುವ ವಿಷಯವನ್ನು ಸಭೆಯಲ್ಲಿ ಭಾಗವಹಿಸಿದ ಎಸ್‌ಜೆಟಿ ವಿದ್ಯಾರ್ಥಿಗಳಿಗೆ ತಿಳಿಸಿದರು ಡಿ ಆರ್ ಯು ಸಿ ಸಿ ಸದಸ್ಯ ಗಿರಿಧರ ಹಾಗೂ ಇತರರು ಸಭೆಯಲ್ಲಿ ಮಾತನಾಡಿದರು

ವಿದ್ಯಾರ್ಥಿಗಳಾದ ತನುಶ್ರೀ ಸೃಷ್ಟಿ ಹಾಗೂ ಅಭಿನಂದನ್ ಸಭೆಯಲ್ಲಿ ಪಾರಂಪರಿಕ ರೈಲ್ವೆ ನಿಲ್ದಾಣದ ಬಗ್ಗೆ ಮಾತನಾಡಿದರು

ಸಭೆಯ ನಂತರ ರೈಲ್ವೆ ಅಧಿಕಾರಿ ಹೊನ್ನೂರ್ ಸ್ವಾಮಿ ಅವರು ವಿದ್ಯಾರ್ಥಿಗಳಿಗೆ ರೈಲ್ವೆ ನಿಲ್ದಾಣದ ವೀಕ್ಷಣೆ ಹಾಗೂ ಪರಿಚಯ ಮಾಡಿಕೊಟ್ಟರು

# ಅದ್ದೂರಿಯಾಗಿ ನೆರವೇರಿದ ಶ್ರೀ ಗುದ್ನೇಶ್ವರ ಮಹಾ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ: ಪ್ರತಿ ವರ್ಷದಂತೆ ಈ ವರ್ಷವೂ ಸಹ ಹೊಸ್ತಿಲ ಹುಣ್ಣಿಮೆಯ ದಿವಸ ಸಾಯಂಕಾಲ ಕುಕುನೂರು ಪಟ್ಟಣದ ಶ್ರೀ ಗುದ್ನೇಶ್ವರ ಜಾತ್ರಾ ಮಹೋತ್ಸವ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರ ಆರಾಧ್ಯ ದೈವ ಶ್ರೀ ಗುದ್ನೇಶ್ವರ (ಶ್ರೀ ರುದ್ರಮುನೇಶ್ವರ) ಜಾತ್ರಾ ಮಹೋತ್ಸವ ಜರುಗಿತು. ಜಾತ್ರಾ ಮಹೋತ್ಸವದ ಮಹಾ ರಥೋತ್ಸವಕ್ಕೂ ಮುನ್ನ ಬ್ರಾಪ್ತಿ ಮುಹೂರ್ತದಲ್ಲಿ ಶ್ರೀ ಮಠದಲ್ಲಿ ಪೂಜಾ ವಿಧಾನಗಳನ್ನು ನೆರವೇರಿಸಲಾಯಿತು. ಸಾಯಂಕಾಲ ಬಿನ್ನಾಳ ಗ್ರಾಮದಿಂದ ನಂದಿಕೋಲು ಸೇವೆ ಹಾಗೂ ಪಕ್ಕದಲ್ಲಿರುವ ಗ್ರಾಮವಾದ ಅಳಿಯಪನಮಠ ಗ್ರಾಮದಿಂದ ಅಳಿಯ ಚೆನ್ನಬಸವೇಶ್ವರ ಭಜನಾ ಸಂಘದವರಿಂದ ಪಲ್ಲಕ್ಕಿ ಸೇವೆ ಆಗಮಿಸುತ್ತಿದ್ದಂತೆಯೇ ಸ್ವಾಮಿಯ ಪಂಚ ಕಳಸ ಮಹಾ ರಥೋತ್ಸವಕ್ಕೆ ಚಾಲನೆ ನೀಡಲಾಯಿತು.

ನವ ವಿವಾಹಿತ ಜೋಡಿಗಳು ತಪ್ಪದೇ ಶ್ರೀ ಗುದ್ನೇಶ್ವರ ಪಂಚಕಳಸ ರಥೋತ್ಸವದ ದರ್ಶನ ಪಡೆದು ಪಾವನರಾಗಬೇಕು ಎಂಬುದು ಇಲ್ಲಿನ ಜನರಲ್ಲಿ ನಂಬಿಕೆಯಾಗಿದ್ದು. ಈ ರೀತಿ ಪಂಚಕಳಸ ಮಹಾರಾಥೋತ್ಸವದ ದರ್ಶನ ಪಡೆದ ದಂಪತಿಗಳು, ಮುಂದಿನ ವರ್ಷ ರಥೋತ್ಸವದ ವೇಳೆಗೆ ತಮ್ಮ ಸಂತಾನ ದೊಂದಿಗೆ ಆಗಮಿಸಿ ರಥೋತ್ಸವದ ದರ್ಶನ ಪಡೆಯುತ್ತಾರೆ ಎಂಬುದು ಜನತೆಯ ನಂಬಿಕೆಯಾಗಿದೆ. ಮಹಾರಥೋತ್ಸವದಲ್ಲಿ ಪಂಜಿನ ಮೆರವಣಿಗೆ ಆಕರ್ಷಣೀಯ ಕೇಂದ್ರವಾಗಿತ್ತು. ಪಂಚಕಳಸ ಮಹಾರಥೋತ್ಸವಕ್ಕೆ ಆಗಮಿಸಿದ ಭಕ್ತರು. ತಮ್ಮ ಹರಕೆಗಳನ್ನು ಸಮರ್ಪಿಸಿದರು.

ಮಹಾರಥೋತ್ಸವಕ್ಕೆ ಉತ್ತತ್ತಿ ಹಾಗೂ ಬಾಳೆಹಣ್ಣನ್ನು ಸಮರ್ಪಿಸಿ ಸ್ವಾಮಿಯ ಕೃಪೆಗೆ ಪಾತ್ರರಾದರು. ಮಹಾರಥೋತ್ಸವ ದಿನದಿಂದ 5 ದಿನಗಳವರೆಗೆ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿದೆ. ಕುಕನೂರು ಪಟ್ಟಣದ ಮುಂಡರಗಿ ಅನ್ನದಾನಿಶ್ವರ ಶಾಖ ಮಠದ ಶ್ರೀಗಳಾದ ಡಾ. ಮಹದೇವ ಮಹಾಸ್ವಾಮಿಗಳು, ಪ್ರಭುಲಿಂಗದೇವರು ಗುದ್ದೆಪ್ಪನಮಠ ಸೇರಿದಂತೆ ವಿವಿಧ ಮಠಾಧೀಶರು ದಿವ್ಯ ಸಾನಿಧ್ಯ ವಹಿಸಿದ್ದರು. ತಾಲೂಕಿನ ಎಲ್ಲಾ ಗ್ರಾಮದ ಗುರು ಹಿರಿಯರು ಮತ್ತು ಸಮಸ್ತ ಸದ್ಭಕ್ತರು ಮಹಾ ಈ ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

# ಇಂದು ತುಳಸಿಗೇರಿ ಕಾರ್ತಿಕೋತ್ಸವ

ಮಲ್ಲಮ್ಮ ನುಡಿ

ಬಾಗಲಕೋಟೆ: ತಾಲೂಕಿನ ತುಳಸಿಗೇರಿಯ ಮಾರುತೇಶ್ವರ ಜಾತ್ರೆ ಹಾಗೂ ಕಾರ್ತಿಕೋತ್ಸವ ಡಿ.6 ರಂದು ಜರುಗಲಿದೆ.

ಡಿ.6 ಶನಿವಾರ ಮಾರುತೇಶ್ವರನಿಗೆ ವಿಶೇಷ ಪಂಚಾಮೃತ ಅಭಿಷೇಕ, ಕಳಸಾರೋಹಣ, ವಿವಿಧ ಪೂಜಾ ಕೈಂಕರ್ಯಗಳು ನಡೆಯಲಿವೆ. ಶನಿವಾರ ಮಧ್ಯ ರಾತ್ರಿಯಿಂದ ರವಿವಾರ ಬೆಳಗಿನವರೆಗೆ ದೇವಸ್ಥಾನದಲ್ಲಿ



# ಸೂರ್ಯನಾರಾಯಣ ರೆಡ್ಡಿ ಅವರ 72ನೇ ಹುಟ್ಟು ಹಬ್ಬ ನಿಮಿತ್ಯ ಅನ್ನದಾನ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, :

ಮಾಜಿ ಶಾಸಕ, ಮುಖ್ಯಮಂತ್ರಿಗಳ ಮಾಜಿ ರಾಜಕೀಯ ಕಾರ್ಯದರ್ಶಿಗಳೂ ಮತ್ತು ಕೆಪಿಸಿಸಿ ಮಾಜಿ ಉಪಾಧ್ಯಕ್ಷರಾಗಿರುವ ನಾರಾ ಸೂರ್ಯನಾರಾಯಣ ರೆಡ್ಡಿ ಅವರ 72ನೇ ಹುಟ್ಟು ಹಬ್ಬದ ಅಂಗವಾಗಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಬಳ್ಳಾರಿಯ ಎಪಿಎಂಸಿ ಆವರಣದಲ್ಲಿ ನಿರ್ವಹಿಸುತ್ತಿರುವ 'ರೈತಣ್ಣ ಊಟ'ದಲ್ಲಿ ಮಧ್ಯಾಹ್ನದ ಸಿಹಿ ಊಟವನ್ನು ಕೃಷಿಕರಿಗೆ ವಿತರಿಸಲಾಯಿತು. ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಮತ್ತು ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರ ನೇತೃತ್ವದಲ್ಲಿ, 'ರೈತಣ್ಣನ ಊಟ'ವನ್ನು ಉಣಬಡಿಸಿ, ನಾರಾ ಸೂರ್ಯನಾರಾಯಣ ರೆಡ್ಡಿ ಅವರ ಆರೋಗ್ಯ, ಐಶ್ವರ್ಯ ಮತ್ತು ರಾಜಕೀಯ ಶ್ರೇಯಸ್ಸಿಗೆ ಪ್ರಾರ್ಥನೆ ಮಾಡಿ ಅನ್ನದಾನವನ್ನು ನೆರವೇರಿಸಲಾಯಿತು ಎಂದು ಹೇಳಿದರು. ವಿವಿಧ ಗ್ರಾಮಗಳಿಂದ ರೈತರು, 'ಪ್ರತಿ ನಿತ್ಯವೂ ರೈತಣ್ಣನ ಊಟ ಸಿಗುತ್ತದೆ. ಶುಕ್ರವಾರ ಮಾಜಿ ಶಾಸಕರಾಗಿರುವ ಎನ್. ಸೂರ್ಯನಾರಾಯಣ ರೆಡ್ಡಿ ಅವರ 72ನೇ ಹುಟ್ಟು ಹಬ್ಬ ಇರುವ ಕಾರಣ, ಅನೇಕರಿಗೆ ಊಟ ವಿತರಣೆ ಆಗುತ್ತಿದೆ. 'ರೈತಣ್ಣನ ಊಟ'ದ ಆಯೋಜಕರಿಗೆ ಧನ್ಯವಾದಗಳು' ಎಂದು ಹೇಳಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಜಂಟಿ ಕಾರ್ಯದರ್ಶಿ ವಿ. ರಾಮಚಂದ್ರ, ಖಜಾಂಚಿಗಳಾದ ನಾಗಳ್ಳಿ ರಮೇಶ್, ಮಾಜಿ ಅಧ್ಯಕ್ಷರಾದ ಬಿ. ಮಹಾರುದ್ರಗೌಡ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಆಜೀವ ಸದಸ್ಯರು ಈ

# ಡಿ.6 ರಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಜಾಗೃತಿ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ ,ವಿಜಯನಗರ(ಹೊಸಪೇಟೆ: ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಮತ್ತು ಜಿಲ್ಲಾ ಕೈಗಾರಿಕೆ ಕೇಂದ್ರದ ವತಿಯಿಂದ ಆರ್‌ಎಎಂಪಿ ಯೋಜನೆಯಡಿ ಉದ್ಯಮಶೀಲತಾ ಚಟುವಟಿಕೆಗಳನ್ನು ಬೆಂಬಲಿಸಲು ವ್ಯಾಪಾರ ಅಭಿವೃದ್ಧಿ ಸೇವಾ ಪೂರೈಕೆದಾರರು(ಬಿಡಿಎಸ್‌ಪಿ) ಕುರಿತು ನಗರದ ವಿಜಯನಗರ ಕಾಲೇಜಿನಲ್ಲಿ ಡಿಸೆಂಬರ್.6 ರಂದು ಬೆ.10 ಗಂಟೆಗೆ ಒಂದು ದಿನದ ಜಾಗೃತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕೈಗಾರಿಕೆ ಕೇಂದ್ರದ ಜಂಟಿ ನಿರ್ದೇಶಕ ಬಿ.ಸೋಮಶೇಖರ್ ತಿಳಿಸಿದ್ದಾರೆ.

ಕಾರ್ಯಾಗಾರದಲ್ಲಿ ಉದ್ಯಮಿದಾರರಿಗೆ ವ್ಯಾಪಾರ ಅವಕಾಶಗಳ ಕುರಿತು ಮಾರ್ಗದರ್ಶನ,ವ್ಯವಹಾರ ಯೋಜನೆಗೆ ಸಿದ್ದತೆಗೆ ಸಹಕಾರ, ತಂತ್ರಜ್ಞಾನದ ಉನ್ನತೀಕರಣ ಮತ್ತು ಗುಣಮಟ್ಟದ ಪ್ರಮಾಣೀಕರಣಕ್ಕೆ ಬೆಂಬಲ, ಬ್ರಾಂಡಿಂಗ್ ಮತ್ತು ರಫ್ತು ಪ್ರಚಾರದ ಕುರಿತು ಜಾಗೃತಿ ಮೂಡಿಸಲಾಗುತ್ತದೆ. ಅಸಕ್ತಿವುಳ್ಳ ಉದ್ದಿಮೆದಾರರು ಪಾಲ್ಗೊಳ್ಳಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದಿ ನಾಯಿಗಳ ಉಪಟಳ ಕಡಿವಾಣಕ್ಕೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಬಳ್ಳಾರಿ ಮಹಾನರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳ ಮುಖ್ಯಸ್ಥರು ಸರ್ವೋಚ್ಚ ನ್ಯಾಯಾಲಯ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳು ವಾಸವಿದ್ದಲ್ಲಿ, ಪರಿಶೀಲಿಸಿ ಬೀದಿ ನಾಯಿಗಳ ಸಂಖ್ಯೆಯ ಮಾಹಿತಿಯನ್ನು ಬಳ್ಳಾರಿ ಮಹಾನಗರ ಪಾಲಿಕೆಯ ಕಚೇರಿಗೆ ಸಲ್ಲಿಸಬೇಕು ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ಸರ್ಕಾರಿ ಮತ್ತು ಖಾಸಗಿ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರವೇಶ ನಿಯಂತ್ರಿಸಲು ಕ್ರಮವಹಿಸಬೇಕು. ನಗರ ಸ್ಥಳೀಯ ಸಂಸ್ಥೆಗಳಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಬಂಧಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡಬೇಕು.

ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಕ್ರಮವಹಿಸಬೇಕು ಎಂದು ಅವರು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೋಲಾಚಲಂ ವೆಂಕಟರಾವ್ ಪ್ರತಿಮೆ ಅಳವಡಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ದಿವಂಗತ ಕೋಲಾಚಲಂ ವೆಂಕಟರಾವ್ ರವರ ಪ್ರತಿಮೆ ಹಾಗೂ ನಾಮ ಫಲಕಗಳನ್ನು ಅಳವಡಿಸುವಂತೆ ಕೋಲಾಚಲಂ ವಿಶ್ವ ಪ್ರಕಾಶ್ ರವರ ಮೂಲಕ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರಿಗೆ ಸಲ್ಲಿಸಲಾಯಿತು.

ಶಾಸಕರ ಕಚೇರಿಗೆ ತೆರಳಿದ ಬ್ರಾಹ್ಮಣ ಸಮುದಾಯದ ಮುಖಂಡರು ಕೋಲಾಚಲಂ ಅವರು ಬಳ್ಳಾರಿಗೆ ನೀಡಿದ ವಿವಿಧ ರೀತಿಯ ಸಾಹಿತ್ಯಕ, ಸಾಂಸ್ಕೃತಿಕ ಕೊಡುಗೆಗಳ ಕುರಿತು ಮನವರಿಕೆ ಮಾಡಿಕೊಟ್ಟರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಜಿಲ್ಲಾಧ್ಯಕ್ಷರಾದ ಡಾ. ಶ್ರೀನಾಥ್, ಅಖಿಲ ಕರ್ನಾಟಕದ ಬ್ರಾಹ್ಮಣ ಮಹಾಸಭಾದ ರಾಜ್ಯ ಕಾರ್ಯಕಾರಣಿ ಸದಸ್ಯರಾದ ಸತೀಶ್ ದೇಸಾಯಿ, ಸಿಮೆಂಟ್ ಗಿರಿ ಪ್ರಸಾದ್, ನೇಮಕಲ್ ರಾವ್, ಮಂಜುನಾಥ್ ಭಟ್, ಕೆ.ಪ್ರಕಾಶ್, ಜೋಯಿಸ್ ಶ್ರೀನಾಥ್, ಬಾದನಹಟ್ಟಿ ರಘುನಂದನ, ಸಮರ್ಥ, ರಾಘು, ಡೋಕ್ಕಿ ಗಿರಿ, ಬಜಾರದ ಹರಿ ಪ್ರಸಾದ್ ಇನ್ನಿತರರು ಈ ಸಂದರ್ಭದಲ್ಲಿ ಇದ್ದರು.

# ಚೊಚ್ಚಲ ಕೃತಿಗೆ ಧನಸಹಾಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2025–26ನೇ ಸಾಲಿನ ಯುವ ಬರಹಗಾರರ ಚೊಚ್ಚಲ ಕೃತಿಗಳನ್ನು ಪ್ರಕಟಿಸಲು ಪ್ರೋತ್ಸಾಹಧನ ನೀಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಆಯ್ಕೆಯಾದ 50 ಯುವಬರಹಗಾರರ ಹಸ್ತ ಪ್ರತಿಗಳ ಪ್ರಕಟಣೆಗೆ ಮಾತ್ರ ರೂ.15,000 ಗಳ ಪ್ರೋತ್ಸಾಹಧನ ನೀಡಲಾಗುವುದು.

ಅರ್ಜಿದಾರರು 18 ರಿಂದ 40 ವರ್ಷ ವಯೋಮಿತಿಯವರಾಗಿರಬೇಕು. ಸ್ವ–ವಿವರವುಳ್ಳ ಪ್ರಾಧಿಕಾರದ ಅರ್ಜಿ ನಮೂನೆಯೊಂದಿಗೆ ದೃಢೀಕೃತ ಎಸ್.ಎಸ್.ಎಲ್.ಸಿ ಪ್ರಮಾಣ ಪತ್ರದ ಪ್ರತಿ ಅಥವಾ ಅಧಿಕೃತವಾದ, ದೃಢೀಕರಿಸಲ್ಪಟ್ಟ ಜನ್ಮ ದಾಖಲಾತಿ ಪ್ರಮಾಣ ಪತ್ರದ ಪ್ರತಿ ಸಲ್ಲಿಸಬೇಕು. ಪ್ರಸ್ತುತ ಸಲ್ಲಿಸಲ್ಪಡುತ್ತಿರುವ ಕೃತಿಯು ತಮ್ಮ ಚೊಚ್ಚಲ ಕೃತಿಯಾಗಿದ್ದು, ಎಲ್ಲಿಯೂ ಪ್ರಕಟವಾಗಿಲ್ಲವೆಂದು ಸ್ವಯಂ ದೃಢೀಕರಣ ನೀಡಬೇಕು.

ಆಯ್ಕೆಗಾಗಿ ಸಲ್ಲಿಸುವ ಹಸ್ತಪ್ರತಿಯು ಡಿ.ಟಿ.ಪಿ ಮಾಡಿಸಿದಾಗ 1/8 ಡೆಮ್ಮಿ ಅಳತೆಯಲ್ಲಿ ಕನಿಷ್ಠ 60 ಪುಟಗಳಿರಬೇಕು. ಅನುವಾದ, ಪಠ್ಯಪುಸ್ತಕ ಹಾಗೂ ಬೇರಾವುದೇ ಪದವಿ, ಸ್ನಾತಕೋತ್ತರ ಪದವಿಗೆ ಸಿದ್ಧಪಡಿಸಿದ ಸಂಶೋಧನಾ ಪ್ರಬಂಧಗಳನ್ನು ಹೊರತುಪಡಿಸಿ, ಕಥೆ, ಕಾದಂಬರಿ, ಕವನ, ನಾಟಕ, ವಿಮರ್ಶಾ ಲೇಖನ, ಪ್ರಬಂಧ ಮುಂತಾದ ಕನ್ನಡ ಸಾಹಿತ್ಯ ಪ್ರಕಾರಗಳಿಗೆ ಸಂಬಂಧಿಸಿದಂತೆ ಹಸ್ತಪ್ರತಿ ಇರಬೇಕು.

ಕೃತಿಯ ಪಠ್ಯದಲ್ಲಿ ಯಾವುದೇ ಧರ್ಮ, ದೇವರು, ಜಾತಿ, ಕೋಮು, ವೃತ್ತಿ, ಸಮುದಾಯ, ಭಾಷೆ, ಆಚರಣೆ, ಪದ್ಧತಿ, ಇತ್ಯಾದಿ ಸಂಗತಿಗಳಿಗೆ ಸಂಬಂಧಿಸಿದಂತೆ ಹಾಗೂ ರಾಷ್ಟ್ರೀಯ ನಾಯಕರುಗಳ ಕುರಿತಂತೆ ನೇರವಾಗಿಯೇ ಆಗಲಿ ಅಥವಾ ಪರೋಕ್ಷವಾಗಿಯೇ ಆಗಲಿ ಮನನೋಯಿಸುವಂತಹ ವಿಷಯವಾಗಲಿ ಇರಬಾರದು. ಅಲ್ಲದೆ ರಾಷ್ಟ್ರೀಯ ಭಾವೈಕ್ಯತೆಗೆ ಧಕ್ಕೆ ತರುವಂತಹ ವಿಷಯ, ಸಂಗತಿಗಳು ಪ್ರಸ್ತಾಪವಾಗಿರಬಾರದು. ಪ್ರಾಧಿಕಾರಕ್ಕೆ ಸಲ್ಲಿಸಲ್ಪಡುವ ಅರ್ಜಿಗಳೊಂದಿಗಿನ ಹಸ್ತಪ್ರತಿಗಳನ್ನು ಹಿಂದಿರುಗಿಸಲಾಗುವುದಿಲ್ಲ.

ಹಾಗಾಗಿ ತಮ್ಮ ಮೂಲ ಹಸ್ತಪ್ರತಿಯ ಒಂದು ಪ್ರತಿಯನ್ನು ತಮ್ಮ ಬಳಿಯೇ ಇಟ್ಟುಕೊಳ್ಳುವುದು. ಅರ್ಜಿಗಳೊಂದಿಗೆ ಹಸ್ತಪ್ರತಿ ಸಲ್ಲಿಸಲು ಕೊನೆಯ ಡಿ.24 ರಂದು ಸಂಜೆ 5.30 ಗಂಟೆಯೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು – 560 002 – ಅವರಿಗೆ ಅರ್ಜಿ ನಮೂನೆಯೊಂದಿಗೆ ಡಿ.ಟಿ.ಪಿ ಮಾಡಿದ ಹಸ್ತಪ್ರತಿಯನ್ನು ಕಳುಹಿಸಿಕೊಡಲು ಕೋರಿದೆ.

ಅರ್ಜಿ ನಮೂನೆ ಅಥವಾ ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು –560002 ಹಾಗೂ ವೆಬ್ ಸೈಟ್ www.kannada-pustakapradhikara.com, ಇಲ್ಲವೇ ದೂ.080–22484516 / 22107704 ಗೆ ಸಂಪರ್ಕಿಸಬಹುದು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾಯಾಧೀಶೆ ಕೆ.ಜಿ.ಶಾಂತಿ ಅಭಿಮತ

# ಸಂವಿಧಾನದ ಪ್ರಸ್ತಾವನೆಯಲ್ಲಿಯೇ ಅಡಗಿದೆ ದೇಶದ ಭದ್ರಬುನಾದಿ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯ, ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ, ಸ್ವಾತಂತ್ರ ಮತ್ತು ಸಮಾನತೆ, ಭ್ರಾತೃತ್ವ, ಪ್ರಜಾಪ್ರಭುತ್ವ, ವ್ಯಕ್ತಿ ಗೌರವ ಸೇರಿದಂತೆ ಎಲ್ಲಾ ಅಂಶಗಳನ್ನು ಸಂವಿಧಾನದ ಪ್ರಸ್ತಾವನೆಯಲ್ಲಿ ಅಳವಡಿಸಲಾಗಿದ್ದು, ಇದೇ ನಮ್ಮ ದೇಶದ ಭದ್ರ ಬುನಾದಿಯಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಕೆ.ಜಿ.ಶಾಂತಿ ಅವರು ಹೇಳಿದರು.

ವೀರಶೈವ ವಿದ್ಯಾವರ್ಧಕ ಸಂಸ್ಥೆ, ಜಿಲ್ಲಾ ನ್ಯಾಯಾಂಗ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಂಯುಕ್ತಾಶ್ರಯದಲ್ಲಿ ನಗರದ ನಗರದ ವುಂಕಿ ಸಣ್ಣರುದ್ರಪ್ಪ ಕಾನೂನು ಕಾಲೇಜಿನ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಂವಿಧಾನವು ಜನವರಿ 26, 1950 ರಂದು ಜಾರಿಗೆ ಬಂದಿತು. 1949 ರ ನವೆಂಬರ್ 26 ರಂದು ಭಾರತದ ಸಂವಿಧಾನವನ್ನು ಅಂಗೀಕರಿಸಲಾಯಿತು. ಇದರ ನೆನಪಿಗಾಗಿ ಅಂಗೀಕಾರದ ದಿನವನ್ನು ಸ್ಮರಿಸಲು ಸಂವಿಧಾನ ದಿನ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಭಾರತ ಸರ್ಕಾರವು 2015 ರಲ್ಲಿ ನವೆಂಬರ್ 26 ಅನ್ನು ಸಂವಿಧಾನ ದಿನ ಮತ್ತು ಕಾನೂನು ದಿನಾಚರಣೆ ಎಂದು ಸಹ ಆಚರಿಸಲು ನಿರ್ದೇಶನ ನೀಡಿತು. ಡಾ.ಬಿ.ಆರ್. ಅಂಬೇಡ್ಕರ್ ಅವರಿಗೆ ಗೌರವ ನಮನ ಸಲ್ಲಿಸಲು ಸಂವಿಧಾನ ದಿನ ಆಚರಿಸಲಾಗುತ್ತದೆ ಎಂದು ಹೇಳಿದರು.

ನಮ್ಮ ಸಂವಿಧಾನ ವಿಶ್ವದಲ್ಲೇ ಅತಿದೊಡ್ಡ ಲಿಖಿತ ರೂಪದಲ್ಲಿದ್ದು, ದೇಶದಲ್ಲಿ ಯಾವುದೇ ಕಾಯ್ದೆ–ಕಾನೂನುಗಳನ್ನೂ ರೂಪಿಸಬೇಕಾದರೆ ಅದರ ಭದ್ರ ಬುನಾದಿಯಾಗಿ ಸಂವಿಧಾನ ಕಾರ್ಯನಿರ್ವಹಿಸುತ್ತದೆ. ದೇಶದಲ್ಲಿ ಆಡಳಿತ, ಸರ್ಕಾರದ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗಗಳು, ಎಲ್ಲ ಕಾಯ್ದೆಗಳು ಕಾನೂನಾತ್ಮಕವಾಗಿ ಕಾರ್ಯನಿರ್ವಹಿಸಲು ಸಂವಿಧಾನ ಮಾರ್ಗದರ್ಶನ ಮಾಡುತ್ತದೆ ಎಂದು ತಿಳಿಸಿದರು.



ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳನ್ನು ಮರೆಯಬಾರದು. ನಮ್ಮ ಸಂವಿಧಾನದಂತೆ ನೇಪಾಳ ಮತ್ತು ಪಾಕಿಸ್ತಾನ ದೇಶಗಳ ಸಂವಿಧಾನವೂ ರಚನೆಯಾಯಿತು. ಅಲ್ಲಿ ಸಂವಿಧಾನಗಳೇ ಬದಲಾವಣೆಗಳಾದವು. ಆದರೆ ನಮ್ಮ ಸಂವಿಧಾನದಲ್ಲಿ ಕೇವಲ ತಿದ್ದುಪಡಿ ಮಾಡಲಾಯಿತು ಎಂದು ತಿಳಿಸಿದರು. ಭಾರತವು ವಿವಿಧತೆಯಲ್ಲಿ ಏಕತೆ ಹೊಂದಿದ ದೇಶ. ಹಲವು ಜಾತಿ–ಧರ್ಮ, ಭಾಷೆ, ವಿವಿಧ ಸಂಸ್ಕೃತಿ ಒಳಗೊಂಡಿದ್ದು, ಸಂವಿಧಾನದ ಪೂರಕವಾಗಿ ಜೀವನ ಮಾಡಿದರೆ ಉತ್ತಮ ಪ್ರಜೆಯಾಗಲು ಸಾಧ್ಯ. ಸಂವಿಧಾನ ವಿರುದ್ಧವಾಗಿ ನಡೆದರೆ ತೆ–ಊಂದರೆ ಅನುಭವಿಸಬೇಕಾಗುತ್ತದೆ ಎಂದು ಅಭಿಪ್ರಾಯಪಟ್ಟರು. ಸಂವಿಧಾನದಲ್ಲಾದ ಹಲವು ತಿದ್ದುಪಡಿಗಳನ್ನು ಈಗಿನ ವಕೀಲರೂ ಪರಿಪೂರ್ಣವಾಗಿ ಅರ್ಥೈಸಿಕೊಳ್ಳುವ ಮೂಲಕ ಸಾಮಾನ್ಯ ಜನರಿಗೆ ನ್ಯಾಯ ಒದಗಿಸಲು ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಸಂವಿಧಾನದ ಪ್ರಸ್ತಾವನೆ ಭೋದಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ವುಂಕಿ ಸಣ್ಣರುದ್ರಪ್ಪ ಕಾನೂನು ಕಾಲೇಜಿನ ಅಧ್ಯಕ್ಷ ಟಿ.ನರೇಂದ್ರ ಬಾಬು, ಸದಸ್ಯರಾದ ಚಂದ್ರಶೇಖರ್, ಉಡೇದ ಪ್ರಭುದೇವ, ಕಾಲೇಜಿನ ಪ್ರಾಚಾರ್ಯರಾದ ಡಾ.ಕೆ.ರಜನಿ ಕುಮಾರಿ ಸೇರಿದಂತೆ ಕಾಲೇಜಿನ ಆಡಳಿತ ಸಿಬ್ಬಂದಿ, ಭೋದಕ–ಭೋದಕೇತರ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬಂಡಿಗಣಿ ಬಸವಗೋಪಾಲ ಸ್ವಾಮೀಜಿ ವಿಧಿವಶ



**ಮಲ್ಲಮ್ಮ ನುಡಿಬಾಗಲಕೋಟೆ,:** ತ್ರಿವಿಧ ದಾಸೋಹಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಬಾಗಲಕೋಟೆ ಜಿಲ್ಲೆ ರಬಕವಿ–ಬನಹಟ್ಟಿ ತಾಲೂಕಿನ ಬಂಡಿಗಣಿ ಬಸವಗೋಪಾಲ ನೀಲಮಾಣಿಕಮಠದ ಚಕ್ರವರ್ತಿ ಅನ್ನದಾನೇಶ್ವರ ಶ್ರೀಗಳು(76) ಶುಕ್ರವಾರ ಬೆಳಗಿನ ಜಾವ ವಿಧಿವಶರಾದರು. ಯಕೃತ್ ಸಮಸ್ಯೆಯಿಂದ ಬಳಲುತ್ತಿದ್ದ ಶೀಗಳು ಬೆಳಗಾವಿಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಇಂದು ಜೀವ ತ್ಯಜಿಸಿದರು. ಶ್ರೀಗಳ ಅಂತ್ಯಕ್ರಿಯೆಗೆ ಸಕಲ ರೀತಿಯ ಸಿದ್ಧತೆಯನ್ನು ರಬಕವಿ–ಬನಹಟ್ಟಿ ತಾಲೂಕಿನ ಬಂಡಿಗಣಿಯ ಬಸವಗೋಪಾಲ ನೀಲಮಾಣಿಕಮಠದಲ್ಲಿ ನಡೆಸಲಾಗುತ್ತಿದ್ದು, ಶುಕ್ರವಾರ ರಾತ್ರಿ 10 ಗಂಟೆಯಿಂದ ಶನಿವಾರ ಸಂಜೆ 4 ಗಂಟೆಯವರೆಗೆ ಸಾರ್ವಜನಿಕ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.ಸಂತಾಪ: ಬಂಡಿಗಣಿಯ ಅನ್ನದಾನೇಶ್ವರ ಶ್ರೀಗಳ ನಿಧನಕ್ಕೆ ಮಾಜಿ ಸಚಿವ ಎಸ್.ಆರ್.ಪಾಟೀ ತೀವ್ರ ದು:ಖ ವ್ಯಕ್ತಪಡಿಸಿ ಸಂತಾಪ ಸೂಚಿಸಿದ್ದಾರೆ. ಪಂಡರಪುರ, ತಿರುಪತಿ, ಶ್ರೈಶೈಲ್, ಕೊಲ್ಲಾಪುರ ಸೇರಿದಂತೆ ರಾಜ್ಯ ಮತ್ತು ಅಂತರರಾಜ್ಯದ ಅನೇಕ ಪವಿತ್ರ ಕ್ಷೇತ್ರಗಳಲ್ಲಿ ನಿರಂತರ ಅನ್ನಪ್ರಸಾದ ಮಾಡಿ, ಅನ್ನದಾನೇಶ್ವರ ಎಂಬ ಗೌರವಕ್ಕೆ ಪಾತ್ರರಾಗಿದ್ದ ಶ್ರೀಗಳ ಸೇವಾಸಾರ ತತ್ವ ಜನಮಾನಸದಲ್ಲಿ ಸದಾಕಾಲ ನೆನಪಿನಲ್ಲಿ ಉಳಿಯಲಿದೆ. ಭಗವಂತ ಶ್ರೀಗಳ ಆತ್ಮಕ್ಕೆ ಚಿರಶಾಂತಿ ನೀಡಲಿ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಭಕ್ತವೃಂದಕ್ಕೂ, ಶಿಷ್ಯ ಪರಿವಾರಕ್ಕೂ ನೀಡಲಿ ಎಂದು ಪಾಟೀಲ ಹೇಳಿದ್ದಾರೆ.

# ದೇವದಾಸಿರಿಗೆ ಮತ್ತು ವಿಕಲಚೇತನರಿಗೆ ಕಾನೂನು ಅರಿವು ಕಾರ್ಯಗಾರ ಬಳ್ಳಾರಿ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಡಿ.06 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾ ಪಂಚಾಯತ್‌ನ ನಜೀರ್ ಸಾಬ್ ಸಭಾಂಗಣದಲ್ಲಿ ದೇವದಾಸಿ ಮಹಿಳೆಯರಿಗೆ ಮತ್ತು ವಿಕಲಚೇತನರಿಗೆ ಸರ್ಕಾರಿ ಸೌಲಭ್ಯಗಳ ಕುರಿತು ಕಾನೂನು ಅರಿವು ಕಾರ್ಯಗಾರ ಏರ್ಪಡಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಜಿ.ಶಾಂತಿ ಅವರು ಕಾರ್ಯಗಾರ ಉದ್ಘಾಟಿಸುವರು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧ್ಯಕ್ಷತೆ ವಹಿಸುವರು.ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ ಎಂ., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಸವಿತಾ.ಸಿ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರು ಹಾಗೂ ಯೋಜನಾಧಿಕಾರಿ ಸುಧಾ.ಎಂ.ಚಿದ್ರಿ ಅವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ: ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,**

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ವತಿಯಿಂದ 2025–26ನೇ ಸಾಲಿನ ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ ನೃತ್ಯ, ಸುಗಮ ಸಂಗೀತ, ಕಥಾಕೀರ್ತನ ಮತ್ತು ಗಮಕ ಕಲಾ ಕೇತ್ಷಗಳಲ್ಲಿ ಅಭ್ಯಾಸ ಮಾಡಿತ್ತಿರುವ 16 ರಿಂದ 24 ವರ್ಷದೊಳಗಿನ ಅಭ್ಯರ್ಥಿಗಳಿಂದ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.ಶಿಷ್ಯವೇತನದ ಆಯ್ಕೆ ಪ್ರಕ್ರಿಯೆಯನ್ನು ಮೊಬೈಲ್/ವಿಡಿಯೋ ಚಿತ್ರೀಕರಣದ ಮೂಲಕ ಆಯ್ಕೆ ಮಾಡಲಾಗುವುದು. ಅರ್ಜಿಗಳ ಮಾಹಿತಿಯ ಬಗ್ಗೆ ಅಕಾಡೆಮಿ ಪೇಸ್ ಬುಕ್ (ಜಿಚಿಛಿಜಬಥಠಠಞ.ಛಿಠಟ/ಞಚಿಡಿ–ಟಿಚಿಣಚಿಞಚಿಛಿಟಿರಜಜಣಚಿಟಡಿಣಣಥಿಚಿಜಿಜಟಥಿ) ಅಥವಾ ಅಕಾಡೆಮಿಯ ವೈಬ್‌ಸೈಟ್ (ಖಚಿಟಿರಜಜಣಚಿಟಡಿಣಣಥಿಚಿಜಿಛಿಜ–ಜಟಥಿ.ಞಚಿಡಿಟಚಿಣಚಿಞಚಿ.ರಠಡ.ಟಿ) ನಲ್ಲಿ ಡೌನ್ ಲೋಡ್ ಮಾಡಿಕೊಳ್ಳಬಹುದು. ಅರ್ಜಿಯನ್ನು ಜಿಲ್ಲಾ ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದು. ಅಭ್ಯರ್ಥಿಗಳು ಸಂದರ್ಶನದ ಬದಲಿಗೆ ಅರ್ಜಿಯಲ್ಲಿ ನೀಡಿರುವ ಪಠ್ಯಕ್ರಮವನ್ನು ಮೊಬೈಲ್/ವಿಡಿಯೋ ಚಿತ್ರೀಕರಿಸಿ ಪೆನ್ ಡ್ರೈವ್‌ನಲ್ಲಿ ಅಳವಡಿಸಿ ಪೆನ್ ಡ್ರೈವ್‌ನೊಂದಿಗೆ ಅರ್ಜಿಯನ್ನು ರಿಜಿಸ್ಟ್ರಾರ್ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು–560002 ಕಾರ್ಯಾಲಯಕ್ಕೆ ಅಂಚೆ ಮೂಲಕ ಅಥವಾ ಖುದ್ದಾಗಿ ತಲುಪಿಸಬಹುದು.ಅಭ್ಯರ್ಥಿಗಳು ಚಿತ್ರೀಕರಿಸಿ ಕಳುಹಿಸಿಕೊಟ್ಟಿರುವ ಪೆನ್ ಡ್ರೈವ್ ನ್ನು ತೀರ್ಪುಗಾರರು ಪರಿಶೀಲಿಸಿ ಆಯಾ ಕಲಾ ಪ್ರಕಾರದ ಅನುಗುಣವಾಗಿ ಶಿಷ್ಯವೇತನಕ್ಕೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಡಿ.20 ಕೊನೆಯ ದಿನವಾಗಿದೆ. ತೀರ್ಪುಗಾರರ ತೀರ್ಮಾನವೇ ಅಂತಿಮ ತಿರ್ಮಾನ ಎಂದು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಎನ್.ನರೇಂದ್ರಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿರೂರಿನಲ್ಲಿ ಸಾಮೂಹಿಕ ವಿವಾಹ–25 ಜೋಡಿಗಳಿಗೆ ಕಂಕಣಬಲ
# ಸಾಮೂಹಿಕ ವಿವಾಹ 'ಭಾಗ್ಯವಂತರ' ಮದುವೆ–ಬಿಲ್‌ಕೆರೂರ ಶ್ರೀಗಳು

**ಮಲ್ಲಮ್ಮ ನುಡಿಬಾಗಲಕೋಟೆ:** ಸಾಮೂಹಿಕ ವಿವಾಹಗಳಲ್ಲಿ ಮದುವೆಯಾಗುವವರು ಪುಣ್ಯವಂತರಾಗಿದ್ದು, ಈ ವಿವಾಹಗಳು ಬಡವರ ಮದುವೆಗಳಲ್ಲ, ಭಾಗ್ಯವಂತರ ಮದುವೆ ಎಂದು ಬಿಲ್‌ಕೆರೂರಿನ ಬಿಲ್ವಾಶ್ರಮ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ಶಿರೂರ ಪಟ್ಟಣದಲ್ಲಿ ಸಿದ್ದೇಶ್ವರ ಜಾತ್ರಾ ಮಹೋತ್ಸವ ಹಾಗೂ ಲಿಂ.ಸಿದ್ಧಲಿಂಗ ಶ್ರೀಗಳ 55 ನೇ ಪುಣ್ಯಾರಾಧನೆ ನಿಮಿತ್ತ ಸ್ಥಳೀಯ ಸಿಂಚನ ಗೆಳೆಯರ ಬಳಗ ಶುಕ್ರವಾರ ಹಮ್ಮಿಕೊಂಡಿ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಸಾನಿಧ್ಯವಹಿಸಿ ಅವರು ಮಾತನಾಡಿದರು.

ಸಾಮೂಹಿಕ ವಿವಾಹಗಳು ಬಡವರ ಮದುವೆಗಳು ಎನ್ನುವ ಕಲ್ಪನೆ ಬೇಡ. ಇಲ್ಲಿ ಮದುವೆಯಾಗುವವರು ಪುಣ್ಯಜೀವಿಗಳಾಗಿದ್ದು, ವಧು–ವರರು ಉತ್ತಮ ಜೀವನ ನಡೆಸಿ ಒಳ್ಳೆಯ ಮಕ್ಕಳಿಗೆ ಜನ್ಮ ನೀಡಿ, ಅವರಿಗೆ ಸಂಸ್ಕಾರ ನೀಡಿ ಸಮಾಜದ ಆಸ್ತಿಯನ್ನಾಗಿ ಮಾಡಬೇಕು ಎಂದು ಸ್ವಾಮೀಜಿ ಹೇಳಿದರು.

ಅಣ್ಣಿಗೇರಿಯ ದಾಸೋಹಮಠದ ಡಾ.ಶಿವಕುಮಾರಸ್ವಾಮೀಜಿ ಮಾತನಾಡಿ, ಪ್ರಪಂಚ ಹಾಗೂ ಪಾರಮಾರ್ಥ ಎರಡನ್ನೂ ಅನುಸರಿಸಿ ಬದುಕು ನಡೆಸುವವನೇ ಜಾಣ. ಮನುಷ್ಯ ಪ್ರಾಪಂಚಿಕ ಬದುಕಿನ ಜೊತೆಯಲ್ಲಿ ಪಾರಮಾರ್ಥ ಬದುಕನ್ನೂ ಸಹ ಅನುಸರಿಸಿಕೊಂಡು ನಡೆದಾಗ ಜೀವನ ಸುಂದರವಾಗಿರುತ್ತದೆ ಎಂದರಲ್ಲದೇ, ಸಾಮೂಹಿಕ ವಿವಾಹದ ಕೀರ್ತಿ ಗುಡ್ಡಾಪುರದ ದಾನಮ್ಮದೇವಿಗೆ ಸಲ್ಲುತ್ತದೆ ಎಂದರು.



ಗುಳೇದಗುಡ್ಡದ ಒಪ್ಪತ್ತೇಶ್ವರ ಶ್ರೀಗಳು, ಮರಡಿಮಠದ ಕಾಡಸಿದ್ದೇಶ್ವರ ಸ್ವಾಮೀಜಿ, ಶಿವಯೋಗಾಶ್ರಮದಮರಿಮಹಾಂತ ಚನ್ನವೀರ ದೇವರು ಮಾತನಾಡಿ, ಜಾತ್ರೆಗಳು ಕೇವಲ ಮೋಜು, ಮಸ್ತಿ ಮಾಡುವುದಕ್ಕಾಗಿ ಇರಕೂಡದು. ಸಮಾಜದ ಒಳಿತಿಗೆ ಉಪಯುಕ್ತಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜಾತ್ರೆಯನ್ನು ಅರ್ಥಪೂರ್ಣಗೊಳಿಸುವ ಕೆಲಸ ನಡೆಯಬೇಕು. ಇದಕ್ಕೆ ಶಿರೂರಿನ ಸಿಂಚನ ಗೆಳೆಯರ ಬಳಗದ ಕಾರ್ಯ ಅನುಕರಣೀಯವಾಗಿದೆ ಎಂದರು.

ಶಿವಯೋಗಾಶ್ರಮದ ಅಭಿನವ ಸಿದ್ಧಲಿಂಗ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಕಮತಗಿಯ ಹೊಳೆ ಹುಚ್ಚೇಶ್ವರ ಶ್ರೀಗಳು, ಅಮೀನಗಡದ ಪ್ರಭುಲಿಂಗೇಶ್ವರ ಸ್ವಾಮೀಜಿ, ಸಿದ್ದೇಶ್ವರ ವಿದ್ಯಾವರ್ಧಕ ಸಂಘಕ ಕಾರ್ಯದರ್ಶಿ ತಮ್ಮಣ್ಣ ಗಿರಿಜಾ, ಶಿಶು ಅಭಿವೃದ್ಧಿ ಇಲಾಖೆಯ ವಲಯ ಮೇಲ್ವಿಚಾರಕಿ ಜಯಶ್ರೀ ಕಟಗಿ, ಸಂಜಯ ನಡುವಿನಮನಿ, ಆರ್.ಎಸ್.ದೋಣಿ, ಬಸವಗೌಡ ಮಾಚಾ, ವಾಯ್.ಎಸ್.ಮಾವರಾಣಿ ವೇದಿಕೆಯಲ್ಲಿದ್ದರು. ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ಧನ ಸಹಾಯ ನೀಡಿದ ದಾನಿಗಳನ್ನು ಸನ್ಮಾನಿಸಲಾಯಿತು. 25 ಜೋಡಿ ಮದುವೆ: ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ 25 ಜೋಡಿ ವಧು–ವರರು ಸಪ್ತಪದಿ ತುಳಿದು ಸತಿಪತಿಗಳಾದರು.

# ಅದ್ದೂರಿಯಾಗಿ ನೆರವೇರಿದ ಶ್ರೀ ಗುದ್ನೇಶ್ವರ ಪಂಚಕಳಸ ಮಹಾ ರಥೋತ್ಸವ



**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ : ಪ್ರತಿ ವರ್ಷದಂತೆ ಈ ವರ್ಷವೂ ಸಹ ಹೊಸ್ತಿಲ ಹುಣ್ಣಿಮೆಯ ದಿವಸ ಸಾಯಂಕಾಲ ಕುಕನೂರ ಪಟ್ಟಣದ ಶ್ರೀ ಗುದ್ನೇಶ್ವರ ಜಾತ್ರಾ ಮಹೋತ್ಸವ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರ ಆರಾಧ್ಯ ದೈವ ಶ್ರೀ ಗುದ್ನೇಶ್ವರ (ಶ್ರೀ ರುದ್ರಮುನೇಶ್ವರ) ಜಾತ್ರಾ ಮಹೋತ್ಸವ ಜರುಗಿ–ತು. ಜಾತ್ರಾ ಮಹೋತ್ಸವದ ಮಹಾ ರಥೋತ್ಸವಕ್ಕೂ ಮುನ್ನ ಬ್ರಹ್ಮಿ ಮುಹೂರ್ತದಲ್ಲಿ ಶ್ರೀ ಮಠದಲ್ಲಿ ಪೂಜಾ ವಿಧಾನಗಳನ್ನು ನೆರವೇರಿಸಲಾಯಿತು. ಸಾಯಂಕಾಲ ಬಿನ್ನಾಳ ಗ್ರಾಮದಿಂದ ನಂದಿಕೋಲು ಸೇವೆ ಹಾಗೂ ಪಕ್ಕದಲ್ಲಿರುವ ಗ್ರಾಮವಾದ ಆಳಿಯಪನಮಠ ಗ್ರಾಮದಿಂದ ಅಳಿಯ ಚೆನ್ನಬಸವೇಶ್ವರ ಭಜನಾ ಸಂಘದವರಿಂದ ಪಲ್ಲಕ್ಕಿ ಸೇವೆ ಆಗಮಿಸುತ್ತಿದ್ದಂತೆಯೇ ಸ್ವಾಮಿಯ ಪಂಚ ಕಳಸ ಮಹಾ ರಥೋತ್ಸವಕ್ಕೆ ಚಾಲನೆ ನೀಡಲಾಯಿತು.

ನವ ವಿವಾಹಿತ ಜೋಡಿಗಳು ತಪ್ಪದೇ ಶ್ರೀ ಗುದ್ನೇಶ್ವರ ಪಂಚಕಳಸ ರಥೋತ್ಸವದ ದರ್ಶನ ಪಡೆದು ಪಾವನರಾಗಬೇಕು ಎಂಬುದು ಇಲ್ಲಿನ ಜನರಲ್ಲಿ ನಂಬಿಕೆಯಾಗಿದ್ದು. ಈ ರೀತಿ ಪಂಚಕಳಸ ಮಹಾರಾಥೋತ್ಸವದ ದರ್ಶನ ಪಡೆದ ದಂಪತಿಗಳು, ಮುಂದಿನ ವರ್ಷ ರಥೋತ್ಸವದ ವೇಳೆಗೆ ತಮ್ಮ ಸಂತಾನ ದೊಂದಿಗೆ ಆಗಮಿಸಿ ರಥೋತ್ಸವದ ದರ್ಶನ ಪಡೆ–ಯುತ್ತಾರೆ ಎಂಬುದು ಜನತೆಯ ನಂಬಿಕೆಯಾಗಿದೆ. ಮಹಾರಥೋತ್ಸವದಲ್ಲಿ ಪಂಜಿನ ಮೆರವಣಿಗೆ ಆಕರ್ಷಣೀಯ ಕೇಂದ್ರವಾಗಿತ್ತು. ಪಂಚ ಕಳಸ ಮಹಾರಥೋತ್ಸವಕ್ಕೆ ಆಗಮಿಸಿದ ಭಕ್ತರು. ತಮ್ಮ ಹರಕೆಗಳನ್ನು ಸಮರ್ಪಿಸಿದರು. ಮಹಾರಥೋತ್ಸವಕ್ಕೆ ಉತ್ತತ್ತಿ ಹಾಗೂ ಬಾಳೆಹಣ್ಣನ್ನು ಸಮರ್ಪಿಸಿ ಸ್ವಾಮಿಯ ಕೃಪೆಗೆ ಪಾತ್ರರಾದರು. ಮಹಾರಥೋತ್ಸವ ದಿನದಿಂದ 5 ದಿನಗಳವರೆಗೆ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿದೆ. ಕುಕನೂರು ಪಟ್ಟಣದ ಮುಂಡರಗಿ ಅನ್ನದಾನಿಶ್ವರ ಶಾಖ ಮಠದ ಶ್ರೀ ಡಾ. ಮಹದೇವ ಮಹಾಸ್ವಾಮಿಗಳು, ಪ್ರಭುಲಿಂಗ ದೇವರು ಗುದ್ದೆಪ್ಪನಮಠ ಸೇರಿದಂತೆ ವಿವಿಧ ಮಠಾಧೀಶರು ದಿವ್ಯ ಸಾನಿಧ್ಯ ವಹಿಸಿದ್ದರು. ತಾಲೂಕಿನ ಎಲ್ಲಾ ಗ್ರಾಮದ ಗುರು ಹಿರಿಯರು ಮತ್ತು ಸಮಸ್ತ ಸದ್ಭಕ್ತರು ಮಹಾ ಈ ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

# ಸಂಚಾರಿ ಕಲಾಜಾಥಾ ಪ್ರಚಾರಕ್ಕೆ ಜೆ.ಟಿ.ಪಾಟೀಲ ಚಾಲನೆ

**ಮಲ್ಲಮ್ಮ ನುಡಿ ಬಾಗಲಕೋಟೆ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಹಮ್ಮಿಕೊಂಡ ಸಂಚಾರಿ ಕಲಾಜಾಥಾ ಪ್ರಚಾರ ಕಾರ್ಯಕ್ಕೆ ಬೀಳಗಿ ಶಾಸಕ ಜೆ.ಟಿ.ಪಾಟೀಲ ಶುಕ್ರವಾರ ಚಾಲನೆ ನೀಡಿದರು.

ಜಿಲ್ಲಾಡಳಿತ ಭವನದ ಮುಖ್ಯ ಆವರಣದಲ್ಲಿ ಪ್ರಚಾರ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಸಾಮಾನ್ಯ ಜನರ ಜೀವನಮಟ್ಟವನ್ನು ಹೆಚ್ಚಿಸಲು ಹಲವು ಜನಹಿತ ಯೋಜನೆಗಳನ್ನು ಜಾರಿಗೊಳಿಸಿದೆ. ಪಂಚ ಗ್ಯಾರಂಟಿ ಯೋಜನೆ ಗ್ರಾಮೀಣ ಹಾಗೂ ನಗರ ಬಡಜನರ ಆರ್ಥಿಕ ಬಲವರ್ಧನೆಗೆ ಮಹತ್ತರ ಪಾತ್ರವಹಿಸುತ್ತಿದೆ ಎಂದರು. ಸಾರ್ವಜನಿಕರಿಗೆ ಸರ್ಕಾರದ ಯೋಜನೆಗಳು ನೇರವಾಗಿ ತಲುಪಬೇಕು ಎಂಬ ಉದ್ದೇಶದಿಂದ ತಂತ್ರಜ್ಞಾನವನ್ನು ಬಳಸಿಕೊಂಡು ಎಲ್‌ಇಡಿ ಕಲಾಜಾಥಾ ಪ್ರದರ್ಶನ ಸಂಚಾರಿ ವಾಹನದ ಮೂಲಕ ಪ್ರಚಾರ ಮಾಡಲಾಗುತ್ತಿದೆ. ಜನರು ಮಾಹಿತಿ ತಿಳಿದುಕೊಂಡು ಪಂಚ ಗ್ಯಾರಂಟಿ ಯೋಜನೆಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಹೇಳಿದ ಪಾಟೀಲ, ಕಲಾಜಾಥಾ ಜಿಲ್ಲೆಯ 20 ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಸಂಚರಿಸಿ, ಗ್ಯಾರಂಟಿ ಯೋಜನೆಗಳ ಕುರಿತು ಜನಜಾಗೃತಿ ಮೂಡಿಸಲಿದೆ ಎಂದು ಹೇಳಿದರು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ಅನೀಲಕುಮಾರ ದಡ್ಡಿ ಮಾತನಾಡಿ, ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಘನತೆಯಿಂದ ಜೀವನ ಸಾಗಿಸಬೇಕು.

ಆರ್ಥಿಕ, ಸಾಮಾಜಿಕವಾಗಿ ದುರ್ಬಲರಾದವರನ್ನು ಸಮಾಜದ ಮುಖ್ಯ ವಾಹಿನಿಗೆ ತರಬೇಕು ಎಂಬ ಆಶಯದೊಂದಿಗೆ ಸರಕಾರ ಅನ್ನಭಾಗ್ಯ, ಶಕ್ತಿ ಯೋಜನೆ, ಗೃಹಲಕ್ಷ್ಮೀ, ಗೃಹಜ್ಯೋತಿ ಹಾಗೂ ಯುವನಿಧಿ ಸೇರಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ.




ಈ ಯೋಜನೆಗಳ ವ್ಯಾಪಕ ಪ್ರಚಾರದ ನಿಟ್ಟಿನಲ್ಲಿ ವಾರ್ತಾ ಇಲಾಖೆ ಕಲಾಜಾಥಾ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಬಾದಾಮಿ ತಾಲೂಕಿನ ಗೋವಿನಕೊಪ್ಪದ ಕಾವೇರಿ ಬೀದಿನಾಟಕ ಕಲಾತಂಡವು ಗ್ಯಾರಂಟಿ ಯೋಜನೆಗಳ ಕುರಿತು ಹಾಡು ಹೇಳಿ, ಬೀದಿನಾಟಕ ಪ್ರದರ್ಶಿಸಿದರು. ಜಿಲ್ಲಾ ಪಂಚಾಯತ ಸಿಇಓ ಶಶಿಧರ ಕುರೇರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಶಿಕಲಾ ಶಿರೂರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕಿ ಕಸ್ತೂರಿ ಪಾಟೀಲ ಮತ್ತಿತರರು ಇದ್ದರು.

# ಧರ್ಮಸ್ಥಳ ಗ್ರಾಮಾಭಿವೃದ್ಧಿದಿಂದ ಲಕ್ಷ್ಮಿ ಪೂಜಾ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ**

ಮಸ್ಕಿ : ತಾಲೂಕಿನ ಭ್ರಮರಾಂಬ ದೇವಸ್ಥಾನದಲಿ ಗಾಂಧಿ ನಗರ ಮತ್ತು ಮಸ್ಕಿ ವಲಯ ಮಟ್ಟದ ಸಾಮೂಹಿಕ ಶ್ರೀ ಲಕ್ಷ್ಮಿ ಪೂಜಾ ಕಾರ್ಯಕ್ರಮ ಹಮ್ಮಿಕೊಂಡಿದ್ದು ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಷ ಬ್ರ ಶ್ರೀ ವರ ರುದ್ರಮುನಿ ಶಿವಾಚಾರ್ಯರು ಗಚ್ಚಿನ ಮಠ ಮಸ್ಕಿ ವಹಿಸಿದ್ದರು.

ಕಾರ್ಯಕ್ರಮವನ್ನು ಶಾಸಕ ಬಸವನಗೌಡ ತುರುವಿಹಾಳ ಇವರು ಉದ್ಘಾಟಿಸಿದರು ಈ ಕಾರ್ಯಕ್ರಮದಲ್ಲಿ, ಚಂದ್ರಶೇಖರ್ ಜೆ ಪ್ರಾದೇಶಿಕ ನಿರ್ದೇಶಕರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಕೊಪ್ಪಳ

ಸರ್ ಅವರು ಯೋಜನೆಯ ಕಾರ್ಯಕ್ರಮಗಳ ಬಗ್ಗೆ ಸವಿಸ್ತಾರವಾದ ಮಾಹಿತಿ ನೀಡಿದರು .

ಇದೇ ಸಂದರ್ಭದಲ್ಲಿ. ಎಂ ಅಮರೇಶ್ ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷರು, ಮಹಾಂತೇಶ ,ಶರಣಬಸವ ಸೊಪ್ಪಿ ಮಠ,ವೀರೇಶ ಸೌದ್ರಿ, ರಾಜಣ್ಣ ಪರಡಿ, ಕೃಷ್ಣ ಚಿಗರಿ, ವೆಂಕಟೇಶ್ ಜನಜಾಗೃತಿ ಸದಸ್ಯರು. ಯೋಜನಾಧಿಕಾರಿಗಳು,ಮಸ್ಕಿ ಮತ್ತು ಗಾಂಧಿನಗರ ವಲಯದ ಮೇಲ್ವಿಚಾರಕರು ಸೇವಾ ಪ್ರತಿನಿಧಿಗಳು ಒಕ್ಕೂಟದ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಭಾಗವಹಿಸಿದ್ದರು.



# ರೋಗಿಗಳ ಸುರಕ್ಷತೆ ಮೊದಲ ಆದ್ಯತೆಯಾಗಲಿ: ಡಾ.ಟಿ ದಿಲೀಪಕುಮಾರ

ಬಾಗಲಕೋಟೆ– ವೈದ್ಯಕೀಯ ಕ್ಷೇತ್ರದಲ್ಲಿ ನರ್ಸಿಂಗ್ ಸಿಬ್ಬಂದಿಯ ಸೇವೆ ಮಹತ್ವದ್ದಾಗಿದೆ. ಚಿಕಿತ್ಸೆಯ ಸಂದರ್ಭ ರೋಗಿಗಳ ಸುರಕ್ಷತೆ ಮೊದಲ ಆದ್ಯತೆಯಾಗಿದೆ. ಈ ದಿಸೆಯಲ್ಲಿ ತರಬೇತಿ ಹೊಂದಿದ ಸಿಬ್ಬಂದಿಯ ಅವಶ್ಯಕತೆ ಆಸ್ಪತ್ರೆಗಳಲ್ಲಿ ಅಗತ್ಯವಿದೆ ಎಂದು ನವದೆಹಲಿಯ ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅಧ್ಯಕ್ಷ ಡಾ.ಟಿ ದಿಲೀಪಕುಮಾರ ಹೇಳಿದರು.

ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಆವರಣದಲ್ಲಿ ಸಜ್ಜಲಶ್ರೀ ನರ್ಸಿಂಗ್ ಕಾಲೇಜಿನಲ್ಲಿ ಸ್ಥಾಪಿಸಿರುವ ರಾಷ್ಟ್ರೀಯ ರೆಫರೆನ್ಸ್ ಸಿಮ್ಯುಲೇಶನ್ ಕೇಂದ್ರ ಹಾಗೂ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಪ್ರಮಾಣಿಕರಣ ಕೇಂದ್ರ ಉದ್ಘಾಟಿಸಿ ಅಂತರಾಷ್ಟ್ರೀಯ ಸಮ್ಮೇಳನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ನರ್ಸಿಂಗ್ ಶಿಕ್ಷಣದಲ್ಲಿ ತಂತ್ರಜ್ಞಾನದ ಬಳಕೆ–ಯ ಕನಸು ಬಹುದಿನಗಳದ್ದಾಗಿತ್ತು. ಈಗ ಸಿಮ್ಯುಲೇಶನ್ ಕೇಂದ್ರದ ಸ್ಥಾಪನೆಯ ಮೂಲಕ ಆ ಕನಸು ನನಸಾಗುತ್ತಿದೆ. ಬಿ.ವಿ.ವಿ ಸಂಘದಲ್ಲಿ ಅತ್ಯಂತ ಆಧುನಿಕ ಸಿಮ್ಯುಲೇಶನ್ ಕೇಂದ್ರವನ್ನು ಸ್ಥಾಪಿಸುವುದರ ಮೂಲಕ ಡಾ.ವೀರಣ್ಣ ಚರಂತಿಮಠ ಅವರು ಕಲಿಕೆಗೆ ಪೂರಕವಾದ ವಾತಾವರಣವನ್ನು ನಿರ್ಮಿಸಿರುವರು. ಈ ಕೇಂದ್ರದಲ್ಲಿ ತರಬೇತಿ ಹೊಂದಿ ನರ್ಸಿಂಗ್ ವೃತ್ತಿಪರರು ವೈದ್ಯಕೀಯ ಕ್ಷೇತ್ರವನ್ನು ಬಲಪಡಿಸಲಿ ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ಭಗವಾನ ಬಿ.ಸಿ, ಭಾರತ ನರ್ಸಿಂಗ್ ಶಿಕ್ಷಣದಲ್ಲಿ ಮುಂಚೂಣಿಯಲ್ಲಿದೆ. ಈ ಕ್ಷೇತ್ರದಲ್ಲಿ ಸಂಶೋಧನೆ ಪ್ರಗತಿಯಲ್ಲಿದೆ. ವೈದ್ಯಕೀಯ ಕ್ಷೇತ್ರದಲ್ಲಿ ಪರಿಣತರನ್ನು ರೂಪಿಸಲು ತರಬೇತಿಗಾಗಿ ಸಿಮ್ಯುಲೇಶನ್ ಕೇಂದ್ರಗಳ ಅಗತ್ಯವಿದ್ದು ವಿಶೇಷವಾಗಿ ನರ್ಸಿಂಗ್ ಸಿಬ್ಬಂದಿಗೆ ತರಬೇತಿ ನೀಡಬೇಕಾಗಿದೆ ಎಂದು ನುಡಿದ ಅವರು ಗ್ರಾಮಮಟ್ಟದ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಡಾ.ವೀರಣ್ಣ ಚರಂತಿಮಠ ಅವರು ರಾಜ್ಯದಲ್ಲಿ ಶಿಕ್ಷಣ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುತ್ತಿರುವರು ಎಂದು






ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿದ ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಸಿ.ಚರಂತಿಮಠ ಅವರು ಕೊವಿಡ್ ಸಂದರ್ಭ ನರ್ಸಿಂಗ್ ಸಿಬ್ಬಂದಿಯ ಸೇವೆ ಅವಿಸ್ಮರಣೀಯ. ದೇಶದ ವಿವಿಧ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನರ್ಸಿಂಗ್ ವೃತ್ತಿಪರರು ಈ ಸಿಮ್ಯುಲೇಶನ್ ಕೇಂದ್ರದಲ್ಲಿ ತರಬೇತಿ ಹೊಂದಲು ಅವಕಾಶವಿದೆ. ಸಿಮ್ಯುಲೇಶನ್ ಕೇಂದ್ರದ ಸ್ಥಾಪನೆಗಾಗಿ ಅಗತ್ಯದ ಮಾರ್ಗದರ್ಶನ ನೀಡಿದ ಭಾರತೀಯ ನರ್ಸಿಂಗ್ ಮಂಡಳಿ, ಜಪೈಗೊ ಹಾಗೂ ಲ್ಯಾರ್ಡಲ್ ಮೆಡಿಕಲ್ ಸಂಸ್ಥೆಗಳ ಪ್ರತಿನಿಧಿಗಳಿಗೆ ಕೃತಜ್ಞತೆಗಳು ಎಂದರು.

ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಮತ್ತು ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ) ವೇದಿಕೆಯಲ್ಲಿದ್ದರು.

ಒಡಂಬಡಿಕೆ :ಇದೇ ಸಂದರ್ಭ ನರ್ಸಿಂಗ್ ವಿಜ್ಞಾನದ ಸಂಶೋಧನೆ ಹಾಗೂ ತರಬೇತಿಗಾಗಿ ಬಿ.ವಿ.ವಿ ಸಂಘ, ಭಾರತೀಯ ನರ್ಸಿಂಗ್ ಮಂಡಳಿ, ಜಪೈಗೊ ಮತ್ತು ಲ್ಯಾರ್ಡಲ್ ಮೆಡಿಕಲ್ ನಡುವೆ ಒಡಂಬಡಿಕೆ ಪತ್ರವನ್ನು ವಿನಿಮಯ ಮಾಡಿಕೊಳ್ಳಲಾಯಿತು.

ಸಜ್ಜಲಶ್ರೀ ನರ್ಸಿಂಗ್ ಕಾಲೇಜ್ ಪ್ರಾಚಾರ್ಯ ಡಾ.ದಿಲೀಪ ನಾಟೆಕರ್ ಸ್ವಾಗತಿಸಿದರು. ಸಿಮ್ಯುಲೇಶನ್ ಕೇಂದ್ರದ ಮಹತ್ವ ಕುರಿತು ಲ್ಯಾರ್ಡಲ್ ಮೆಡಿಕಲ್‌ನ ಮ್ಯಾನೇಜಿಂಗ್ ಡೈರೆಕ್ಟರ್ ಸಂಜೀವಸಿಂಗ್ ಮತ್ತು ಜಪೈಗೊ ಸಂಸ್ಥೆಯ ಡೆಪ್ಯುಟಿ ಡೈರೆಕ್ಟರ್ ಡಾ.ಕಮಲೇಶಲಾಲಚಂದಾನಿ ಪ್ರಾಸ್ತಾವಿಕ ಮಾತನಾಡಿದರು. ವಿದೇಶಗಳಿಂದ ಆಗಮಿಸಿದ ನರ್ಸಿಂಗ್ ತಜ್ಞರು ಸಿಮ್ಯುಲೇಶನ್ ಕೇಂದ್ರದ ಅಗತ್ಯ ಕುರಿತು ಉಪನ್ಯಾಸ ನೀಡಿದರು. ಬಿ.ವಿ.ವಿ ಸಂಘದ ವತಿಯಿಂದ ಡಾ.ದಿಲೀಪಕುಮಾರ, ಡಾ.ಭಗವಾನ ಬಿ.ಸಿ ಮತ್ತು ಆಹ್ವಾನಿತ ಅತಿಥಿಗಳನ್ನು ವೇದಿಕೆಯಲ್ಲಿ ಸನ್ಮಾನಿಸಲಾಯಿತು.

ಉದ್ಘಾಟನೆಗೊಂಡ ರಾಷ್ಟ್ರೀಯ ರೆಫರೆನ್ಸ್ ಸಿಮ್ಯುಲೇಶನ್ ಕೇಂದ್ರದಲ್ಲಿ ಡಿಸೆಂಬರ್ 5 ರಿಂದ 7 ರ ವರೆಗೆ ಮೂರು ದಿನಗಳ ಕಾಲ ಅಂತರರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದ್ದು, ಇಂಗ್ಲೆಂಡ್, ಆಸ್ಟ್ರೇಲಿಯಾ, ಸಿಂಗಪೂರ ದೇಶಗಳಿಂದ ನರ್ಸಿಂಗ್ ವಿಜ್ಞಾನದ ತಜ್ಞರು ಸಮ್ಮೇಳನದಲ್ಲಿ ವಿಶೇಷ ಉಪನ್ಯಾಸ ಮತ್ತು ಶಿಬಿರಾರ್ಥಿಗಳಿಗೆ ತರಬೇತಿ ನೀಡುವರು. ಕರ್ನಾಟಕ ಮತ್ತು ವಿವಿಧ ರಾಜ್ಯಗಳಿಂದ ಒಟ್ಟು 1000 ನರ್ಸಿಂಗ್ ಸಿಬ್ಬಂದಿ ತರಬೇತಿ ಪಡೆಯಲು ಆಗಮಿಸಿರುವರು.

ನಾಡಗೀತೆಯೊಂದಿಗೆ ಆರಂಭಗೊಂಡ ಕಾರ್ಯಕ್ರಮವನ್ನು ಜಾಸ್ಮಿನ್ ಡಿಸೋಜ ನಿರೂಪಿಸಿದರು ಮತ್ತು ಡಾ.ಶ್ರೀಹರ್ಷ ವಂದಿಸಿದರು. ಕಾರ್ಯಕ್ರಮದಲ್ಲಿ ಬಿ.ವಿ.ವಿ.ಸಂಘದ ಗೌರವಾನ್ವಿತ ಸದಸ್ಯರು, ವಿವಿಧ ಕ್ಷೇತ್ರಗಳ ಆಹ್ವಾನಿತ ಗಣ್ಯರು, ಅಂಗಸಂಸ್ಥೆಗಳ ಮುಖ್ಯಸ್ಥರು, ಮಾಧ್ಯಮ ಮಿತ್ರರು, ನರ್ಸಿಂಗ್ ಕಾಲೇಜುಗಳ ಮುಖ್ಯಸ್ಥರು, ಬೋಧಕರು ಮತ್ತು ವಿದ್ಯಾರ್ಥಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು. ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

## ಹೆಲಿಕಾಪ್ಟರ್ ಮೂಲಕ ಪುಷ್ಪಾರ್ಚನೆ



**ಲಿಂಗಸುಗೂರು:** ಕಸಬಾಲಿಂಗಸುಗೂರು ಆರಾಧ್ಯ ದೈವ ಕುಪ್ಪೆಭೀಮ ಶತಮಾನದ ರಥೋತ್ಸವ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಿಂದ ಜರುಗಿತು. ಕಳೆದ ನಾಲ್ಕು ದಿನಗಳಿಂದ ಹೋಮ, ಹವನ, ಪ್ರವಚನ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಗುರುವಾರ ಸಂಜೆ ಮಹಾರಥೋತ್ಸವ ಅದ್ದೂರಿಯಿಂದ ನಡೆಯಿತು.

ಹೆಲಿಕಾಪ್ಟರ್ ಮೂಲಕ ಪುಷ್ಪಾರ್ಚನೆ ರಥೋತ್ಸವದ ಶತಮಾನೋತ್ಸವದ ನಿಮಿತ್ಯ ಹೆಲಿಕಾಪ್ಟರ್ ಮೂಲಕ ಪುಷ್ಪಾರ್ಚನೆ ಮಾಡಲಾಯಿತು. ಸುತ್ತಮುತ್ತಲಿನ ಗ್ರಾಮಸ್ಥರೂ ಸೇರಿ, ನೆರೆಯ ತಾಲೂಕು, ಜಿಲ್ಲೆಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಭಕ್ತ ಸಮೂಹ ಮಹಾರಥೋತ್ಸವಕ್ಕೆ ಸಾಕ್ಷಿಯಾಯಿತು. ಶಾಸಕ ಮಾನಪ್ಪ ವಜ್ಜಲ್, ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪುರ, ಮಾಜಿ ಸಚಿವ ಅಮರೇಗೌಡ ಪಾಟೀಲ್ ಬಯ್ಯಾಪೂರ, ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿ, ತಹಸೀಲ್ದಾರ್, ಸತ್ಯಮ್ಮ ಸೇರಿ ವಿವಿಧ ರಾಜಕೀಯ ಪಕ್ಷದ ಮುಖಂಡರುಗಳು, ಹಿರಿಯರು, ಅಧಿಕಾರಿಗಳು ಇದ್ದರು.

# ಹಳ್ಳ ಹಿಡಿದ ಕೊಂಗಳಿ ಏತನೀರಾವರಿ

• **ಪರಶುರಾಮ ಕರಣಂ. ಭಾಲ್ಕಿ**

ಕೆಲಸ ಪೂರ್ಣಗೊಂಡಿದ್ದರೆ ತಾಲ್ಲೂಕಿನ ಕೆರೆಗಳು ಮೂರು ವರ್ಷದ ಹಿಂದೆಯೇ ಭರ್ತಿಯಾಗಿರುತ್ತಿದ್ದವು.

ಬರಪೀಡಿತ ಪ್ರದೇಶದ ರೈತರ ಬದುಕು ಹಸನಾಗಬಹುದಿತ್ತು. ಆದರೆ ಸರ್ಕಾರದ ನಿರ್ಲಕ್ಷ್ಯದಿಂದ ಸಣ್ಣ ನೀರಾವರಿ ಇಲಾಖೆಗೆ ಸೇರಿದ ₹180 ಕೋಟಿ ಅಂದಾಜು ವೆಚ್ಚದ 8 ಕೆರೆ ತುಂಬಿಸುವ ಮಹತ್ವಾಕಾಂಕ್ಷೆ ಯೋಜನೆಗೆ ಹಿಡಿದ ಗ್ರಹಣ ಮೋಕ್ಷ ಕಾಣದೆ ರೈತರು ಚಾತಕಪಕ್ಷಿಯಂತೆ ಕಾಯುವಂತಾಗಿದೆ.

ಹೌದು, ಕರ್ನಾಟಕ ನೀರಾವರಿ ನಿಗಮ ಲಿ. ಅಡಿಯಲ್ಲಿ ತಾಲ್ಲೂಕಿನ ಗೋವರ್ಧನ ತಾಂಡಾ ಸಮೀಪ ನಿರ್ಮಾಣಗೊಳ್ಳುತ್ತಿರುವ ಕೊಂಗಳಿ ಏತ ನೀರಾವರಿ ಯೋಜನೆಯ ಕಾಮಗಾರಿ ಎರಡು ವರ್ಷ ಕಾಲಾವಧಿಯಲ್ಲಿ 2020 ಮಾರ್ಚ್ 26 ಕ್ಕೆ ಮುಗಿಯಬೇಕಿದ್ದ ಈ ಯೋಜನೆ ಹೆಚ್ಚುವರಿ 68 ತಿಂಗಳು ಉರುಳಿದರೂ ಇನ್ನೂ ಮುಗಿದಿಲ್ಲ.

ತಾಲ್ಲೂಕಿನ 8 ಕೆರೆ ನೀರು ತುಂಬಿಸುವ ಯೋಜನೆಯ ಕಥೆ ವ್ಯಥೆ ಇದು.

ಕಳೆದ 5 ವರ್ಷಗಳ ಹಿಂದೆ ಯೋಜನೆ ನಿರ್ಮಿಸುವ ಟೆಂಡರ್ ಕೈಗೆತ್ತಿಕೊಂಡಿರುವ ಮಂಗಳೂರಿನ ಒಶಿಯನ್ ಕನಸ್ಟ್ರಕ್ಷನ್ ಕಂಪನಿಯ ಗುತ್ತಿಗೆದಾರರೊಂದಿಗೆ ಹಾಗೂ ಸಹಾಯಕ ಎಂಜಿನಿಯರ್ ಎಚ್.ಡಿ. ಪಾಟೀಲ ಮತ್ತು ಯೋಜನೆಗೆ ಸಂಬಂಧಿಸಿದ



ಇನ್ನಿತರ ಸಿಬ್ಬಂದಿಯವರೊಂದಿಗೆ ಸತತ ಕಾಮಗಾರಿ ಪೂರ್ಣಗೊಳಿಸಲು ಶಾಸಕ ಶರಣು ಸಲಗರ ಅವರು ದೂರವಾಣಿ ಮೂಲಕ ಸಂಪರ್ಕಿಸಿದರು. ಬಳಿಕ ವಿಧಾನ ಸಭೆಯಲ್ಲಿ ಹಲವು ಬಾರಿ ಮುಖ್ಯಮಂತ್ರಿ ಸೇರಿ ನೀರಾವರಿ ಇಲಾಖೆ ಸಚಿವರ ಗಮನಕ್ಕೆ ತಂದರು ಕೂಡಾ ಅವರ ಮಾತಿಗೆ ಬೆಲೆಯಿಲ್ಲದಂತಾಗಿದೆ. ಹೀಗಿದ್ದ ಮೇಲೆ ಜನರ ತೆರಿಗೆ ಹಣದ ನೂರಾರು ಕೋಟಿ ಹಣ ಹೊಳೆಯಲ್ಲಿ ಹೋಮ ಮಾಡಿದಂತಾಗಿದೆ ಎಂಬ ಅಸಮಾಧಾನ ರೈತರದು.

ರಾಜ್ಯದಲ್ಲಿ ಸಾವಿರಾರು ಕೋಟಿ ರೂಪಾಯಿ ವೆಚ್ಚದ ಬೃಹತ್ ನೀರಾವರಿ ಯೋಜನೆಗಳು ಎರಡು ವರ್ಷದೊಳಗೆ ಪೂರ್ಣಗೊಳ್ಳುತ್ತವೆ. ಆದರೆ, ಇದು ಏಕೆ ಪೂರ್ಣವಾಗಿಲ್ಲ. ನಿರಾಸಕ್ತಿ ಎದ್ದು ಕಾಣುತ್ತಿದೆ. ಗುತ್ತಿಗೆದಾರ ಯಾರೇ ಇರಲಿ. ಕಾಮಗಾರಿ ಸ್ಥಳದಲ್ಲೇ ಅವರು ಠಿಕಾಣಿ ಹೂಡಿ ಹಗಲು-ರಾತ್ರಿ ಕೆಲಸ ಮಾಡಬೇಕು' ಎಂದು ಶಾಸಕರಿಂದ 20 ತಿಂಗಳ ಹಿಂದೆ ಎಚ್ಚರಿಕೆ ನೀಡಿದರು. ಅವರ ಮಾತಿಗೆ ಬೆಲೆ ಇಲ್ಲದೇ 48 ತಿಂಗಳು ಕಳೆದರೂ ಕಾಮಗಾರಿ ಪೂರ್ಣಗೊಳ್ಳದೆ ಯಾವೊಬ್ಬ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡದೆ ಇರುವುದು ವಿಪರ್ಯಾಸ.

> ಗಡಿಭಾಗದ ರೈತರ ಸಮಸ್ಯೆ ಪರಿಹಾರಕ್ಕಾಗಿ ಕೊಂಗಳಿ ಏತನೀರಾವರಿ ಯೋಜನೆ ಅಂತಿಮ ಹಂತದಲ್ಲಿದೆ. ಈಗಾಗಲೇ 8 ಕೆರೆಗಳಿಗೆ ನೀರು ತುಂಬಿಸುವ ಕಾರ್ಯಕ್ಕೆ ಗೋವರ್ಧನ ತಾಂಡಾ ಬಳಿ ಜಾಕ್ ವೆಲ್ ನಿರ್ಮಿಸಿ ಮೋಟರ್ ಅಳವಡಿಸಲಾಗಿದೆ ಇದರಿಂದ ನೀರಾವರಿ ಸೌಲಭ್ಯ ದೊರೆಯಲಿದೆ.
>
> –ಸಂತೋಷ ಮಾಕಾ, ಎಇಇ ಕರ್ನಾಟಕ ನೀರಾವರಿ ನಿಗಮ ನೀರಾವರಿ ಇಲಾಖೆ, ಹುಮನಾಬಾದ

**ಕೆರೆಗಳು ಯಾವವು:** ಈಗಾಗಲೇ ತಾಲ್ಲೂಕಿನ 8 ಕೆರೆಗಳಿಗೆ ಕೊಂಗಳಿ ಏತ ನೀರಾವರಿ ಯೋಜನೆಯಲ್ಲಿ ನೀರು ತುಂಬಿಸುವ ಯೋಜನೆ ಚಾಲ್ತಿಯಲ್ಲಿದ್ದು ಆದರೆ ತಾಲ್ಲೂಕಿನ ಬೇಲೂರ, ಗುತ್ತಿ, ಮಿರಕಲ , ನಾರಾಯಣಪುರ, ತ್ರಿಪುರಾಂತ, ಬೇಟಬಾಲಕುಂದ, ಧನ್ನೂರ ಸೇರಿ 8 ಕೆರೆಗಳಿಗೆ ನೀರು ತುಂಬಿಸಬೇಕಿದೆ.

180 ಕೋಟಿ ರೂಪಾಯಿ ಯೋಜನೆ ವೆಚ್ಚ ಇರುವ ಕೊಂಗಳಿ ಏತನೀರಾವರಿ ಯೋಜನೆಯ ಅಡಿಯಲ್ಲಿ ಬರುವ 8 ಕೆರೆಗೆ ನೀರು ತುಂಬಿಸುವ ಮೂಲಕ ಸುತ್ತಲಿನ ಹಳ್ಳಿಗಳಲ್ಲಿ ಮಳೆಯಾಶ್ರಿತ ಸುಮಾರು 1500 ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೆಣಟಿಜಜಜಿಟಿಜಜರೆಯಲಿದೆ. ದನಕರುಗಳಿಗೆ, ನಾಗರಿಕರ ಕುಡಿಯುವ ನೀರಿನ ಸಮಸ್ಯೆ ಪರಿಹಾರ ಕಾಣಲಿದೆ.

ರೈತರ ಹಾಗೂ ಜನಸಾಮಾನ್ಯರ ಶ್ರೇಯೋಭಿವೃದ್ಧಿಗಾಗಿ ಸರ್ಕಾರ ಈ ಯೋಜನೆ ರೂಪಿಸಿದೆ. ಕಾಮಗಾರಿ ಶರವೇಗದಲ್ಲಿ ಸಾಗದೆ ಹಾಗೇ ಉಳಿದುಕೊಂಡಿದೆ. ಕೂಡಲೇ ಜಿಲ್ಲಾಡಳಿತ ಈ ವಿಷಯದ ಕುರಿತು ಗಮನಹರಿಸಬೇಕಾಗಿದೆ ಎಂದು ರೈತರ ಆಶಯವಾಗಿದೆ.

> ರಾಜ್ಯ ಸರ್ಕಾರ ಸಕಾಲದಲ್ಲಿ ಬಿಲ್ ಪಾವತಿ ಮಾಡಿದರೂ ಗುತ್ತಿಗೆದಾರ ಕೆಲಸವನ್ನೇ ಮಾಡದೆಯಿರುವುದು ಹಾಗೂ ನೀರಾವರಿ ಇಲಾಖೆ ನಿವೃತ್ ಎಂ.ಡಿ ಮಲ್ಲಿಕಾರ್ಜುನ ಗುಂಗೆ ಅವರೇ ನೆರ ಕಾರಣೀಭೂತರು ಅವರ ಈ ನಿರ್ಲಕ್ಷ್ಯಕ್ಕೆ ಮತ್ತೆಂಥ ಉದಾಹರಣೆ ಬೇಕು.
>
> –ಶರಣು ಸಲಗರ, ಶಾಸಕ

> ಬರ ಬಿದ್ದಾಗ ಕೆರೆಯಲ್ಲಿ ನೀರಿದ್ದರೆ ಕೊಳವೆಬಾವಿಗಳಿಗೆ ಹೆಚ್ಚಿನ ನೀರು ಬಂದು ಜನ ಜಾನುವಾರುಗಳ ಬದುಕಿಗೆ ಆಸರೆಯಾಗುತ್ತದೆ. ಈ ಯೋಜನೆ ಅನುಷ್ಠಾನಕ್ಕೆ ಬರುವ ಚಳಿಗಾಲ ಅಧಿವೇಶನದಲ್ಲಿ ಸ್ಥಳೀಯ ಶಾಸಕರು ಧ್ವನಿ ಎತ್ತಬೇಕು. ಶೀಘ್ರ ಕಾಮಗಾರಿ ಪೂರ್ಣಗೊಳ್ಳದಿದ್ದಲ್ಲಿ ಉಗ್ರ ಹೋರಾಟ ಮಾಡಲಾಗುವುದು.
>
> –ಮಲ್ಲಿಕಾರ್ಜುನ್ ಸ್ವಾಮಿ, ಜಿಲ್ಲಾಧ್ಯಕ್ಷರು ಕರ್ನಾಟಕ ರಾಜ್ಯ ರೈತ ಸಂಘ ಬೀದರ್

## ವಿಶ್ವ ಮಣ್ಣು ದಿನಾಚರಣೆ



**ಬಾಗಲಕೋಟೆ:** ಸಕಲ ಜೀವಾತ್ಮಗಳಿಗೂ ಅಗತ್ಯವಾಗಿರುವ ಮಣ್ಣಿನ ಫಲವತ್ತತೆ ಬಗ್ಗೆ ರೈತರು ವಿಶೇಷ ಗಮನಹರಿಸುವ ಅಗತ್ಯವಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ತೋಟಗಾರಿಕೆ ವಿಶ್ವವಿದ್ಯಾಲಯದ ಸಭಾಭವನದಲ್ಲಿ ತೋಟಗಾರಿಕೆ ವಿವಿ, ಕೃಷಿ ಇಲಾಖೆ, ಪಿಓಪಿ ಸೆಂಟರ್, ತೋಟಗಾರಿಕೆ ವಿವಿಯ ವಿಸ್ತರಣಾ ನಿರ್ದೇಶನಾಲಯ ಮತ್ತು ಪ್ಯಾರಾದೀಪ ಫಾಸ್ಪೇಟ್ಸ್ ಲಿಮಿಟೆಡ್ ಸಹಯೋಗದಲ್ಲಿ ಶುಕ್ರವಾರ ಹಮ್ಮಿಕೊಂಡ ವಿಶ್ವ ಮಣ್ಣು ದಿನಾಚರಣೆ ಹಾಗೂ ರೈತ ಉತ್ಪಾದಕರ ಸಂಸ್ಥೆಗಳಿಗೆ ವಿವಿಧ ಸಂಸ್ಥೆಗಳ ಜೊತೆಗೆ ಸಂಪರ್ಕ ಮತ್ತು ವ್ಯವಹಾರ ಅಭಿವೃದ್ಧಿ ತರಬೇತಿ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಉತ್ಪಾದಕರೇ ಹೆಚ್ಚು ಮಹತ್ವವಾಗಿದ್ದು, ಉತ್ಪಾದನೆ ಹೆಚ್ಚಳಕ್ಕೆ ತಂತ್ರಜ್ಞಾನ, ಅವಿಷ್ಕಾರ ಹಾಗೂ ರಾಸಾಯನಿಕಗಳ ಬಳಕೆ ಮಾಡುತ್ತಿರುವುದನ್ನು ನೋಡುತ್ತಿದ್ದೇವೆ. ಇದರ ಜೊತೆಗೆ ಬೆಳೆ ಪದ್ಧತಿ ಅನುಕರಣೆ ಮಾಡುತ್ತಿದ್ದಾರೆ. ಇದರ ನಡುವೆ ಮಣ್ಣಿನ ಗುಣಮಟ್ಟ ಕಡಿಮೆಯಾಗುತ್ತಿರುವ ಬಗ್ಗೆ ಗಮನಹರಿಸುತ್ತಿಲ್ಲ. ಇದರಿಂದ ಜಿಲ್ಲೆಯಲ್ಲಿ ಸಾಕಷ್ಟು ಜಮೀನು ಸವಳು, ಜವಳು ಆಗುತ್ತಿದೆ. ಈ ಬಗ್ಗೆ ಅವಲೋಕನ ಮಾಡಿಕೊಳ್ಳಬೇಕಿದೆ ಎಂದು ಕುರೇರ ಹೇಳಿದರು.

ದೇಶದಲ್ಲಿ ಒಂದೆಡೆ ಕೃಷಿಯಲ್ಲಿ ಪ್ರಗತಿ ಸಾಧಿಸಲಾಗುತ್ತಿದೆ. ಮತ್ತೊಂದೆಡೆ ಮಣ್ಣಿನ ಫಲವತ್ತತೆ ಕುಸಿಯುತ್ತಿದೆ. ಹಾಗಾಗಿ ಕೃಷಿಯಲ್ಲಿ ಪ್ರಗತಿಯ ಜೊತೆಗೆ ಮಣ್ಣಿನ ಫಲವತ್ತತೆ ಬಗ್ಗೆಯೂ ಮುತುವರ್ಜಿ ವಹಿಸುವುದು ಅವಶ್ಯವಾಗಿದೆ ಎಂದ ಸಿಇಓ, ಪ್ರತಿಯೊಬ್ಬ ರೈತರು ಆರೋಗ್ಯಯುತ ಮಣ್ಣಿನ ಸಂರಕ್ಷಣೆ ಬಗ್ಗೆ ತಿಳಿದುಕೊಂಡು ಪ್ರಗತಿಯತ್ತ ಸಾಗಬೇಕೆಂದು ಸಲಹೆ ನೀಡಿದರು. ಮುಖ್ಯ ಅತಿಥಿಗಳಾಗಿದ್ದ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಹಾಂತೇಶ ಹಟ್ಟಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ರೈತರಿಗೆ ಮಣ್ಣು ಆರೋಗ್ಯ ಕಾರ್ಡಗಳನ್ನು ಸಾಂಕೇತಿಕವಾಗಿ ವಿತರಿಸಲಾಯಿತು. ತರಬೇತಿ ಕಾರ್ಯಕ್ರಮದಲ್ಲಿ ಭೂ ಸಂಪನ್ಮೂಲ ಮಾಹಿತಿ ಕಾರ್ಡ ಸಬ್ದಳಕೆ, ರೈತರ ಉತ್ಪಾದಕರ ಸಂಸ್ಥೆಗಳಿಗೆ ತಾಂತ್ರಿಕ ಮಾಹಿತಿ, ಕರ್ನಾಟಕ ಬ್ಯಾಂಕ್ ವತಿಯಿಂದ ರೈತ ಉತ್ಪಾದಕ ಸಂಸ್ಥೆಗಳಿಗೆ ಲಭ್ಯವಿರುವ ಯೋಜನೆಗಳು ಮತ್ತು ಅಭಿವೃದ್ದಿ ಅವಕಾಶಗಳ ಕುರಿತು, ಸೆಲ್ಕೋ ಸೋಲಾರ ಸಂಸ್ಥೆಯಲ್ಲಿ ಲಭ್ಯವಿರುವ ಯೋಜನೆಗಳು ಹಾಗೂ ಅವಕಾಶಗಳ ಕುರಿತು ತಾಂತ್ರಿಕ ಮಾಹಿತಿ ನೀಡಲಾಯಿತು. ಜಂಟಿ ಕೃಷಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ರವೀಂದ್ರ ಹಕಾಟಿ, ತೋಟಗಾರಿಕೆ ವಿವಿಯ ಡೀನ್ ಡಾ.ತಮ್ಮಯ್ಯ, ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ವಿಭಾಗೀಯ ವ್ಯವಸ್ಥಾಪಕ ಪರಮೇಶ್ವರ ಗದ್ದೆ, ಪ್ಯಾರಾದೀಪ ಫಾಸ್ಪೇಟ್ಸ್ ಲಿಮಿಟೆಡ್‌ನ ಜಿಎಂ ಗಣೇಶ ಹೆಗ್ಡೆ, ಜನರಲ್ ಮ್ಯಾನೇಜರ ಆದರ್ಶ ಸೇರಿದಂತೆ ಎಫ್‌ಪಿಓ ಪ್ರತಿನಿಧಿಗಳಾದ ಮಲ್ಲನಗೌಡ ಪಾಟೀಲ, ಪ್ರಭು ಮುಗಳೊಳ್ಳಿ, ಮಂಜುನಾಥ ಇದ್ದರು.

## ದೇವೇಗೌಡರ ಹೋರಾಟವೇ ಸ್ಪೂರ್ತಿ

• **ಮಲ್ಲಮ್ಮ ನುಡಿ ಬೆಂಗಳೂರು**

ಜೆಡಿಎಸ್ ಪಕ್ಷಕ್ಕಾಗಿ ಇಳಿವಯಸ್ಸಿನಲ್ಲೂ ದೇವೇಗೌಡರ ಹೋರಾಟವೇ ನಮಗೇ ಕಾರ್ಯಕರ್ತರಿಗೆ ಇಂದಿಗೂ ಸ್ಪೂರ್ತಿ ಎಂದು ವಿಧಾನ ಪರಿಷತ್ತು ಸದಸ್ಯ ಟಿ ಎನ್ ಜವರಾಯಿಗೌಡ ಹೇಳಿದರು.

ಯಶವಂತಪುರ ಕ್ಷೇತ್ರದ ನಾಡಪ್ರಭುಕೆಂಪೇಗೌಡ ವಾರ್ಡನ ಜಿ ಹೊಸಹಳ್ಳಿ ಜೆಡಿಎಸ್ ವತಿಯಿಂದ ಅಯೋಜಿಸಿದ್ದ ಪ್ರಾದೇಶಿಕ ಜೆಡಿಎಸ್ ಪಕ್ಷಕ್ಕೆ 25 ವರ್ಷ ಗಳ ರಜತ ಮಹೋತ್ಸವ ಸಂಭ್ರಮದಲ್ಲಿ ವಿಧಾನ ಪರಿಷತ್ತು ಸದಸ್ಯ ಟಿ ಎನ್ ಜವರಾಯಿಗೌಡ ಭಾಗವಹಿಸಿ ಬೃಹತ್ ಕೇಕ್ ಕತ್ತರಿಸಿ ಕಾರ್ಯಕರ್ತರಿಗೆ ತಿನ್ನಿಸಿದರು ಹಾಗೂ ನೆರೆದಿದ್ದ ಸಾರ್ವಜನಕರಿಗೆ ಜಾಮೂನು ವಿತರಿಸಿದರು. ರಾಜ್ಯದಲ್ಲಿ ಆಡಳಿತ ರೂಡ ಪಕ್ಷದಿಂದ ಅಭಿವೃದ್ಧಿ ಕುಂಠಿತವಾಗಿದ್ದು ಜನಗಳು ರೋಸಿಹೋಗಿದ್ದಾರೆ ಮಂದಿನ ದಿನಗಳಲ್ಲಿ ಮಾಜಿ ಪ್ರಧಾನಿ ದೇವೇಗೌಡ್ರು ಹಾಗೂ ಕುಮಾರಣ್ಣ, ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಮತ್ತೆ ಜೆಡಿಎಸ್



ಪಕ್ಷ ಅಧಿಕಾರಕ್ಕೆ ಬರುವುದು ನಿಶ್ಚಿತ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಬಿಬಿಎಂಪಿ ಸದಸ್ಯ ಎ ಎಂ ಹನುಮಂತೇಗೌಡ್ರು, ಮುಖಂಡರಾದ ಸಂತೋಷ್ ಜವರಾಯಿಗೌಡ್ರು, ಹೆಚ್ ಸಿ ನಾರಾಯಣಪ್ಪ, ಹೆಚ್ ರಾಜಣ್ಣ, ಹೆಚ್ ಕೇಶವ, ಹೆಚ್ ಎನ್ ನವೀನ್, ಜಗಣ್ಣ, ಅರುಣ್ ಗೌಡ, ಬಿಬಿಎಂಪಿ ಪರಾಜಿತ್ ಅಭ್ಯರ್ಥಿ ಅರ್ ಗೋಪಾಲ್, ಡಾ.ಚೆಲುವರಾಜು, ಅಟೋಚಂದ್ರಣ್ಣ, ತಿಪ್ಪೇನಹಳ್ಳಿ ಮಂಜು, ಮಹಿಳಾ ಆದ್ಯಕ್ಷರಾದ ಸಾಕಮ್ಮ, ಡಿಗ್ರೂಪ್ ಲೇಔಟ್ ನ ಸತೀಶ್, ಚಂದ್ರಶೇಖರ್, ಲಿಂಗರಾಜು, ಕೆಂಪೇಗೌಡ ನಗರದ ರಂಗಸ್ವಾಮಿ, ರುದ್ರೇಶ್, ಹಾಗೂ ಹೊಸಹಳ್ಳಿ ಗ್ರಾಮದ ಜೆಡಿಎಸ್ ಮುಖಂಡರು, ಕಾರ್ಯಕರ್ತರು, ಗ್ರಾಮಸ್ಥರು, ಭಾಗವಹಿಸಿದ್ದರು.

## ಭತ್ತ ಬೆಂಬಲ ಬೆಲೆಗೆ ಬಿಜೆಪಿ ಆಗ್ರಹ

• **ಮಲ್ಲಮ್ಮ ನುಡಿ ಹಳಿಯಾಳ**

ಸರಕಾರದ ವೈಫಲ್ಯ ಖಂಡಿಸಿ ಬಿಜೆಪಿ ಘಟಕದಿಂದ ತಹಶೀಲ್ದಾರ್ ಕಚೇರಿ ವರಿಗೆ ಪ್ರತಿಭಟನೆ ಮಾಡುವ ಮೂಲಕ ತಹಶೀಲ್ದಾರ್ ಮನವಿ ಸಲ್ಲಿಸಿ ನಂತರ ಮಾತನಾಡಿದ ಬಿಜೆಪಿ ಮಾಜಿ ಶಾಸಕ ಸುನಿಲ್ ಹೆಗಡೆ ಸರಕಾರದ ವೈಫಲ್ಯ ಖಂಡಿಸಿ ಸರ್ಕಾರ ಗ್ಯಾರಂಟಿ ಯೋಜನೆಗಳಿಂದ ಬೊಕ್ಕಸ ದಿವಾಳಿ ಆಗಿದ್ದು ಯಾವುದೇ ರೀತಿ ರೈತರಿಗೆ ರೈತ ಬೆಳೆದ ಬೆಳೆಗಳಿಗೆ ಬೆಂಬಲ ಬೆಲೆ ನೀಡದೆ ಅಧಿಕಾರದ ಕುರ್ಚಿಗಾಗಿ ಕಿತ್ತಾಡುತ್ತಾ ಕಾಲ ಕಳೆಯುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸ್ಥಳೀಯ ಶಾಸಕರ ಯಾವುದೇ ಅಭಿವೃದ್ಧಿ ಕಾಣದೆ ಮಂತ್ರಿಗಿರಿಗಾಗಿ ಓಡಾಡುವುದನ್ನು ಖಂಡಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಮಾಜಿ ವಿಧಾನ ಪರಿಷತ್ ಸದಸ್ಯ ಎಸ್ ಎಲ್ ಘೊಟ್ನೇಕರ್ಯ ಯಾವತ್ತು ನಾನು ಬಿಜೆಪಿ ಪಕ್ಷದಿಂದ ಕಾಂಗ್ರೆಸ್ ಪಕ್ಷಕ್ಕೆ ಹೋಗುವುದಿಲ್ಲ ಇದೆಲ್ಲ ಊಹಾಪೋಹ ಇದಕ್ಕೆ



ನಾನು ಖಂಡಿಸುತ್ತೇನೆ ಯಾವಾಗಲೂ ಬಿಜೆಪಿ ಪಕ್ಷದ ಜೊತೆಗೆ ಇದ್ದು ಬಿಜೆಪಿ ಕಾರ್ಯಕರ್ತರು ಹಾಗೂ ರೈತರ ಹೋರಾಟಕ್ಕೆ ಬೆಂಬಲಿಸುತ್ತೇನೆ ಎಂದರು..

ಈ ಸಂದರ್ಭದಲ್ಲಿ ಮುಖಂಡರಾದ ಮಂಗೇಶ್ ದೇಶಪಾಂಡೆ ಹಳಿಯಾಳ, ದಾಂಡೇಲಿ, ಜೊಯಿಡಾ, ತಾಲೂಕಾ ಮಂಡಲ ಅಧ್ಯಕ್ಷರಾದ ವಿಠ್ಠಲ್ ಸಿದ್ದಣ್ಣವರ್ ಬುದ್ಧಿವಂತ ಪಾಟೀಲ್ ಪ್ರಧಾನ ಕಾರ್ಯದರ್ಶಿ ಸಂತೋಷ್ ಘಟಕಾಂಬಳೆ ಹಾಗೂ ಪಕ್ಷದ ಮಹಿಳಾ ಮುಖಂಡರು ಕಾರ್ಯಕರ್ತರು ಭಾಗಿಯಾಗಿದ್ದರು.

## ಜೈಕಾರದೊಂದಿಗೆ ಹನುಮ ಜಯಂತಿಯ ಅದ್ದೂರಿ ಮೆರವಣಿಗೆ

• **ಮಲ್ಲಮ್ಮ ನುಡಿ ಹುಣಸೂರು**

ಹನುಮಂತೋತ್ಸವ ಸಮಿತಿ ಮತ್ತು ಅಂಜನಾದ್ರಿ ಟ್ರಸ್ಟ್ ವತಿಯಿಂದ ಅಯೋಜಿಸಿದ್ದ ಹನುಮ ಜಯಂತಿಯ ಹನುಮಂತೋತ್ಸವ ಅದ್ದೂರಿ ಮೆರವಣಿಗೆ ಹುಣಸೂರಿನಲ್ಲಿ ಸಾವಿರಾರು ಹನುಮ ಭಕ್ತರ ಜೈಕಾರದೊಂದಿಗೆ ಅದ್ದೂರಿಯಾಗಿ ನಡೆಯಿತು.

ನಗರದದ್ಯಾಂತ ಹನುಮನ ಬಾವುಟವನ್ನು ಹೊಂದಿದ್ದ ಕೇಸರಿ ಧ್ವಜಗಳು ನಗರದೆಲ್ಲೆಡೆ ರಾರಾಜಿಸಿದವು. ಈ ಬಾರಿಯ ಮೆರವಣಿಗೆಯಲ್ಲಿ ರಾಜಕಾರಣಿಗಳು, ಹಾಗೂ ಗಣ್ಯರ ಉಪಸ್ಥಿತಿ ಹಿ ಯುವಕರ ಉತ್ಸಾಹಕ್ಕೆ ಇನ್ನಷ್ಟು ಇಮ್ಮಡಿಗೊಳಿಸಿದ್ದು ವಿಶೇಷವಾಗಿತ್ತು

ನಗರದ ರಂಗನಾಥ ಬಡಾವಣೆಯಲ್ಲಿ ಸಂಸದರಾದ ಯಾಧುವೀರ್ ಒಡೆಯರ್, ಶಾಸಕರಾದ ಜಿ.ಡಿ.ಹರೀಶ್ ಗೌಡ, ಮಾಜಿ ಶಾಸಕರಾದ ಹೆಚ್.ಪಿ. ಮಂಜುನಾಥ್ ಉಪವಿಭಾಗಧಿಕಾರಿ ಮಂಜುನಾಥ್, ತಾಹಸಿಲ್ದಾರ್ ಮಂಜುನಾಥ್, ಗಾವಡಗೆರೆ ಗುರುಲಿಂಗ ಜಂಗಮ



ಮಠದ ನಟರಾಜ ಸ್ವಾಮಿಜಿ, ಮಾದಳ್ಳಿ ಉಕ್ಕಿನಕಂತ್ತೆ ಮಠದ ಸಾಂಬಸದಾಶಿವ ಸ್ವಾಮಿಜಿ, ಪೌರಾಯುಕ್ತೆ ಮಾನಸ, ಸೇರಿದಂತ್ತೆ ವಿವಿದ ಗಣ್ಯರಿಂದ ಮೊದಲು ದರ್ಮ ಜ್ಯೋತಿ ಬೆಳಗಿಸಿ ನಂತರ ನಂದಿಕಂಬಕ್ಕೆ ಪೂಜೆ ಸಲ್ಲಿಸಿ ಅನಂತರ ಉತ್ಸವ ಮೂರ್ತಿ ಹನುಮನಿಗೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿ ಮೆರವಣಿಗೆಗೆ ವಿದ್ಯುಕ್ತವಾಗಿ ಚಾಲನೆ ನೀಡಿದರು.

ವಾಣಿಜ್ಯೋದ್ಯಮಿಗಳು ತಮ್ಮ ನಗರದ ಪ್ರಮುಖ ರಸ್ತೆಗಳ ಅಂಗಡಿ ಮುಂಗಟುಗಳನ್ನು ಬಂದ್ ಮಾಡಿ. ವಿಶೇಷವಾಗಿ ಪ್ರಮುಖ ರಸ್ತೆಗಳಲ್ಲಿ ದಾಸೋಹ ಏರ್ಪಡಿಸಲಾಗಿತ್ತು ಮೆರವಣಿಗೆಗೆ ಸಹಕಾರ ನೀಡಿದರು ಇದು ಈ ಬಾರಿಯ ವಿಶೇಷವಾಗಿ ಎಲ್ಲರು ಜಾತಿ ಮತ ದರ್ಮ ಎನ್ನದೆ ಎಲ್ಲರು ಸಹಕಾರ ನೀಡಿ ಸೌಹಾರ್ದತೆ ಮೆರದರು.

ಮೆರವಣಿಗೆಯಲ್ಲಿ ತಾಲೂಕು ಹನುಮಂತೋತ್ಸವ ಸಮಿತಿ ಅಧ್ಯಕ್ಷ ವಿ.ಎನ್.ದಾಸ್, ಶ್ರೀರಾಮಸೇನೆಯ ಜಿಲ್ಲಾಧ್ಯಕ್ಷ ಅನಿಲ್‌ಕುಮಾರ್, ಉಪಾಧ್ಯಕ್ಷರಾದ ಎಚ್. ವೈ.ಮಹದೇವ್, ಕಾರ್ಯದರ್ಶಿ ಗಿರೀಶ್, ಮುಖಂಡರಾದ ನಾಡಪ್ಪನಹಳ್ಳಿ ರಾಜು, ಉದ್ಯಮಿ ಕೃಷ್ಣ, ಸತೀಶ್ ಪಾಪಣ್ಣ, ಬಿ.ಎಸ್.ಯೋಗಾನಂದ ಕುಮಾರ್, ಸುಧಾಕರ್, ಮಾಣಟಿಜಜಜಿಟಿಜಜಜಿ, ನಗರಸಭೆ ಸದಸ್ಯ, ಗಣೇಶ್ ಕುಮಾರಸ್ವಾಮಿ, ರಮೇಶ್ ವಿವೇಕನಂದ, ಹರೀಶ್, ಕೃಷ್ಣರಾಜಗುಪ್ತ, ಗಿರೀಶ್, ಅನೀಲ್, ಸುದಾಕರ್, ದೀಪು, ಪೂರ್ವಜ್, ಯೋಗೆಶ್, ರಾಮಣ್ಣ, ಸೇರಿದಂತ್ತೆ ನೂರಾರು ಮುಖಂದರು ಬಾಗವಹಿಸಿದರು.

ಮೆರವಣಿಗೆಯ ಬಂದು ಬಸ್ತ್ ಉಸ್ತುವಾರಿಯಲ್ಲಿ ಎಸ್.ಪಿ.ವಿಷ್ಣುವರ್ದನ್, ಎ.ಎಸ್.ಪಿ ಗಳಾದ ನಾಗೇಶ್, ಎಂ.ಎಸ್.ಶಸಿಧರ್, ಮಲೀಕ್ ಡಿ.ವೈ.ಎಸ್.ಪಿ ರವಿ. ಸರ್ಕಲ್ ಇನ್ಸೆಕ್ಟರ್ ಸಂತೋಷ್ ಕಾಶಪ್ಪ, ಮಹೇಶ್, ಸೇರಿದಂತ್ತೆ ಹಲವು ಅಧಿಕಾರಿಗಳು ಕಾರ್ಯ ನಿರ್ವಹಿಸಿ ಶಾಂತಿಯುತ ಮೆರವಣಿಗೆಗೆ ಶ್ರಮಿಸಿದರು.

## ಭತ್ತದ ಹುಲ್ಲಿನ ಬಣವೆಗೆ ಬೆಂಕಿ



**ಮಸ್ಕಿ :** ತಾಲ್ಲೂಕಿನ ಗುಡದೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮೇರನಾಳ ಗ್ರಾಮದಲ್ಲಿ ಬುಧವಾರದಂದು ಮಧ್ಯಾಹ್ನ 2:00ಯ ಸುಮಾರಿಗೆ ಆಕಸ್ಮಿಕವಾಗಿ ಅಗ್ನಿ ಅವಘಡದಲ್ಲಿ ಭತ್ತದ ಹುಲ್ಲಿನ ಬಣವೆ ಭಸ್ಮವಾಗಿದೆ. ಈ ಬಾರಿ ಬೇಸಿಗೆಯ ಎರಡನೇ ಬೆಳೆಗೆ ನೀರು ಇಲ್ಲದ ಕಾರಣ ಭತ್ತದ ಹುಲ್ಲಿಗೆ ಬೇಡಿಕೆ ಹೆಚ್ಚಾಗಿದ್ದು ಮೇರನಾಳ ಗ್ರಾಮದ ರೈತರದ ವಾಜಿದ್ ಎಂಬುವವರು 8 ಎಕ್ಕರೆ ಜಮೀನಿನಲ್ಲಿ ಭತ್ತ ಬೆಳೆದಿದ್ದು ಭತ್ತದ ಕಟಾವು ಮುಗಿದ ನಂತರ 7 ಟ್ರಾಕ್ಟರ್ ಗೂ ಅಧಿಕ ಭತ್ತದ ಹುಲ್ಲಿನ ಹೊರೆಯ ಬಣವೆ (ಹುಲ್ಲು ಬೊನೆ) ಸಂಗ್ರಹಿಸಿಟ್ಟಿದ್ದರು. ಬುಧವಾರದಂದು ಮಧ್ಯಾಹ್ನದ ವೇಳೆಗೆ ಆಕಸ್ಮಿಕವಾಗಿ ಹುಲ್ಲಿಗೆ ಬೆಂಕಿ ಹೊತ್ತಿಕೊಂಡಿದ್ದು. ಸ್ಥಳೀಯವಾಗಿ ಇದ್ದ ಅನೇಕ ವ್ಯಕ್ತಿಗಳು ಅಗ್ನಿಶಾಮಕ ಠಾಣೆಗೆ ದೂರವಾಣಿ ಸಂಪರ್ಕದ ಮೂಲಕ ಮಾಹಿತಿ ನೀಡಿದ್ದು ಸಿಂಧನೂರು ತಾಲೂಕಿನ ಅಗ್ನಿಶಾಮಕ ದಳದ ಠಾಣೆಯಿಂದ ಸಿಬ್ಬಂದಿಗಳು ಆಗಮಿಸಿ ಬೆಂಕಿಯನ್ನು ನಿಂದಿಸಿದ್ದಾರೆ.

# 72 ನೇ ವಸಂತ, ಅಭಿಮಾನಿಗಳಲ್ಲಿ ಸಂತಸ

### ಕೊಡಗೈದಾನಿ, ಮಾಜಿ ಶಾಸಕ ನಾರಾ ಸೂರ್ಯನಾರಾಯಣ ರೆಡ್ಡಿ ಜನುಮದಿನ

• **ಮಲ್ಲಮ್ಮ ನುಡಿ ಬಳ್ಳಾರಿ**

ಯಾವುದೇ ಕ್ಷೇತ್ರದಲ್ಲೂ ತಾವು ದುಡಿದ ಹಣದಲ್ಲಿ ದಾನ, ಧರ್ಮ ಮಾಡುತ್ತ ವಿಶಿಷ್ಟವಾದ ಸಮಾಜ ಸೇವೆಯನ್ನು ಮಾಡುತ್ತಿದೆ. ಕೊಡಗೈದಾನಿ, ಮಾಜಿ ಶಾಸಕ ನಾರಾ ಸೂರ್ಯನಾರಾಯಣ ರೆಡ್ಡಿ. ಅವರೂ ಕೂಡ ಜೊತೆಯಲ್ಲಿರುವವರೆಲ್ಲರನ್ನೂ ಬೆಳೆಸಿ ಉನ್ನತ ಮಟ್ಟದ ಸಮಾಜ ನಿರ್ಮಾಣಕ್ಕೆ ಕಾರಣರಾದವರು. ಇಂದಿಗೂ ತಮ್ಮ ಬಳಿ ಯಾರೇ ಬರಲಿ ಕೈಲಾದಷ್ಟು ನೆರವು, ಸಹಾಯ ಮಾಡುತ ಯಶಸ್ವಿಯಾಗಿ ಇಂದು 72 ವಸಂತವನ್ನು ಪೂರೈಸಿ ಜನರ ಪ್ರೀತಿ ಆಶೀರ್ವಾದಕ್ಕೆ ಸಕಾರಣರಾಗಿದ್ದಾರೆ.

ಕಳೆದ ಹಲವಾರು ದಶಕಗಳಿಂದಲೂ ಇವರು ಸಮಾಜಮುಖಿಯಾಗಿ ಕೆಲಸ ಮಾಡುವ ಮೂಲಕ ಗ್ರಾಮೀಣ ಪ್ರದೇಶದ ಮನೆ ನಗರದಲ್ಲಿದ್ದರೂ ಇವರ ಮನಃಸ್ಥಿತಿ ಮಾತ್ರ ಹಳ್ಳಿಯ ಕಡೆಗೆ ಯಾವಾಗಲೂ ಹರಿದಾಡುತ್ತಿದೆ. ಹಳ್ಳಿಯ ಜನರು ಉದ್ಧಾರ ಆಗಬೇಕು.

**ತಂದೆಯಂತೆಯೇ ಮಗ...**

ಕಳೆದ 2023 ಮೇ ನಲ್ಲಿ ನಡೆದ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಬಳ್ಳಾರಿ ನಗರ ಕ್ಷೇತ್ರದಿಂದ ಅಚ್ಚರಿಯ ಸ್ವರೂಪದಲ್ಲಿ ಗೆದ್ದು ಬೀಗಿದ ನಾರಾ ಭರತ್ ರೆಡ್ಡಿ ತಂದೆಯವರಂತೆಯೇ ಮಗ



ಎನ್ನುವ ಅಭಿದಾನಕ್ಕೆ . ಭರತ್ ರೆಡ್ಡಿ ಅವರಲ್ಲಿ ತಂದೆಯ ಎಲ್ಲ ಸಾಮಾಜಿಕ ಸೇವಾ ಗುಣಗಳು ಮೈಗೂಡಿವೆ. ಹೀಗಾಗಿ ಅವರು ಶಾಸಕರಾಗಿ ಬರುವ ಮೊದಲು ಸಮಾಜ ಸೇವೆ ಮಾಡುತ್ತಲೇ ಜನರ ಪ್ರೀತಿಗೆ ಪಾತ್ರರಾಗಿದ್ದಾರೆ.

ಟಚ್ ಫಾರ್ ಲೈಫ್ ಫೌಂಡೇಷನ್ ಸ್ಥಾಪಿಸುವ ಮೂಲಕ ಹಸಿದವರಿಗೆ ಅನ್ನ ಸೇರಿದಂತೆ ಎಲ್ಲ ಅಧಿವೇಶನದಲ್ಲಿ ವಿಷಯ ಮಂಡನೆ ಮಾಡಲು ತೆರಳಲು ಅಣಿಯಾಗಿದ್ದಾರೆ. ತಂದೆ ಮತ್ತು ಮಗನ ಸಮಾಜ ಸೇವೆ ಸಧ್ಯಕ್ಕೆ ಎಲ್ಲ ರಾಜಕಾರಣಿಗಳಿಗೆ ಪ್ರೇರಣೆ ನೀಡಿದೆ ಎಂದರೆ ಅತಿಶಯೋಕ್ತಿ ಏನೂ ಅಲ್ಲ. ತಂದೆಯಂತೆಯೇ ಮಗನೂ ಸಮಾಜಮುಖಿ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ.

**ಅಭಿಮಾನಿಗಳ ಪಾಲಿನ ಅನ್ನದಾತರು...**

ನಾರಾ ಸೂರ್ಯನಾರಾಯಣ ರೆಡ್ಡಿ ಅನ್ನದಾತರೆಂದೇ ಚಿರಪರಿಚತರು ಇವರ ದೈವೀಕ ನಂಬಿಕೆ ಇತರರಿಗೆ ಅನುಕರಣೆಯ ಕೆರೆಯ ನೀರನ್ನು ಕೆರೆಗೆ ಚೆಲ್ಲ ಎನ್ನುವ ಸ್ವಭಾವದವರು ತಾವು ದುಡಿದ ಹಣದಲ್ಲಿ ದಾನ ಧರ್ಮಕ್ಕೆಂದೇ ಹಣ ಮೀಸಲು ಇಟ್ಟಿದ್ದಾರೆ. ಪ್ರತಿವರ್ಷ ಗ್ರಾಮದೇವತೆಯರಿಗೆ ಪೂಜೆ ಸಲ್ಲಿಸಿ, ಹಳ್ಳಿಗಳ ಉದ್ದಾರಕ್ಕೆ ಪ್ರಾರ್ಥಿಸಿ ಅನ್ನದಾನ ಮಾಡುತ್ತಿದ್ದಾರೆ. ಮಂತ್ರಾಲಯದ ಶ್ರೀರಾಘವೇಂದ್ರ ಸ್ವಾಮಿಗಳ ಪರಮ ಭಕ್ತರಾಗಿರುವ ಇವರು ಕಾರ್ಯಕ್ರಮಗಳ ಅನುಷ್ಠಾನಕ್ಕೆ ನೆರವಾಗಿದ್ದಾರೆ. ಅನೇಕ ದೇವಾಲಯಗಳ ಅಭಿವೃದ್ಧಿಗೆ ಹಣಕಾಸಿನ ನೆರವು ನೀಡಿದ್ದಾರೆ. ಜನರಲ್ಲಿ ಧರ್ಮ ಜಾಗೃತಿ ಮೂಡಿಸುತ್ತಾ ಸಮನ್ವಯತೆ ಸಾಧಿಸುತ್ತಿದ್ದಾರೆ. ಹೀಗಾಗಿ ಸೂರ್ಯ ನಾರಾಯಣರೆಡ್ಡಿ ಅವರು ಯಾವುದೇ ಪ್ರಭಾವಿ ರಾಜ ಕಾರಣಿಗಳಿಗಿಂತ ಪಡಿಮೆ ಇಲ್ಲದೇ ತಮ್ಮ ಛಾಪನ್ನು ಜನಮಾನಸದಲ್ಲಿ ಮಾಡಿಸಿಕೊಂಡಿದ್ದಾರೆ. ಅತ್ಯಂತ ಜನಪ್ರಿಯ ವ್ಯಕ್ತಿಗಳಾಗಿ ಹೊರ ಹೊಮ್ಮಿದ್ದಾರೆ ತಮ್ಮ ಸುದೀರ್ಘ ರಾಜಕೀಯ ಹಾಗೂ ಸಾಮಾಜಿಕ ಸೇವೆಯಲ್ಲಿ ಯಾವುದೇ ತಪ್ಪು ಮತ್ತೆ ಇಲ್ಲದೇ ಉತ್ತಮ ನಾಯಕರಾಗಿ ಗುರುತಿಸಿಕೊಂಡಿದ್ದಾರೆ. ಇವರು ಕೇವಲ ಕರ್ನಾಟಕ ಮಾತ್ರವಲ್ಲದೇ ಆಂಧ್ರಪ್ರದೇಶದಲ ಖ್ಯಾತರಾಗಿದ್ದು, ಉಭಯ ಭಾಷಿಕರ ಜನರ ಪ್ರೀತಿಗೆ ಪಾತ್ರ ರಾಗಿದ್ದಾರೆ ಯಾವುದೇ ಕಳಾಂಕ ಇಲ್ಲದ ವ್ಯಕ್ತಿತ್ವ ರೂಡಿಸಿಕೊಂಡಿರುವ ನಾರಾ ಸೂರ್ಯನಾರಾಯಣ ರೆಡ್ಡಿ ಇತರರಿಗೆ ಮಾದರಿ.

ಇಂದು ಇವರ ಹುಟ್ಟು ಹಬ್ಬದ ನಿಮಿತ್ತ ಬಳ್ಳಾರಿ ನಗರವೂ ಸೇರಿದಂತೆ ಕುರುಗೋಡು, ಕಂಪ್ಲಿ, ಕೊಪ್ಪಳ ಮತ್ತು ಆಂಧ್ರಪ್ರದೇಶದ ಹೋಮ, ಹವನಗಳು ನಡೆಯುತ್ತಿವೆ. ಇವರ ಅಭಿಮಾನಿಗಳು ಸಹಿತ ತಮ್ಮ ನೆಚ್ಚಿನ ನಾಯಕನ ಹುಟ್ಟು ಹಬ್ಬದ ನಿಮಿತ್ತ ವಿವಿಧ ಸಾಮಾಜಿಕ ಕಾರ್ಯದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.